ಸಂಪುಟ: 22, ಸಂಚಿಕೆ: 122, ಪುಟಗಳು: 8, ಸೋಮವಾರ, 10 ಫೆಬ್ರವರಿ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

**ಸುಭಾಷಿತ**

ಒಬ್ಬ ವ್ಯಕ್ತಿಯನ್ನು, ಪದೇ ಪದೇ ಕ್ಷಮಿಸಬಹುದು. ಆದರೆ ಪದೇ ಪದೇ ನಂಬಬಾರದು.

**ಪಂಚಾಂಗ**

(ಸೋಮವಾರ 10, ಫೆಬ್ರವರಿ-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಮಾಘ ಮಾಸ, ಶುಕ್ಲ ಪಕ್ಷ
- ನಕ್ಷತ್ರ: ಪುನರ್ವಸು
- ವಾರ: ಸೋಮವಾರ, ತಿಥಿ: ತ್ರಯೋದಶಿ
- ರಾಹುಕಾಲ: 8.14 ರಿಂದ 9.42
- ಗುಳಿಕಕಾಲ: 2.05 ರಿಂದ 3.33
- ಯಮಗಂಡಕಾಲ: 11.10 ರಿಂದ 12.37



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines



## ಸಂಕ್ಷಿಪ್ತ ಸುದ್ದಿ

### ಮದುವೆಯಾಗಲು ಪ್ರಿಯತಮೆ ನಿರಾಕರಣೆ ಯುವಕ ಆತ್ಮಹತ್ಯೆ

**ಹಾಸನ:** ಮದುವೆಯಾಗಲು ಪ್ರಿಯತಮೆ ನಿರಾಕರಿಸಿದ್ದಕ್ಕೆ ವಿಷ ಸೇವಿಸಿ ಯುವಕ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹಾಸನ ಜಿಲ್ಲೆ ಅರಸೀಕೆರೆ ತಾಲೂಕಿನ ಬೈರಾಗೊಂಡನಹಳ್ಳಿ ಗ್ರಾಮದಲ್ಲಿ ನಡೆದಿದೆ.



ದರ್ಶನ್ (22) ಆತ್ಮಹತ್ಯೆಗೆ ಶರಣಾದ ಯುವಕ. ದರ್ಶನ್ ಗಂಡಸಿ ಹೋಬಳಿ ಬೇವಿನಹಳ್ಳಿಯಲ್ಲಿರುವ ಅಜ್ಜಿ ಮನೆಯಿಂದ ಕಾಲೇಜಿಗೆ ತೆರಳುತ್ತಿದ್ದ ವೇಳೆ ಬೇವಿನಹಳ್ಳಿ ಗ್ರಾಮದ ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದ. ಐದಾರು ವರ್ಷಗಳಿಂದ ಪರಸ್ಪರ ಪ್ರೀತಿಸಿ ಜೊತೆಯಲ್ಲಿ ಓಡಾಡಿದ್ದರು. ಬಿಎ ಮುಗಿಸಿ ವ್ಯವಸಾಯ ಮಾಡುತ್ತಿದ್ದ ದರ್ಶನ್ ಯುವತಿಗೆ ಮದುವೆಯಾಗೋಣ ಎಂದಿದ್ದ. ಆದರೆ ಯುವತಿ ಮದುವೆಗೆ ನಿರಾಕರಿಸಿದ್ದಾಳೆ.

ಪುಟ 2

### ಮಾಂಸ ಕೊಡಲು ನಿರಾಕರಿಸಿದ್ದಕ್ಕೆ ಅಂಗಡಿ ಎದುರು ಕೊಳೆತ ಶವ ಎಸೆದ ವ್ಯಕ್ತಿ



**ನವದೆಹಲಿ:** ಮಾಂಸ ಕೊಡಲು ನಿರಾಕರಿಸಿದ್ದಕ್ಕೆ ಮಾಂಸದ ಅಂಗಡಿ ಎದುರು ವ್ಯಕ್ತಿಯೊಬ್ಬ ಕೊಳೆತ ಶವವನ್ನು ಎಸೆದಿರುವ ಘಟನೆ ತಮಿಳುನಾಡಿನ ಪಳನಿ ಚೆಟ್ಟಿಪಟ್ಟಿಯಲ್ಲಿ ನಡೆದಿದೆ. ಮಾಂಸ ಕೊಟ್ಟಿಲ್ಲ ಎನ್ನುವ ಕೋಪಕ್ಕೆ ಶವವನ್ನು ಅಂಗಡಿ ಎದುರು ಎಸೆದಿದ್ದಾರೆ. ಕುಮಾರ್ ಎಂಬಾತ ಸ್ಮಶಾನದಲ್ಲಿ ಕೆಲಸ ಮಾಡುತ್ತಿದ್ದ, ಮಣಿಯರಸನ್ ನಡೆಸುತ್ತಿದ್ದ ಅಂಗಡಿಯಲ್ಲಿ ಕಾಯಂ ಗ್ರಾಹಕನಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಭಾನುವಾರ ಕುಮಾರ್ ಅಂಗಡಿಗೆ ಹೋಗಿ ಮಾಂಸ ಕೇಳಿದ್ದ, ಆದರೆ ಮಣಿಯರಸನ್ ಆತನಿಗೆ ಮಾಂಸ ಕೊಡುವುದಿಲ್ಲ ಎಂದು ಹೇಳಿದ್ದರು.

ಪುಟ 2



## ನಾಲ್ಕು ಪ್ರಮುಖ ಡೈರಿ ಮುಖ್ಯಸ್ಥರ ಬಂಧನ

### ತಿರುಮಲ ಲಡ್ಡು ಪ್ರಸಾದ ವಿವಾದಕ್ಕೆ ಮೇಜರ್ ಟ್ವಿಸ್ಟ್

**ತಿರುಮಲ:** ಹಿಂದೂಗಳ ಖ್ಯಾತ ಪವಿತ್ರ ಯಾತ್ರಾತಾಣ ತಿರುಪತಿ ತಿರುಮಲದಲ್ಲಿ ನಡೆದಿದೆ ಎನ್ನಲಾದ ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬು ಮಿಶ್ರಣ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖಾಧಿಕಾರಿಗಳು ಭಾನುವಾರ ನಾಲ್ವರನ್ನು ಬಂಧಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಆದೇಶದ ಮೇರೆಗೆ ತನಿಖೆ ನಡೆಸಿದ್ದ ಹೈದರಾಬಾದ್ ವಿಭಾಗದ ಜಂಟಿ ನಿರ್ದೇಶಕ ವೀರೇಶ್ ಪ್ರಭು, ವಿಶಾಖಪಟ್ಟಣಂ ಸಿಬಿಐ ಎಸ್ಪಿ ಮುರಳೀರಾಂಬ, ವಿಶಾಖಪಟ್ಟಣಂ ಡಿಐಜಿ ಗೋಪಿನಾಥ್ ಜೆಟ್ಟಿ, ಗುಂಟೂರು ಐಜಿ ಸರ್ವಶ್ರೇಷ್ಠ ತ್ರಿಪಾಠಿ ಮತ್ತು ಎಫ್ಎಸ್ಎಸ್ಎಐ ಅಧಿಕಾರಿ ಸತ್ಯಕುಮಾರ್ ಪಾಂಡಾ ನೇತೃತ್ವದ ತಂಡ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.

ಪುಟ 2

# ಏರ್ ಶೋಗೆ ಚಾಲನೆ

## 'ಏರೋ ಇಂಡಿಯಾ 2025'ಗೆ ರಕ್ಷಣಾ ಸಚಿವ ರಾಜನಾಥ ಸಿಂಗ್ ಚಾಲನೆ

**ಬೆಂಗಳೂರು:** ಏರೋ ಇಂಡಿಯಾ -2025 ವೈಮಾನಿಕ ಪ್ರದರ್ಶನಕ್ಕೆ ಅದ್ದೂರಿ ಚಾಲನೆ ಸಿಕ್ಕಿದೆ. ಇಂದಿನಿಂದ ಏರ್ ಶೋ ಆರಂಭವಾಗಿದ್ದು, ಬೆಂಗಳೂರು ಏರ್ ಶೋ ಏಷ್ಯಾದಲ್ಲೇ ಅತ್ಯಂತ ದೊಡ್ಡ ಏರ್ ಶೋ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಬೆಂಗಳೂರಿನ ಯಲಹಂಕದಲ್ಲಿ 'ಏರೋ ಇಂಡಿಯಾ 2025'ಗೆ ರಕ್ಷಣಾ ಸಚಿವ ರಾಜನಾಥ ಸಿಂಗ್ ಅಧಿಕೃತ ಚಾಲನೆ ನೀಡಿದರು.

ನಂತರ ಮಾತನಾಡಿದ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರು, ಅಲ್ಲಿ ಮಹಾಕುಂಭ ಮೇಳ ನಡೆಯುತ್ತಿದೆ. ಇಲ್ಲಿ ಏರೋ ಇಂಡಿಯಾ ಮಹಾಕುಂಭ ನಡೆಯುತ್ತಿದೆ. ಒಂದು ಕಡೆ ಪರಂಪರೆ, ಸಂಸ್ಕೃತಿಯ ಮಹಾಕುಂಭ ಆಗುತ್ತಿದೆ. ಇನ್ನೊಂದು ಕಡೆ ಅತ್ಯಾಧುನಿಕ, ತಂತ್ರಜ್ಞಾನದ ಯುದ್ಧೋಪಕರಣ, ವಿಮಾನಗಳಗಳ ಮಹಾಕುಂಭ ನಡೆಯುತ್ತಿದೆ ಎಂದು ಹೇಳಿದರು.

ಹೊಸ ಸವಾಲುಗಳಿಗೆ ಉತ್ತರ ಹುಡುಕುವ ಕಾರ್ಯ ಮಾಡಬೇಕಿದೆ. ಶಾಂತಿ, ಶಕ್ತಿ ನಮ್ಮ ಮಂತ್ರಬಲ ಆಗಬೇಕಿದೆ. ನಾವು ಇನ್ನಷ್ಟು ಬಲಾಢ್ಯರಾಗಬೇಕಾಗಿದೆ. ಬಲಾಢ್ಯರಾಗಿ ವಿಶ್ವದಲ್ಲಿ ನಮ್ಮ ಸ್ಥಾನ ಪ್ರದರ್ಶಿಸಬೇಕಾಗಿದೆ ಎಂದರು.

ವಿಶ್ವದ ಎಲ್ಲೆಡೆಯಿಂದ ಗಣ್ಯಮಾನ್ಯರು ಇಲ್ಲಿಗೆ ಆಗಮಿಸಿದ್ದಾರೆ. ಅತ್ಯಾಧುನಿಕ, ಅನ್ವೇಷಣೆ ಮೂಲಕ ನಾವು ವಿಶ್ವದಲ್ಲಿ ಮುಂದೆ ಹೆಜ್ಜೆ ಇಟ್ಟಿದ್ದೇವೆ. ಪ್ರದಾನಿ ನರೇಂದ್ರ ಮೋದಿ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಿಸುತ್ತೇವೆ. ಕಳೆದ ಹತ್ತು ವರ್ಷಗಳಿಂದ ವೈಮಾನಿಕ ಕ್ಷೇತ್ರದಲ್ಲಿ ಸಾಕಷ್ಟು ಸಾಧನೆ ಮಾಡಿದ್ದೇವೆ. ಈ ಬಾರಿ ಬಜೆಟ್ ನಲ್ಲಿ ರಕ್ಷಣಾ ಕ್ಷೇತ್ರದಲ್ಲಿ 1,080 ಕೋಟಿ ಮೀಸಲಿಟ್ಟಿದ್ದೇವೆ ಎಂದು ತಿಳಿಸಿದರು.

ಏರೋ ನಾಟಿಕ್ಸ್ ವಿಚಾರದಲ್ಲಿ ಅಮೋಘ ಸಾಧನೆ ಮಾಡಿದ್ದೇವೆ. 295 ಏರೋಕ್ರಾಫ್ಟ್ ಕಾರ್ಯ ಶುರುವಾಗಿದೆ. ಬೆಂಗಳೂರು ಇನ್ನೋವೇಶನ್ ಹಬ್, ಸಾಫ್ಟ್‌ವೇರ್ ನ ಹೆಗ್ಗಳಿಕೆ ನಗರವಾಗಿದೆ. ಇದೀಗ ಏರೋ ಸ್ಪೇಸ್ ಮೂಲಕವೂ ಬೆಂಗಳೂರು ಹೆಸರುವಾಸಿಯಾಗುತ್ತಿದೆ. 452 ದೇಶಿ, 52 ವಿದೇಶಿ ಎಕ್ಸಿಬಿಟರ್ ಭಾಗಿಯಾಗಿದ್ದಾರೆ.

ಏರ್‌ಶೋಗೆ ಚಾಲನೆ ನೀಡುವ ಈ ಕಾರ್ಯಕ್ರಮದಲ್ಲಿ ಸರ್ಕಾರದ ಪ್ರತಿನಿಧಿಯಾಗಿ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್, ರಕ್ಷಣಾ ಇಲಾಖೆಯ ಮುಖ್ಯಸ್ಥರು ಭಾಗಿಯಾಗಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರು ಈ ಕಾರ್ಯಕ್ರಮಕ್ಕೆ ಹಾಜರಾಗಬೇಕಿತ್ತು ಆದರೆ ಮಂಡಿ ನೋವಿನ ಕಾರಣಕ್ಕೆ ಗೈರಾಗಿದ್ದಾರೆ ಎಂದು ಹೇಳಲಾಗಿದೆ.





### ಏರ್‌ಪೋರ್ಟ್ ವಿಮಾನಗಳ ಹಾರಾಟದಲ್ಲಿ ವ್ಯತ್ಯಯ

ದೇಶದ 15ನೇ ಆವೃತ್ತಿಯ ವೈಮಾನಿಕ ಪ್ರದರ್ಶನ ಏರೋ ಇಂಡಿಯಾ 2025 ಇಂದಿನಿಂದ ಆರಂಭಗೊಳ್ಳುತ್ತಿದೆ. ಈ ಹಿನ್ನೆಲೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಆಡಳಿತ ಮಂಡಳಿ ತಿಳಿಸಿದೆ. ಇಂದು (ಸೋಮವಾರ) ಬೆಳಗ್ಗೆ 9 ರಿಂದ ಮಧ್ಯಾಹ್ನ 12ರ ವರೆಗೆ, ಮಧ್ಯಾಹ್ನ 2 ರಿಂದ ಸಂಜೆ 4ರ ವರೆಗೆ ವಿಮಾನ ಹಾರಾಟದಲ್ಲಿ ವ್ಯತ್ಯಯ ಉಂಟಾಗಲಿದೆ. ಫೆಬ್ರವರಿ 11 ಮತ್ತು 12 ರಂದು ಮಧ್ಯಾಹ್ನ 12 ರಿಂದ ಮಧ್ಯಾಹ್ನ 3ರ ವರೆಗೆ, ಫೆಬ್ರವರಿ 13 ಮತ್ತು 14ರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 12ರ ವರೆಗೆ, ಮಧ್ಯಾಹ್ನ 2 ರಿಂದ ಸಂಜೆ 5ರ ವರೆಗೆ ವಿಮಾನ ಹಾರಾಟದಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಮೂಲಗಳು ತಿಳಿಸಿವೆ. ಏರ್ ಶೋನಲ್ಲಿ ವೈಮಾನಿಕ ಪ್ರದರ್ಶನ ಹಿನ್ನೆಲೆಯಲ್ಲಿ ವಿಮಾನ ಹಾರಾಟದಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ತಿಳಿದುಬಂದಿದೆ.

ಪುಟ 2

### ಟ್ರಾಫಿಕ್ ಜಾಮ್ ಕಿರಿಕಿರಿ



**ನೋಡುಗರ ಹೃದಯ ಬಡಿತ ಹೆಚ್ಚಿಸುವ 15ನೇ ಆವೃತ್ತಿಯ ವೈಮಾನಿಕ ಪ್ರದರ್ಶನ ಏರೋ ಇಂಡಿಯಾ 2025 ಇಂದಿನಿಂದ ಶುರುವಾಗಿದೆ. ಕೇಂದ್ರ ಸಚಿವ ರಾಜನಾಥ್ ಸಿಂಗ್ ಚಾಲನೆ ನೀಡಿದ್ದಾರೆ. ಐದು ದಿನಗಳ ಕಾಲ ಏರ್ ಶೋ ನಡೆಯಲಿದ್ದು, ಮೊದಲ ದಿನವೇ ಬೆಂಗಳೂರಿಗರಿಗೆ ಟ್ರಾಫಿಕ್ ಜಾಮ್ ಬಿಸಿ ತಟ್ಟಿದೆ. ಏರ್ ಶೋ ನಡೆಯುವ ಸ್ಥಳದ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಭಾರೀ ಟ್ರಾಫಿಕ್ ಜಾಮ್ ಉಂಟಾಗಿದ್ದು, ಬೆಳ್ಳಂಬೆಳಗ್ಗೆಯೇ ವಾಹನ ಸವಾರರು ಪರದಾಡುವಂತಾಗಿದೆ. ಕಿಲೋಮೀಟರ್ ಗಟ್ಟಲೇ ವಾಹನಗಳು ನಿಂತ ಹಿನ್ನೆಲೆಯಲ್ಲಿ ಟ್ರಾಫಿಕ್ ನಿಯಂತ್ರಣಕ್ಕೆ ಟ್ರಾಫಿಕ್ ಪೊಲೀಸರು ಹರಸಾಹಸ ಪಟ್ಟಿದ್ದಾರೆ. ಏರ್ ಶೋ ಉದ್ಘಾಟನಾ ಕಾರ್ಯಕ್ರಮದ ಸ್ಟಾಲ್‌ಗಳಿಗೆ ಬರುವ ಗಣ್ಯರಿಗೂ ಟ್ರಾಫಿಕ್ ಬಿಸಿ ತಟ್ಟಿದೆ. ಕಳೆದ ಎರಡು ಗಂಟೆಯಿಂದ ವಾಹನಗಳು ನಿಧಾನಗತಿಯಲ್ಲಿ ಸಂಚರಿಸುತ್ತಿವೆ.**

ಪುಟ 2

### ಇಂದಿನಿಂದ ಟಿ.ನರಸೀಪುರದಲ್ಲಿ

## ದಕ್ಷಿಣ ಭಾರತದ ಏಕೈಕ ಕುಂಭಮೇಳ



**ಮೈಸೂರು:** ದಕ್ಷಿಣ ಭಾರತದ ಕುಂಭಮೇಳಕ್ಕೆ ಕ್ಷಣಗಣನೆ ಆರಂಭವಾಗಿದೆ. ಕಾವೇರಿ, ಕಪಿಲ ಹಾಗೂ ಸ್ಫಟಿಕ ಸರೋವರಗಳು ಸೇರುವ ಮೈಸೂರು ಜಿಲ್ಲೆಯ ಟಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ಇಂದಿನಿಂದ 3 ದಿನಗಳ ಕಾಲ 13ನೇ ಕುಂಭಮೇಳ ನಡೆಯಲಿದೆ. ಟಿ. ನರಸೀಪುರದ ತ್ರಿವೇಣಿ ಸಂಗಮದಲ್ಲಿ ಆರು ವರ್ಷಗಳ ನಂತರ ನಡೆಯುತ್ತಿರುವ ಕುಂಭಮೇಳದಲ್ಲಿ ಸಾವಿರಾರು ಭಕ್ತರು ಸೇರುವ ನಿರೀಕ್ಷೆ ಇದೆ. ಸರ್ಕಾರ ಹಾಗೂ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾ ಕುಂಭಮೇಳ ಪವಿತ್ರ ಸ್ನಾನ ನಡೆಯುತ್ತಿದ್ದರೆ, ಕರ್ನಾಟಕದ ಪವಿತ್ರ ಕ್ಷೇತ್ರವೆಂದೇ ಟಿ.ನರಸೀಪುರದ ತ್ರಿವೇಣಿ ಸಂಗಮ ಹೆಸರುವಾಸಿಯಾಗಿದೆ. ಫೆ.12ರಂದು ಪವಿತ್ರ ಕುಂಭಸ್ನಾನ ನಡೆಯಲಿದೆ. ಅಂದು ಬೆಳಗ್ಗೆ 9ರಿಂದ 9:30ರೊಳಗೆ ಶುಭ ಮೀನ ಲಗ್ನ ಮತ್ತು ಮಧ್ಯಾಹ್ನ 12ರಿಂದ 1 ಗಂಟೆಯವರೆಗೆ ವೃಷಭ ಲಗ್ನದಲ್ಲಿ ಕುಂಭಮೇಳದ ಪುಣ್ಯಸ್ನಾನ ಮಾಡಲು ಮುಹೂರ್ತ ನಿಗದಿ ಮಾಡಲಾಗಿದೆ. ಸರ್ಕಾರ ಇದಕ್ಕಾಗಿ 6 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ.

ಪುಟ 2

### ಮದುವೆಯಲ್ಲಿ ಡಾನ್ಸ್ ಮಾಡುತ್ತಿದ್ದಾಗಲೇ ಹೃದಯ ಸ್ತಂಭನ ಎಂಬಿಎ ಪದವೀಧರೆ ಸಾವು



ಭೋಪಾಲ್: ಮದುವೆ ಕಾರ್ಯಕ್ರಮದಲ್ಲಿ ನೃತ್ಯ ಮಾಡುತ್ತಿದ್ದಾಗಲೇ ಹೃದಯಸ್ತಂಭನದಿಂದ 23ರ ಯುವತಿಯೊಬ್ಬಳು ಕುಸಿದು ಬಿದ್ದು ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ವಿದಿಶಾ ಜಿಲ್ಲೆಯ ರೆಸಾರ್ಟ್‌ನಲ್ಲಿ ನಡೆದಿದೆ. ಯುವತಿಯನ್ನು ಇಂದೋರ್ ನಿವಾಸಿ ಪರಿಣಿತಾ ಜೈನ್ ಎಂದು ಗುರುತಿಸಲಾಗಿದ್ದು, ಆಕೆಯ ಸೋದರ ಸಂಬಂಧಿ ಮದುವೆಯಲ್ಲಿ ಪಾಲ್ಗೊಂಡಿದ್ದರು. 200ಕ್ಕೂ ಹೆಚ್ಚು ಗಣ್ಯರು ಉಪಸ್ಥಿತರಿದ್ದರು.

ಪುಟ 2

### ವಿವಿಧ ನಗರಗಳ ಮೆಟ್ರೋ ದರಕ್ಕಿಂತಲೂ ಬೆಂಗಳೂರು ಮೆಟ್ರೋ ದರವೇ ದುಬಾರಿ!



**ಬೆಂಗಳೂರು:** ಸಿಲಿಕಾನ್ ಸಿಟಿಯ ಅಚ್ಚುಮೆಚ್ಚಿನ ಸಂಚಾರನಾಡಿಯಾದ ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆಯಾಗಿದೆ. ಅದು ಬರೋಬ್ಬರಿ 46% 50% ನಷ್ಟು ಟಿಕೆಟ್ ರೇಟ್ ಹೈಕ್ ಆಗಿದೆ. ಈ ದರ ಏರಿಕೆ ದಾಖಲೆ ನಿರ್ಮಿಸಿದ್ದು, ದೇಶದ ವಿವಿಧ ನಗರಗಳ ಮೆಟ್ರೋ ದರಕ್ಕಿಂತಲೂ, ಬೆಂಗಳೂರಿನ ನಮ್ಮ ಮೆಟ್ರೋ ದರವೇ ದುಬಾರಿಯಾಗಿದೆ. ದಿನದಿಂದ ದಿನಕ್ಕೆ ದೇಶಾದ್ಯಂತ ನಮ್ಮ ಮೆಟ್ರೋ ಛಾಪು ಮೂಡಿಸುತ್ತಿದೆ. ಪ್ರತಿನಿತ್ಯ ಲಕ್ಷಾಂತರ ಜನ ನಮ್ಮ ಮೆಟ್ರೋ ಅವಲಂಬಿಸಿದ್ದಾರೆ. ದೇಶದ ಪ್ರಮುಖ ನಗರಗಳಾದ ದೆಹಲಿ, ಹೈದರಾಬಾದ್, ಚೆನ್ನೈ, ಮುಂಬೈ, ಕೊಲ್ಕತ್ತಾ, ಲಕ್ನೋ, ಕೊಚ್ಚಿ, ಜೈಪುರ ಸೇರಿದಂತೆ ಹಲವೆಡೆ ಮೆಟ್ರೋ ದಟ್ಟಣೆ ಹೆಚ್ಚಾಗಿದೆ.

ಪುಟ 2

## ಆಪ್, ಕಾಂಗ್ರೆಸ್ ನಿರ್ಧಾರದಿಂದ ಬಿಜೆಪಿಗೆ ಲಾಭ

**ಮಂಡ್ಯ:** ಆಪ್, ಕಾಂಗ್ರೆಸ್ ನಿರ್ಧಾರದಿಂದ ಬಿಜೆಪಿ ಲಾಭ ಪಡೆದಿದೆ ಅಷ್ಟೇ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದರು. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿ ಚುನಾವಣೆಯಲ್ಲಿ ಕಾಂಗ್ರೆಸ್ ಶೂನ್ಯ ಸಂಪಾದನೆ ವಿಚಾರವಾಗಿ, ದೆಹಲಿ ಫಲಿತಾಂಶದಲ್ಲಿ ವಿಶೇಷ ಏನಿಲ್ಲ. ಕೇಜ್ರಿವಾಲ್ ಇಂಡಿಯಾ ಒಕ್ಕೂಟದ ಜೊತೆ ಹೋಗಿದ್ದರೆ ಬಿಜೆಪಿಗೆ ಗೆಲ್ಲುವ ಅವಕಾಶ ಇರಲಿಲ್ಲ. ಆದರೆ ಕೇಜ್ರಿವಾಲ್ ಸ್ವಲ್ಪ ದುಡುಕಿ ನಿರ್ಧಾರ ಮಾಡಿದರು. ಹೀಗಾಗಿ ಆಪ್, ಕಾಂಗ್ರೆಸ್ ನಿರ್ಧಾರದಿಂದ ಬಿಜೆಪಿ ಲಾಭ ಪಡೆದಿದೆ ಎಂದರು. ಕಳೆದ ಬಾರಿಯೂ ಕೃಷಿ ಇಲಾಖೆಗೆ ಹೊಸ ಕಾರ್ಯಕ್ರಮಗಳ ಮೂಲಕ ಉತ್ತೇಜನ ನೀಡಿದ್ದರು. ಈ ಬಾರಿಯೂ ಉತ್ತಮ ಕಾರ್ಯಕ್ರಮಗಳು ಸಿಗುವ ನಿರೀಕ್ಷೆ



ಇದೆ. ಇನ್ನೂ ಸಚಿವಾಕಾಂಕ್ಷಿಗಳಿಗೆ ನಿಗಮ ಮಂಡಳಿ ನೀಡಿ ಸಮಾಧಾನಪಡಿಸಿರುವ ವಿಚಾರವಾಗಿ, ಸಚಿವಾಕಾಂಕ್ಷಿಗಳಿಗೆ ಮುಂದಿನ ದಿನಗಳಲ್ಲಿ ಅವಕಾಶ ಸಿಗಲಿದೆ. ಪೊಲ್ಯೂಷನ್ ಕಂಟ್ರೋಲ್ ಬೋರ್ಡ್ ಛೇರ್ಮನ್ ಒಳ್ಳೆಯ ಹುದ್ದೆಯಾಗಿದ್ದು, ರಾಜ್ಯಾದ್ಯಂತ ಕೆಲಸ ಮಾಡಲು ಉತ್ತಮ ಅವಕಾಶವಿದೆ. ನರೇಂದ್ರ ಸ್ವಾಮಿಯವರು ಎಂಜಿನಿಯರ್ ಆಗಿದ್ದರಿಂದ ಅವಕಾಶ ಸಿಕ್ಕಿದೆ ಎಂದರು.

ಮಂಡ್ಯ ಮಿಮ್ಸ್ ಸಮಸ್ಯೆಯ ಆಗರ: ಮಿಮ್ಸ್‌ನಲ್ಲಿ ತುಂಬಾ ಸಮಸ್ಯೆ ಇದೆ. ಹೀಗಾಗಿ ಡಿಸಿ ಮೂಲಕ ಸಮಸ್ಯೆಗಳ ಪಟ್ಟಿ ಮಾಡಿಸಲಾಗಿದೆ. ಮಿಮ್ಸ್‌ಗೆ ಮೇಜರ್ ಸರ್ಜರಿ ಆಗಬೇಕು. ವೈದ್ಯಕೀಯ ಶಿಕ್ಷಣ ಸಚಿವರ ಜೊತೆ ಶೀಘ್ರವೇ ಸಭೆ ನಡೆಸುತ್ತೇನೆ ಎಂದು ತಿಳಿಸಿದರು.

ತೀವ್ರ ಕುತೂಹಲ ಕೆರಳಿಸಿದ್ದ ದೆಹಲಿ ವಿಧಾನಸಭಾ ಚುನಾವಣಾ ಫಲಿತಾಂಶ ಶನಿವಾರ ಪ್ರಕಟವಾಗಿದ್ದು, 27 ವರ್ಷಗಳ ಬಳಿಕ ಬಿಜೆಪಿ ಅಧಿಕಾರಕ್ಕೇರಿದೆ. ಆದ್ರೆ, ಕಳೆದ 10 ವರ್ಷಗಳಿಂದ ಅಧಿಕಾರದಲ್ಲಿದ್ದ ಆಪ್ ಸೋಲು ಕಂಡಿದ್ದರೆ, 'ಕೈ' ಪಾಳಯ ಸತತ 3ನೇ ಬಾರಿಗೆ ಶೂನ್ಯ ಸಂಪಾದನೆ ಮಾಡಿದೆ.

## ರಾಜ್ಯ ಬಿಜೆಪಿ ಐಸಿಯುನಲ್ಲಿದೆ, ಹೀಗೆ ಬಿಟ್ರೆ ಕೋಮಾಗೆ ಹೋಗುತ್ತೆ

ದಾವಣಗೆರೆ: ರಾಜ್ಯದಲ್ಲಿ ಬಿಜೆಪಿ ಐಸಿಯುನಲ್ಲಿದೆ. ಹೀಗೆ ಬಿಟ್ಟರೆ ಕೋಮಾ ಸ್ಥಿತಿ ತಲುಪುತ್ತದೆ ಎಂದು ಬಿಜೆಪಿ ನಾಯಕ ರಾಜುಗೌಡ ಹೇಳಿದ್ದಾರೆ. ದಾವಣಗೆರೆಯ ವಾಲ್ಮೀಕಿ ಮಠದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, ನಮ್ಮಲ್ಲಿ ಬಣ ಇರೋದು ಸ್ಪಷ್ಟ, ನಾವು ಬಣ ಇಲ್ಲ ಎಂದು ಹೇಳೋಕೆ ಆಗೊಲ್ಲ. ಎಷ್ಟೋ ಮಹನೀಯರು ಬಿಜೆಪಿ ಕಟ್ಟಿ ಬೆಳೆಸಿದ್ದಾರೆ. ಇದೇ ರೀತಿ ಕಿತ್ತಾಟ



ಮುಂದುವರೆದರೆ ಪಕ್ಷ ಹೀನಾಯ ಸ್ಥಿತಿಗೆ ಹೋಗುತ್ತದೆ ಎಂದಿದ್ದಾರೆ. ಹೈಕಮಾಂಡ್ ಮಧ್ಯಪ್ರವೇಶಿಸಿ ಆದಷ್ಟು ಬೇಗ ತಿಳಿಗೊಳಿಸಬೇಕು. ಹೈಕಮಾಂಡ್ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಬೇಕಾಗುತ್ತದೆ. ಯಾರು ಹೈಕಮಾಂಡ್ ಮುಂದೆ ದೊಡ್ಡವರಲ್ಲ. ಹೈಕಮಾಂಡ್ ಮಧ್ಯ ಪ್ರವೇಶಿಸಬೇಕು. ಜೆಪಿ ನಡ್ಡಾ, ಅಮಿತ್ ಶಾ ಆದಷ್ಟು ಬೇಗ ಎಂಟ್ರಿಯಾಗಿ ಪರಿಸ್ಥಿತಿ ತಿಳಿಗೊಳಿಸಬೇಕು. ಇಲ್ಲದಿದ್ದರೆ ರಾಜ್ಯದಲ್ಲಿ ಬಿಜೆಪಿಗೆ ಉಳಿಗಾಲ ಇಲ್ಲ ಎಂದಿದ್ದಾರೆ.

## ಸೋಲು ಒಪ್ಪೋತೀವಿ ಆದ್ರೆ ಇವಿಎಂ ಮೇಲೆ ಅನುಮಾನ ಇದೆ

**ಕೊಪ್ಪಳ:** ಸೋಲನ್ನ ಒಪ್ಪೋತೀವಿ ಆದ್ರೆ, ಈಗಲೂ ನಮಗೆ ಇವಿಎಂ ಮೇಲೆ ಅನುಮಾನ ಇದೆ ಎಂದು ಸಚಿವ ಶಿವರಾಜ ತಂಗಡಗಿ ಇವಿಎಂ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾರೆ. ದೆಹಲಿ ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯ ಸೋಲು ಅನುಭವಿಸಿದ ಕುರಿತು ಕನಕಗಿರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ತಮಗೆ



ಬೇಕಾದ ಕಡೆಯಲ್ಲಿ ಇವಿಎಂ ಮೂಲಕ ಗೆಲ್ಲುತ್ತಾರೆ. ಅವರು ಇವಿಎಂನಿಂದಲೇ ಗೆಲ್ಲೋದು. ಬೇರೆ ಯಾವುದರಿಂದಲೂ ಗೆಲ್ಲಲು ಸಾಧ್ಯವಿಲ್ಲ ಎಂದರು. ಮಹಾರಾಷ್ಟ್ರ ಚುನಾವಣೆಯ ಸಮಯದಲ್ಲೂ ಹೀಗೆ ಆಗಿದೆ. ಅದರ ಬಗ್ಗೆ ರಾಹುಲ್ ಗಾಂಧಿಯವರು ಪ್ರಸ್ತಾಪ ಮಾಡಿದ್ದಾರೆ ಎಂದು ಹೇಳಿದರು.

### ಕುಂಭಮೇಳ ಅಪಘಾತದಲ್ಲಿ ಮೃತಪಟ್ಟ

# ನಾಲ್ವರ ಪಾರ್ಥಿವ ಶರೀರ ಆಗಮನ

**ಬೆಳಗಾವಿ:** ಕುಂಭಮೇಳಕ್ಕೆ ಪ್ರಯಾಣಿಸುತ್ತಿದ್ದಾಗ ಅಪಘಾತದಲ್ಲಿ ಸಾವನ್ನಪ್ಪಿದ ಬೆಳಗಾವಿಯ ನಾಲ್ವರು ಜನರ ಶವಗಳು ಭಾನುವಾರ ಬೆಳಗಾವಿಗೆ ಆಗಮಿಸಿವೆ. ಬೆಳಗಾವಿಯ ಹೊರವಲಯದಲ್ಲಿರುವ ರಾಷ್ಟ್ರೀಯ ಹೆದ್ದಾರಿ–48 ರಲ್ಲಿರುವ ಭೂತಾರಾಮನಹಟ್ಟಿ ಗ್ರಾಮಕ್ಕೆ ಶವಗಳನ್ನು ರವಾನಿಸಲಾಗಿದೆ.



ಶವಗಳನ್ನು ಅಧಿಕೃತ ಮೇಲ್ವಿಚಾರಣೆಯಲ್ಲಿ ಇಂದೋರ್‌ನಿಂದ ಸಾಗಿಸಲಾಯಿತು, ಅವರ ಕುಟುಂಬಗಳು ಪಾರ್ಥಿವ ಶರೀರಗಳನ್ನು ಸ್ವೀಕರಿಸಿದರು. ಕುಂಭಮೇಳಕ್ಕಾಗಿ ಬೆಳಗಾವಿಯಿಂದ 18 ಜನರ ಗುಂಪು ಹೊರಟಿತ್ತು. ಫೆಬ್ರವರಿ 8 ರಂದು ಮಧ್ಯಪ್ರದೇಶದ ಇಂದೋರ್‌ನಲ್ಲಿ ಸಂಭವಿಸಿದ ಅಪಘಾತದಲ್ಲಿ ಆರು ಮಂದಿ ಸಾವನ್ನಪ್ಪಿದರು ಮತ್ತು 17 ಜನರು ಗಂಭೀರವಾಗಿ ಗಾಯಗೊಂಡರು.

ಮೃತರಲ್ಲಿ ಬೆಳಗಾವಿಯ ನಾಲ್ವರು ಸೇರಿದ್ದಾರೆ, ಅವರನ್ನು ಸಾಗರ್ ಶಹಾಪುರ್ಕರ್ (55), ಬಸವನ್ ಗಲ್ಲಿಯ ಚಾಲಕ ಬೆನಕನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕ್ರಾಂತಿ ನಗರದ ನೀತಾ ಬಡಮಂಜಿ (50) ಛತ್ರಪತಿ ಶಿವಾಜಿನಗರದ ಸಂಗೀತಾ ಮೈತ್ರೆ ಮತ್ತು ವಡ್ಗಾಂವ್‌ನ ಜ್ಯೋತಿ ಖಂಡೇಕರ್ ಎಂದು ಗುರುತಿಸಲಾಗಿದೆ.

ಬೆಳಗಾವಿ ದಕ್ಷಿಣ ಶಾಸಕ ಅಭಯ್ ಪಾಟೀಲ್ ಇಂದೋರ್ ಜಿಲ್ಲಾ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಗಾಯಾಳುಗಳು ಮತ್ತು ಮೃತ ದೇಹಗಳನ್ನು ತಲುಪಿಸುವಲ್ಲಿ ನೆರವು ನೀಡಿದ್ದಾರೆ. ಮೃತದೇಹಗಳನ್ನು ಭೂತರಾಮನಹಟ್ಟಿಯಲ್ಲಿ ಶಾಸಕ ಪಾಟೀಲ್, ಶ್ರೀ ರಾಮ ಸೇನೆ ಹಿಂದೂಸ್ತಾನ್ ಅಧ್ಯಕ್ಷ, ಮಹಾರಾಷ್ಟ್ರ ಏಕೀಕರಣ ಸಮಿತಿ (ಎಂಇಎಸ್) ನಾಯಕ ರಮಾಕಾಂತ್ ಕೊಂಡುಸ್ಕರ್ ಮತ್ತು ಇತರರು ಸ್ವೀಕರಿಸಿದರು. ನಂತರ, ಶವಗಳನ್ನು ಆಯಾ ಸ್ಥಳಗಳಿಗೆ ಕೊಂಡೊಯ್ಯಲಾಯಿತು, ಅಲ್ಲಿ ಇಂದೋರ್‌ನ ಉಪ ತಹಶೀಲ್ದಾರ್ ಮತ್ತು ಪೊಲೀಸ್ ಅಧಿಕಾರಿಗಳು ಔಪಚಾರಿಕವಾಗಿ ಕುಟುಂಬಗಳಿಗೆ ಹಸ್ತಾಂತರಿಸಿದರು.

## ಮಡಿಕೇರಿಯಲ್ಲಿ 2 ಲೀಟರ್‌ಗಿಂತ ಕಡಿಮೆ ಪ್ರಮಾಣದ ಪ್ಲಾಸ್ಟಿಕ್ ಬಾಟಲ್ ಬಳಕೆ ನಿಷೇಧ

**ಮಡಿಕೇರಿ:** ಮಂಜಿನ ನಗರಿಯ ಪ್ರವಾಸಿ ತಾಣಗಳಲ್ಲಿ ಸ್ವಚ್ಛತೆ ಕಾಪಾಡುವ ಹಾಗೂ ಪ್ಲಾಸ್ಟಿಕ್ ತ್ಯಾಜ್ಯಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ 2 ಲೀಟರ್‌ಗಿಂತಲೂ ಕಡಿಮೆ ಪ್ರಮಾಣದ ತಾತ್ಕಾಲಿಕ (ಮರುಬಳಕೆ ಮಾಡದ) ಪ್ಲಾಸ್ಟಿಕ್ ಬಾಟಲಿಗಳ ಬಳಕೆಯನ್ನು ಸಂಪೂರ್ಣ ನಿಷೇಧಿಸಿ ನಗರಸಭೆ ಆದೇಶ ಹೊರಡಿಸಿದೆ.



ಹೌದು. ಮಡಿಕೇರಿ ಪ್ರವಾಸಿಗರ ಪಾಲಿನ ಹಾಟ್‌ಸ್ಪಾಟ್ ಆಗಿದೆ. ವಾರಾಂತ್ಯದಲ್ಲಿ ಪ್ರವಾಸಿ ತಾಣಗಳಿಗೆ ದಾಂಗುಡಿ ಇಡುವವರ ಸಂಖ್ಯೆ ತುಸು ಹೆಚ್ಚೇ ಇರುತ್ತದೆ. ಬರುವವರು ನೀರು ಕುಡಿದ ಬಳಿಕ ತಾವು ತರುವ ಪ್ಲಾಸ್ಟಿಕ್ ಬಾಟಲಿಗಳನ್ನು ಎಲ್ಲೆಂದರಲ್ಲಿ ಎಸೆದು ಹೋಗುತ್ತಿದ್ದಾರೆ. ಇದರಿಂದ ಪ್ರತಿನಿತ್ಯ ನಗರದಲ್ಲಿ ಸಾವಿರಕ್ಕೂ ಅಧಿಕ ಕೆಜಿಯಷ್ಟು ಪ್ಲಾಸ್ಟಿಕ್ ಸಂಗ್ರಹವಾಗುತ್ತಿದೆ. ಇದರಿಂದ ನಗರದ ಸ್ವಚ್ಛತೆಯೂ ಹಾಳಾಗುತ್ತಿದೆ. ಅಲ್ಲದೇ ಪ್ಲಾಸ್ಟಿಕ್ ತ್ಯಾಜ್ಯದಿಂದ ಪರಿಸರಕ್ಕೂ ಮಾರಕವಾಗುತ್ತಿದೆ. ಇದಕ್ಕೆ ಕಡಿವಾಣ ಹಾಕಲು ನಿರ್ಧರಿಸಿರುವ ಮಡಿಕೇರಿ ನಗರಸಭೆ 2 ಲೀ.ಗಿಂತಲೂ ಕಡಿಮೆ ಪ್ರಮಾಣದ ತಾತ್ಕಾಲಿಕ ಪ್ಲಾಸ್ಟಿಕ್ ಬಾಟಲಿಗಳನ್ನು ಸಂಪೂರ್ಣ ನಿಷೇಧಿಸಿದೆ. ಈಗಾಗಲೇ ನಗರದ ವರ್ತಕರಿಗೆ ಪ್ರಕಟಣೆ ಮೂಲಕ ನೋಟಿಸ್ ಕೊಡಲಾಗಿದೆ. ಜೊತೆಗೆ ಪ್ರತಿ ಅಂಗಡಿ ಮುಂಗಟ್ಟುಗಳಿಗೆ ಭಿತ್ತಿಪತ್ರ ಅಂಟಿಸಿ, ಪ್ಲಾಸ್ಟಿಕ್ ಬಾಟಲಿಗಳಿಂದ ಪರಿಸರಕ್ಕೆ ಆಗುತ್ತಿರುವ ಹಾನಿಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಈಗಾಗಲೇ ಖರೀದಿ ಮಾಡಿರುವ ಬಾಟಲಿಗಳ ಮಾರಾಟಕ್ಕೆ ಅವಕಾಶವಿದ್ದು, ಹೊಸದಾಗಿ ತರಿಸದಂತೆ ನಗರಸಭೆ ಸೂಚನೆ ಕೊಟ್ಟಿದೆ. ಅಲ್ಲದೇ ನಗರಕ್ಕೆ ಬರುವ ಪ್ರವಾಸಿಗರು ಪ್ಲಾಸ್ಟಿಕ್ ಬಾಟಲಿ ತರದಂತೆ ಅಲ್ಲಲ್ಲಿ ಸೂಚನಾ ಫಲಕ ಅಳವಡಿಸಲಾಗಿದೆ. ಮುಂದಿನ ಎರಡು ತಿಂಗಳವರೆಗೆ ಅರಿವು ಮೂಡಿಸಿ ಬಳಿಕ ಕ್ರಮ ಕೈಗೊಳ್ಳಲಾಗುತ್ತದೆ ಎಂದು ನಗರಸಭೆಯ ಅಧಿಕಾರಿಗಳು ತಿಳಿಸಿದ್ದಾರೆ.

ಮಡಿಕೇರಿ ನಗರಸಭೆಯ ನಿರ್ಧಾರವನ್ನು ಸಾರ್ವಜನಿಕರು ಸ್ವಾಗತಿಸಿದ್ದಾರೆ. ಕೊಡಗು ಜಿಲ್ಲೆ ಪ್ರವಾಸಿಗರಿಂದ ಕಸದ ತೊಟ್ಟಿಯಾಗುವುದು ಬೇಡ ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ರಾಜ್ಯದ ಫೇಮಸ್ ಜಾತ್ರೆಗಳೇ ಈ ಗ್ಯಾಂಗ್‌ನ ಟಾರ್ಗೆಟ್



**ಕಲಬುರಗಿ:** ಜಾತ್ರೆಯಲ್ಲಿ ಪಾರ್ಕಿಂಗ್ ಮಾಡಿರುವ ಕಾರ್‌ಗಳನ್ನು ಕಳ್ಳತನ ಮಾಡುತ್ತಿದ್ದ ಗ್ಯಾಂಗ್‌ನ ಓರ್ವ ಖದೀಮನನ್ನು ಜಿಲ್ಲೆಯ ಚಿತ್ತಾಪುರ ತಾಲೂಕಿನ ವಾಡಿ ಪಟ್ಟಣ ಪೊಲೀಸರು ಬಂಧಿಸಿದ್ದಾರೆ. ರಾಜ್ಯದ ಫೇಮಸ್ ಜಾತ್ರೆಗಳನ್ನೇ ಈ ಗ್ಯಾಂಗ್ ಟಾರ್ಗೆಟ್ ಮಾಡುತ್ತಿತ್ತು. ಅದೇ ರೀತಿಯಾಗಿ ಜ.30 ರಂದು ಕಲಬುರಗಿಯ ನಾಲವಾರದ ಕೋರಿ ಸಿದ್ದೇಶ್ವರ ಜಾತ್ರೆಯಲ್ಲಿ ಇನ್ನೋವಾ ಕಾರು ಕಳ್ಳತನ ಮಾಡಿದ್ದರು. ಪ್ರಕರಣ ಬೆನ್ನು ಹತ್ತಿಹೋದ ಪೊಲೀಸರಿಗೆ ಖದೀಮರ ಅಸಲಿ ವಿಚಾರ ತಿಳಿದಿದೆ. ಸದ್ಯ ಮಹಾರಾಷ್ಟ್ರ ಮೂಲದ ವಿಠ್ಠಲ್ ಲಷ್ಕರೆ ಎಂಬಾತನನ್ನು ಬಂಧಿಸಲಾಗಿದ್ದು, ಇನ್ನುಳಿದ ನಾಲ್ವರಿಗಾಗಿ ಖಾಕಿ ಪಡೆ ಶೋಧ ನಡೆಸಿದೆ. ಬಂಧಿತನಿಂದ ಇನ್ನೋವಾ ಕಾರು ವಶಕ್ಕೆ ಪಡೆಯಲಾಗಿದೆ. ಉಳಿದ ಆರೋಪಿಗಳು ಹಾಗೂ ಕದ್ದ ಕಾರುಗಳ ಬಗ್ಗೆ ತನಿಖೆ ನಡೆಯುತ್ತಿದೆ. ಇಷ್ಟೇ ಅಲ್ಲದೆ ಇನ್ನು ಹಲವು ಕಾರು ಕಳ್ಳತನ ಪ್ರಕರಣದಲ್ಲೂ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ. ಪ್ರಸಿದ್ಧ ಜಾತ್ರಾ ಮಹೋತ್ಸವಗಳನ್ನೇ ಟಾರ್ಗೆಟ್ ಮಾಡುತ್ತಿದ್ದ ಗ್ಯಾಂಗ್, ಜಾತ್ರೆಗೆ ಬಂದಿದ್ದ ಜನರ ಕಾರ್ ಗಳನ್ನೆ ಕಳ್ಳತನ ಮಾಡುತ್ತಿದ್ದರು. ಕಾರ್ ಕೀಗಳನ್ನ ಬೆಲ್ಟ್‌ಗೆ ಹಾಕುವವರನ್ನು ಹಿಂಬಾಲಿಸುತ್ತಿದ್ದ ಗ್ಯಾಂಗ್, ಬಳಿಕ ಕೀ ಎಗರಿಸಿ ಕಾರು ಕಳ್ಳತನ ಮಾಡುತ್ತಿದ್ದರು. ಬದಾಮಿ ಬನಶಂಕರಿ ದೇವಿ ಜಾತ್ರೆಯಲ್ಲಿ ಎರಡು ಕಾರ್, ಎಮ್ಮಿಗನೂರು ಜಾತ್ರೆಯಲ್ಲಿ ಒಂದು ಕಾರು ಕದ್ದು ಪಾರಾರಿಯಾಗಿದ್ದಾರೆ. ಅಲ್ಲದೇ ಮುಂದಿನ ಜಾತ್ರೆಗಳ ಬಗ್ಗೆ ತಮ್ಮ ಡೈರಿಯಲ್ಲಿ ಬರೆದುಕೊಂಡಿದ್ದರು. ಇನ್ನು ಕದ್ದ ಕಾರ್‌ಗಳನ್ನ ಅಕ್ರಮ ಚಟುವಟಿಕೆಗೆ ಬಳಸುತ್ತಿದ್ದರು. ಸದ್ಯ ವಾಡಿ ಪೊಲೀಸರಿಂದ ಓರ್ವನ ಬಂಧನ ಮಾಡಲಾಗಿದೆ.

# ನಮ್ಮವರೇ ದ್ವೇಷ ಸಾಧಿಸಿ ಶತ್ರುವನ್ನ ಬಲಿಷ್ಠ ಮಾಡಿದ್ದಾರೆ

**ದಾವಣಗೆರೆ:** ಕಾಂಗ್ರೆಸ್‌ನವರೇ ದ್ವೇಷ ಸಾಧಿಸಿ ಶತ್ರುವನ್ನ ಬಲಿಷ್ಠ ಮಾಡಿದ್ದಾರೆ ಎಂದು ಸಚಿವ ಕೆ.ಎನ್ ರಾಜಣ್ಣ ಹೈಕಮಾಂಡ್ ವಿರುದ್ಧ ವಾಗ್ದಾಳಿ ನಡೆಸಿದರು.



ದಾವಣಗೆರೆಯಲ್ಲಿ ಮಾತನಾಡಿದ ಅವರು, ದೆಹಲಿ ಚುನಾವಣೆಯಲ್ಲಿ ಕಾಂಗ್ರೆಸ್ ಶೂನ್ಯ ಸಂಪಾದಿಸಿದ ಕುರಿತು ವಿಚಾರವಾಗಿ, ಏನೇ ಇದ್ದರೂ ತಪ್ಪನ್ನೇ ಮುಂದಿಟ್ಟುಕೊಂಡು ಶತ್ರುವನ್ನು ಬಲಿಷ್ಠ ಮಾಡಬಾರದು. ಈಗ ದೆಹಲಿಯಲ್ಲಿ ಆಗಿದೆ, ಹಿಂದೆ ಹರಿಯಾಣದಲ್ಲಿ ಆಗಿತ್ತು. ಇಬ್ಬರಿಗೂ ಜಂಭ ಇದೆ. ಹೀಗಾಗಿ ಸೋಲಾಗಿದೆ. ರಾಷ್ಟ್ರ ರಾಜಕಾರಣವನ್ನು ಅರಿತು ಶತ್ರುವನ್ನು ಸೋಲಿಸಬೇಕು. ಜಾತ್ಯಾತೀತರು ಒಂದಾಗಿ, ಜಾತಿಯನ್ನು ಸೋಲಿಸಬೇಕು ಎಂದು ಕಿಡಿಕಾರಿದರು.

ಮತ ವಿಭಜನೆಯಿಂದ ಬಿಜೆಪಿ ಗೆದ್ದಿದೆ. ಇಲ್ಲಿ ರಾಜಕೀಯ ಜಂಜಾಟವಿದೆ. ನಮ್ಮವರೇ ದ್ವೇಷ ಸಾಧಿಸುಕೊಂಡು ಶತ್ರುವನ್ನ ಬಲಿಷ್ಟ ಮಾಡಿದ್ದಾರೆ. ಯಾರೇ ಸಿಎಂ ಆದರೂ ಅಂತಿಮ ತೀರ್ಮಾನ ಹೈಕಮಾಂಡ್‌ನದ್ದಾಗಿರುತ್ತದೆ. ಹೈಕಮಾಂಡ್ ನಿರ್ಧಾರಕ್ಕೆ ಹೈಕಮಾಂಡ್ ನಿರ್ಧಾರಕ್ಕೆ ನಾವೆಲ್ಲ ಬದ್ಧರಾಗಿರುತ್ತೇವೆ ಎಂದರು.

ಇನ್ನೂ ಎಸ್‌ಸಿ, ಎಸ್‌ಟಿ ಸಮಾವೇಶದಿಂದ ಧ್ವನಿ ಇಲ್ಲದ ಸಮುದಾಯಗಳಿಗೆ ಅರಿವು ಮೂಡಿಸಬೇಕು. ಅಧಿಕಾರ ಹಂಚಿಕೆ, ಸಮುದಾಯ ಬಲಿಷ್ಟ ಮಾಡುವುದು ಸಮಾವೇಶದ ಉದ್ದೇಶವಾಗಿದೆ. ಕಾಂಗ್ರೆಸ್ ನೇತೃತ್ವದಲ್ಲಿ ಎಸ್‌ಸಿ, ಎಸ್‌ಟಿ ಸಮಾವೇಶ ಮಾಡುತ್ತೇವೆ. ರಾಜಕೀಯ ವಂಚಿತ ಸಮುದಾಯಗಳಿಗೆ ಅನುಕೂಲ ಮಾಡುವ ಉದ್ದೇಶವಿದೆ. ಸಮಾವೇಶ ಮಾಡಬೇಕು ಅಂದುಕೊಂಡಿದ್ದೀವಿ ಮಾಡುತ್ತೇವೆ. ನಮ್ಮ ಯಾರು ಬಿಡುತ್ತಿಲ್ಲ ಎನ್ನುವುದು ಸುಳ್ಳು.

**ಕಾಂಗ್ರೆಸ್‌ಗೆ ಸೋಲಾಗಿದ್ದೇಕೆ?**

**2013ರ ಚುನಾವಣಾ ವೈಫಲ್ಯ ತಿದ್ದಿಕೊಳ್ಳದೇ ಪಕ್ಷ ಬಲವರ್ಧನೆಯಲ್ಲಿ ಹಾಗೂ ಆಪ್ ಪ್ರಚಾರದ ನಡುವೆ ಭಿನ್ನವಾಗಿ ಗುರುತಿಸಿಕೊಳ್ಳುವಲ್ಲಿ ವಿಫಲರಾದರು. ಇನ್ನೂ ಪರಿಸರ ಮಾಲಿನ್ಯ ಸೇರಿದಂತೆ ದೆಹಲಿಯ ಸ್ಥಳೀಯ ಸಮಸ್ಯೆಗಳನ್ನು ಬಗೆಹರಿಸದಿರುವುದು. ಗ್ಯಾರಂಟಿ ಹೊರತಾಗಿ ಬೇರೆ ಯಾವುದೇ ರೀತಿಯ ಶ್ರಮ ಪಡದಿರುವುದು ಸೋಲಿಗೆ ಮುಖ್ಯ ಕಾರಣಗಳಾದವು ಎಂದು ವಿಶ್ಲೇಷಿಸಲಾಗಿದೆ.**

ಮಾರ್ಚ್ 7ಕ್ಕೆ ಪೂರ್ಣ ಪ್ರಮಾಣದ ಬಜೆಟ್ ಮಂಡನೆ ಆಗಲಿದೆ. ಜನರಿಗೆ ಅನುಕೂಲ, ಒಳ್ಳೆಯ ಬಜೆಟ್ ಕೊಡುವುದರಲ್ಲಿ ಸಿದ್ದರಾಮಯ್ಯ ನಿಸ್ಸೀಮರು. ಎಲ್ಲಾ ಜನರ ವಿಶ್ವಾಸವನ್ನು ತೆಗೆದುಕೊಂಡು ಬಜೆಟ್ ರೂಪಿಸುತ್ತಾರೆ ಎಂದು ಹೇಳಿದರು.

## ಬಡ್ಡಿ ದಂಧೆಕೋರರ ಮನೆ ಮೇಲೆ ದಾಳಿ : 26.57 ಲಕ್ಷ ನಗದು ವಶ

ಗದಗ: ನಗರದ 12 ಕಡೆಗಳಲ್ಲಿ ಬಡ್ಡಿ ದಂಧೆಕೋರರ ಮನೆಗಳ ಮೇಲೆ ಬೆಟಗೇರಿ ಪೊಲೀಸರು ದಿಢೀರ್ ದಾಳಿ ಮಾಡಿದ್ದಾರೆ. ಈ ವೇಳೆ ಲಕ್ಷ ಲಕ್ಷ ರೂ. ಹಣದ ಕಂತೆಗಳು ಪತ್ತೆಯಾಗಿವೆ.

ಗದಗ ಹಾಗೂ ಬೆಟಗೇರಿ ಅವಳಿ ನಗರದಲ್ಲಿ ಪೊಲೀಸರು ದಾಳಿ ನಡೆಸಿದ್ದಾರೆ. ದಾಳಿಯಿಂದ ನಿದ್ದೆಯಲ್ಲಿದ್ದ ಬಡ್ಡಿ ದಂಧೆಕೋರರು ಕಂಗಾಲಾಗಿದ್ದಾರೆ. ದಾಳಿ ವೇಳೆ ಮನೆಗಳಲ್ಲಿ 26.57 ಲಕ್ಷ ರೂ. ನಗದು ಪತ್ತೆಯಾಗಿದೆ. ಅಲ್ಲದೇ ಖಾಲಿ ಚೆಕ್‌ಗಳು, ದಾಖಲೆಗಳು ಪತ್ತೆಯಾಗಿವೆ.

ಈ ಬಗ್ಗೆ ಮಾತಾಡಿರುವ ಎಸ್ಪಿ ಬಿ.ಎಸ್ ನೇಮಗೌಡ, ಅದರಲ್ಲಿ ಸಂಗಮೇಶ ದೊಡ್ಡಣ್ಣವರ ಎಂಬವರ ಮನೆಯಲ್ಲಿ 26.57 ಲಕ್ಷ ನಗದು, ಖಾಲಿ ಬಾಂಡ್, ಚೆಕ್‌ಗಳು ಪತ್ತೆಯಾಗಿವೆ. ರವಿ ಕೌಜಗೇರಿ ಎಂಬವನ ಮನೆಯಲ್ಲಿ ಚೆಕ್‌ಗಳು, ಬಾಂಡ್ ಪೇಪರ್ಸ್, ಹಣ ಎಣಿಸುವ ಮಷಿನ್ ಪತ್ತೆಯಾಗಿದೆ. ಈ ಸಂಬಂಧ ಬಿಎನ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿಸಿದ್ದಾರೆ.

ಕೆಲವರು ರಿಜಿಸ್ಟರ್ ಮಾಡಿ ವ್ಯವಹಾರ ಮಾಡುತ್ತಿದ್ದಾರೆ. ಕೆಲವರು ಅನಧಿಕೃತವಾಗಿ ವ್ಯವಹಾರ ಮಾಡುತ್ತಿದ್ದಾರೆ. ಧಮ್ಕಿ, ಬೆದರಿಕೆ ಹಾಕಿ ಹಣ ವಸೂಲಿ ಆರೋಪ ಹಿನ್ನೆಲೆಯಲ್ಲಿ ದಾಳಿ ಮಾಡಲಾಗಿದೆ. ಬಡ್ಡಿ ದಂಧೆಯಲ್ಲಿ ರೌಡಿಶೀಟರ್‌ಗಳು ಭಾಗಿಯಾಗಿದ್ದಾರೆ. ರೌಡಿಶೀಟರ್‌ಗಳಾದ ದರ್ಶನ್, ಉಮೇಶ್ ಸುಂಕದ, ಉದಯ ಸುಂಕದ ಮಾರುತಿ ಮುತಗಾರ, ಶಿವರಾಜ್ ಹಂಸನೂರ, ವಿಜಯ ಸೋಳಂಕಿ ಹಾಗೂ ಶ್ಯಾಮ್ ಕುರಗೋಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.



## ನಾಲ್ಕು ಪ್ರಮುಖ ಡೈರಿ ಮುಖ್ಯಸ್ಥರ ಬಂಧನ

ಭೋಲೆ ಬಾಬಾ ಡೈರಿಯ ಮಾಜಿ ನಿರ್ದೇಶಕರಾದ ವಿಪಿನ್ ಜೈನ್ ಮತ್ತು ಪೊಮಿಲ್ ಜೈನ್ (ರೂರ್ಕಿ, ಉತ್ತರಾಖಂಡ), ವೈಷ್ಣವಿ ಡೈರಿಯ (ಪೂನಂಬಾಕ್ಕಂ) ಸಿಇಒ ಅಪೂರ್ವ ವಿನಯ್ ಕಾಂತ್ ಚಾವ್ಡಾ ಮತ್ತು ಎಆರ್ ಡೈರಿ (ದುಂಡಿಗಲ್) ಎಂಡಿ ರಾಜು ರಾಜಶೇಖರನ್ ಇವರುಗಳು ಲಡ್ಡು ಪ್ರಸಾದ ಕಲಬೆರಕೆ ಹಗರಣದಲ್ಲಿ ಬಂಧಿತರಾಗಿರುವ ಆರೋಪಿಗಳಾಗಿದ್ದಾರೆ. ಎಲ್ಲಾ ಆರೋಪಿಗಳನ್ನು ವಶಕ್ಕೆ ಪಡೆದಿರುವ ಎಸ್‌ಐಟಿ ಅಧಿಕಾರಿಗಳು ಸೋಮವಾರ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ತನಿಖಾ ತಂಡ ತಿಳಿಸಿದೆ.

ಮೂಲಗಳ ಪ್ರಕಾರ ಆರೋಪಿಗಳನ್ನು ಅಪರಾಧ ಸಂಖ್ಯೆ 470/24 ರ ಅಡಿಯಲ್ಲಿ ಬಂಧಿಸಿ ತಿರುಪತಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ತನಿಖೆಯಲ್ಲಿ ತುಪ್ಪ ಪೂರೈಕೆಯಲ್ಲಿ ಪಾಲಿಸಬೇಕಾದ ನಿಯಮಗಳ ಉಲ್ಲಂಘನೆಯಾಗಿರುವುದು ಬಹಿರಂಗವಾಗಿದೆ. ಇದರಲ್ಲಿ ಟೆಂಡರ್ ಪಡೆಯಲು ನಕಲಿ ದಾಖಲೆಗಳು ಮತ್ತು ಸ್ಟ್ಯಾಂಪ್‌ಗಳನ್ನು ಬಳಸಿರುವುದು ಕೂಡ ಸೇರಿಕೊಂಡಿದೆ. ವೈಷ್ಣವಿ ಡೈರಿಯು ಭೋಲೆ ಬಾಬಾ ಡೈರಿಯ ತುಪ್ಪ ಪೂರೈಕೆಯ ನಿಯಮಗಳನ್ನು ತಿರುಚಿರುವುದು ಬೆಳಕಿಗೆ ಬಂದಿದೆ. ವಿಚಾರಣೆಯಲ್ಲಿ ಪೂರೈಕೆಯಲ್ಲಿ ಹಲವು ವ್ಯತ್ಯಾಸಗಳು ಮತ್ತು ಸುಳ್ಳು ದಾಖಲೆಗಳನ್ನು ನೀಡಿರುವುದು ಕಂಡುಬಂದಿವೆ.

ಇತ್ತೀಚೆಗೆ, ಈ ಘಟನೆಯಲ್ಲಿ ಎಸ್‌ಐಟಿ ನಾಲ್ವರನ್ನು ಬಂಧಿಸಿತ್ತು. ಇವುಗಳಲ್ಲಿ ಎಆರ್ ಡೈರಿ, ಪರಾಗ್ ಫುಡ್ಸ್, ಪ್ರೀಮಿಯರ್ ಅಗ್ರಿ ಫುಡ್ಸ್ ಮತ್ತು ಆಲ್ಫಾ ಮಿಲ್ಕ್ ಫುಡ್ಸ್ ಸೇರಿವೆ. ಅಲ್ಲದೆ ವಿಶೇಷವಾಗಿ ತಿರುಮಲ ಲಡ್ಡು ವಿವಾದದ ಕುರಿತು ರಚಿಸಲಾದ ಎಸ್‌ಐಟಿಯಲ್ಲಿ, ಸಿಬಿಐ ಜೆಸಿ ವೀರೇಶ್ ಪ್ರಭು ತಿರುಪತಿಯಲ್ಲಿಯೇ ಇದ್ದು ತನಿಖೆಯನ್ನು ಚುರುಕುಗೊಳಿಸಿದ್ದಾರೆ.

**ಏನಿದು ಪ್ರಕರಣ?:** ಇತ್ತೀಚೆಗೆ ತಿರುಪತಿ ತಿರುಮಲದಲ್ಲಿ ನೀಡುವ ಲಡ್ಡು ಪ್ರಸಾದದಲ್ಲಿ ದನದ ಕೊಬ್ಬು ಮಿಶ್ರಣ ಮಾಡಲಾಗಿದೆ ಎಂಬ ಅಘಾತಕಾರಿ ಅಂಶ ಇಡೀ ದೇಶವನ್ನೇ ಬೆಚ್ಚಿ ಬೀಳಿಸಿತ್ತು. ಅಲ್ಲದೆ ಶ್ರೀವಾರಿ ಭಕ್ತರ ನಂಬಿಕೆಗೆ ಘಾಸಿಗೊಳಿಸಲಾಗಿದೆ, ಹಿಂದೂ ಧರ್ಮೀಯರ ನಂಬಿಕೆಗೆ ಅಪಮಾನ ಮಾಡಲಾಗಿದೆ ಎಂದು ದೇಶಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ತಿರುಮಲದಲ್ಲಿ ಪ್ರಸಾದದ ರೂಪದಲ್ಲಿ ನೀಡುವ ಲಡ್ಡುವಿನಲ್ಲಿ ಹಸುವಿನ ಕೊಬ್ಬು ಮತ್ತು ಪ್ರಾಣಿಗಳ ತ್ಯಾಜ್ಯ ಮಿಶ್ರಣ ಮಾಡಲಾಗಿದೆ ಎಂದು ಚಂದ್ರಬಾಬು ನಾಯ್ಡು ಸರ್ಕಾರ ಆರೋಪಿಸಿತ್ತು. ಅವರು ಈ ಹಿಂದಿನ ವೈಎಸ್‌ಆರ್‌ಸಿಪಿ ಸರ್ಕಾರ ತಿರುಮಲ ಲಡ್ಡುವಿನ ಗುಣಮಟ್ಟದ ಬಗ್ಗೆ ಕಾಳಜಿ ವಹಿಸಲಿಲ್ಲ ಎಂದು ಗಂಭೀರ ಆರೋಪ ಮಾಡಿದ್ದರು.

## ಯುವಕ ಆತ್ಮಹತ್ಯೆ

ಇದರಿಂದ ಮನನೊಂದ ದರ್ಶನ್ ಫೆ.5ರಂದು ಮನೆಯಲ್ಲಿಯೇ ವಿಷ ಸೇವಿಸಿದ್ದಾನೆ. ವಿಷ ಸೇವನೆ ಬಳಿಕ ದರ್ಶನ್ ವಾಂತಿ ಮಾಡುತ್ತಿದ್ದನ್ನು ಕಂಡು ಸ್ನೇಹಿತರಾದ ರವಿ ಮತ್ತು ಯಶ್ವಂತ್ ಪ್ರಶ್ನಿಸಿದಾಗ, ಯುವತಿ ನನ್ನನ್ನು ಮದುವೆಯಾಗಲು ನಿರಾಕರಿಸಿದ್ದಾಳೆ. ನನ್ನ ಮನಸ್ಸಿಗೆ ಬೇಜಾರಾಗಿದೆ. ಹಾಗಾಗಿ ವಿಷ ಸೇವನೆ ಮಾಡಿರುವುದಾಗಿ ಹೇಳಿ ದರ್ಶನ್ ಕುಸಿದು ಬಿದ್ದಿದ್ದಾನೆ. ತಕ್ಷಣವೇ ಸ್ನೇಹಿತರು ಅರಸೀಕೆರೆ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ. ನಂತರ ಪೋಷಕರು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಚಿಕಿತ್ಸೆ ಫಲಕಾರಿಯಾಗದೆ ದರ್ಶನ್ ಮೈಸೂರಿನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾನೆ.

ಇನ್ನು ಘಟನೆ ಸಂಬಂಧ ಯುವತಿ ವಿರುದ್ಧ ದರ್ಶನ್ ಬಾವ ಶಂಕರ್ ದೂರು ನೀಡಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಾಣಾವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**ಮೊದಲನೇ ಪುಟದಿಂದ...**

## ಎಂಬಿಎ ಪದವೀಧರೆ ಸಾವು

ಈ ವೇಳೆ ಪರಿಣಿತಾ ವೇದಿಕೆಯಲ್ಲಿ ಬಾಲಿವುಡ್ ಗೀತೆಯೊಂದಕ್ಕೆ ನೃತ್ಯ ಮಾಡುತ್ತಿದ್ದಾಗಲೇ ಹೃದಯ ಸ್ತಂಬನದಿಂದ ಸಾವನ್ನಪ್ಪಿದ್ದಾರೆ. ಆಕೆ ಕುಸಿದು ಬಿದ್ದ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡಿದ ನಂತರ ಘಟನೆ ಬೆಳಕಿಗೆ ಬಂದಿದೆ. ಈ ವೇಳೆ ಸಮಾರಂಭದಲ್ಲಿ ಪಾಲ್ಗೊಂಡಿದ್ದ ವೈದ್ಯರು ಆಕೆಗೆ ಸಿಪಿಆರ್ (ಕಾರ್ಡಿಯೋಪಲ್ಮನರಿ ರೆಸಸಿಟೇಶನ್) ನೀಡಲು ಪ್ರಯತ್ನಿಸಿದ್ರು, ಆದ್ರೆ ಪ್ರಯೋಜನವಾಗಲಿಲ್ಲ. ತಕ್ಷಣ ಅಲ್ಲಿಂದ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು ಅಷ್ಟರಲ್ಲಿ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ರು. ಎಂಬಿಎ ಪದವೀಧರರಾಗಿದ್ದ ಪರಿಣಿತಾ ತಮ್ಮ ಪೋಷಕರೊಂದಿಗೆ ಇಂದೋರ್‌ನ ದಕ್ಷಿಣ ತುಕೋಗಂಜ್‌ನಲ್ಲಿ ವಾಸಿಸುತ್ತಿದ್ದರು. ಮೂಲಗಳ ಪ್ರಕಾರ, ಆಕೆಯ ಸಹೋದರನೊಬ್ಬ 12ನೇ ವಯಸ್ಸಿನಲ್ಲೇ ಹೃದಯಾಘಾತದಿಂದ ಸಾವನ್ನಪ್ಪಿದ.

## ದಕ್ಷಿಣ ಭಾರತದ ಏಕೈಕ ಕುಂಭಮೇಳ

ಇನ್ನು ಇಂದು ಬೆಳಗ್ಗೆ 10 ಗಂಟೆಗೆ ಅಗಸ್ತೇಶ್ವರ ದೇವಸ್ಥಾನದಲ್ಲಿ ತ್ರಯೋದಶಿ, ಪುಷ್ಯ ಪ್ರಾತಃಕಾಲ 9 ಗಂಟೆಗೆ ಸನ್ನಿಧಿಯಲ್ಲಿ, ಅನುಜ್ಞೆ, ಪುಣ್ಯಾಹ, ಗಣಹೋಮ, ಪೂರ್ಣಾಹುತಿ, ಅಭಿಷೇಕ, ಮಹಾಮಂಗಳಾರತಿ ನೆರವೇರಿಸಲಾಗುತ್ತದೆ. ಸಂಜೆ 5 ಗಂಟೆಗೆ ಧರ್ಮಸಭೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಅಥಿತಿ ಗಣ್ಯರಿಂದ ಉದ್ಘಾಟನೆ ಮತ್ತು ಧ್ವಜಾರೋಹಣ ನೆರವೇರಲಿದೆ.

ಫೆ.11ರಂದು, ಚತುರ್ದಶಿ, ಆಶ್ಲೇಷ, ಪ್ರಾತಃ ಪುಣ್ಯಾಹ – ನವಗ್ರಹ ಹೋಮ, ಸುದರ್ಶನ ಹೋಮ ನಡೆಯಲಿದೆ. ಬೆಳಗ್ಗೆ 11 ಗಂಟೆಗೆ ಧರ್ಮಸಭೆ, ಸಂಜೆ 4ಕ್ಕೆ ಮಹಾತ್ಮರ, ಸಂತರ, ಮಹಾ ಮಂಡಲೇಶ್ವರರ ತ್ರಿವೇಣಿ ಸಂಗಮ ಕ್ಷೇತ್ರ ಪ್ರವೇಶ, ಗುಂಜಾ ನರಸಿಂಹ ಸ್ವಾಮಿ ದೇವಸ್ಥಾನದಿಂದ ಟಿ.ನರಸೀಪುರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಲಿದೆ. ಸಂಜೆ 6 ಗಂಟೆಗೆ ರುದ್ರ, ಹೋಮ, ಪೂರ್ಣಾಹುತಿ, ರಾತ್ರಿ 7 ಗಂಟೆಗೆ ನಡೆಯುವ ಗಂಗಾ ಪೂಜೆಯ ವೇಳೆ ವಾರಾಣಸಿ ಗಂಗಾರತಿ ಮಾದರಿಯಲ್ಲಿ ದೀಪಾರತಿ ಕಾರ್ಯಕ್ರಮ ನಡೆಯಲಿದೆ.

ಕುಂಭಮೇಳದಲ್ಲಿ ವಿವಿಧ ಮಠಾಧೀಶರು, ರಾಜಕೀಯ ಗಣ್ಯರು ಭಾಗವಹಿಸಲಿದ್ದು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಕುಮಾರಸ್ವಾಮಿ ವಿವಿಧ ಕಾರ್ಯಕ್ರಮಗಳಲ್ಲಿ ಉಪಸ್ಥಿತರಿರಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹಾದೇವಪ್ಪ ಕುಂಭಮೇಳದ ಉದ್ಘಾಟನೆ ಮಾಡಲಿದ್ದು, ಸಚಿವರಾದ ಕೆ.ವೆಂಕಟೇಶ್, ರಾಮಲಿಂಗಾರೆಡ್ಡಿ, ವಿಪಕ್ಷ ನಾಯಕ ಆರ್.ಅಶೋಕ್, ಸಂಸದ ಯದುವೀರ್ ಒಡೆಯರ್, ಸ್ಥಳೀಯ ಶಾಸಕರು ಭಾಗಿಯಾಗಲಿದ್ದಾರೆ.

ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮೈಸೂರಿನ ಅವಧೂತ ದತ್ತಪೀಠದ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು ಸೇರಿದಂತೆ ಹರಗುರುಚರ ಮೂರ್ತಿಗಳು ಕಾರ್ಯಕ್ರಮಗಳ ಸಾನಿಧ್ಯ ವಹಿಸಲಿದ್ದಾರೆ.

## ಬೆಂಗಳೂರು ಮೆಟ್ರೋ ದರವೇ ದುಬಾರಿ!

ಆದ್ರೆ, ಈ ಎಲ್ಲಾ ನಗರಗಳ ಮೆಟ್ರೋ ದರಕ್ಕೆ ಹೋಲಿಸಿದ್ರೇ ನಮ್ಮ ಮೆಟ್ರೋದ ಗರಿಷ್ಠ ದರವೇ ಹೆಚ್ಚಾಗಿದೆ. ದೇಶದ ವಿವಿಧ ಪ್ರಮುಖ ನಗರದಲ್ಲಿ ಎಷ್ಟೆಷ್ಟು ದರವಿದೆ ಅನ್ನೋದು ಈ ಕೆಳಕಂಡಂತಿದೆ.

ಯಾವ ನಗರಗಳಲ್ಲಿ ಮೆಟ್ರೋ ದರ ಎಷ್ಟಿದೆ?

■ ಬೆಂಗಳೂರು–10 ರೂಪಾಯಿ –90 ರೂಪಾಯಿ (30 ಕಿಲೋಮೀಟರ್ ನಂತರ) ■ ದೆಹಲಿ–10 ರೂಪಾಯಿ –60 ರೂಪಾಯಿ (32 ಕಿಲೋಮೀಟರ್ ಕ್ಕಿಂತ ಹೆಚ್ಚಿನ ದೂರ) ■ ಹೈದರಾಬಾದ್–10 ರೂಪಾಯಿ –60 ರೂಪಾಯಿ (26 ಕಿಲೋಮೀಟರ್ ಕ್ಕಿಂತ ಹೆಚ್ಚಿನ ದೂರ) ■ ಮುಂಬೈ–10 ರೂಪಾಯಿ –80 ರೂಪಾಯಿ (42 ಕಿಲೋಮೀಟರ್ ಕ್ಕಿಂತ ಹೆಚ್ಚಿನ ದೂರ) ■ ಕೊಲ್ಕತ್ತಾ–5 ರೂಪಾಯಿ –50 ರೂಪಾಯಿ (30 ಕಿಲೋಮೀಟರ್ ಗೂ ಹೆಚ್ಚಿನ ದೂರ)

ಈ ಎಲ್ಲಾ ನಗರಗಳ ಪೈಕಿ ನಿನ್ನೆ ದರ ಏರಿಕೆಯಾಗಿ ಬೆಂಗಳೂರಿನ ನಮ್ಮ ಮೆಟ್ರೋ ದರವೇ ಅತ್ಯಂತ ಹೆಚ್ಚಿದೆ. ಕನಿಷ್ಠ ಅಂದ್ರೆ, ಕೋಲ್ಕತ್ತಾ ಮೆಟ್ರೋ ಆಗಿದೆ. ಪ್ರಮುಖವಾಗ ಕೊಲ್ಕತ್ತಾ ಮೆಟ್ರೋವನ್ನು ಭಾರತೀಯ ರೈಲ್ವೆಯೇ ನಡೆಸುತ್ತಿರೋದ್ರಿಂದ ಕನಿಷ್ಠ ದರವಿದೆ ಅಂತಾ ಹೇಳಲಾಗುತ್ತಿದೆ. ಹೀಗಾಗಿ ದೇಶದ ಬೇರೆ ನಗರಗಳಿಂದ ಬೆಂಗಳೂರಲ್ಲಿ ಮೆಟ್ರೋ ದರ ಏರಿಕೆಯಾಗಿರೋದು ಸರಿಯಲ್ಲ. ಇದರಿಂದ ಮೆಟ್ರೋ ಪ್ರಯಾಣಿಕರು ದ್ವಿಚಕ್ರ ವಾಹನ ಸೇರಿದಂತೆ ಪರ್ಯಾಯ ಮಾರ್ಗಗಳಿಗೆ ಹೊರಳಬಹುದು ಅಂತಾ ಜನ ಹಾಗೂ ಕೆಲ ತಜ್ಞರ ಅಭಿಪ್ರಾಯವಾಗಿದೆ.

## ಕೊಳೆತ ಶವ ಎಸೆದ ವ್ಯಕ್ತಿ

ಇದು ಸಣ್ಣ ಜಗಳವೆಂದು ಅಂಗಡಿಯವರು ಅಂದುಕೊಂಡಿದ್ದರು. ಕುಮಾರ್ ಅಲ್ಲಿಂದ ಹೊರಟು ಹೋದ, ನಂತರ ಸ್ಮಶಾನಕ್ಕೆ ಹೋಗಿ ಅರ್ಧ ಕೊಳೆತ ಶವವನ್ನು ತೆಗೆದುಕೊಂಡು ಬಂದು, ಅಂಗಡಿಯ ಮುಂದೆ ಎಸೆದು ಪರಾರಿಯಾಗಿದ್ದಾನೆ. ಇದನ್ನು ನೋಡಿ ಅಂಗಿಯವರು ಹಾಗೂ ಗ್ರಾಹಕರು ಒಮ್ಮೆ ಬೆಚ್ಚಿಬಿದ್ದಾರೆ, ಕೂಡಲೇ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು. ಅವರು ಬಂದು ತನಿಖೆ ನಡೆಸಿದಾಗ ಈತನೇ ಶವ ಎಸೆದಿರಬಹುದು ಎಂದು ಅಂದಾಜಿಸಲಾಯಿತು. ಅಧಿಕಾರಿಗಳು ಆಗಮಿಸಿ, ಶವವನ್ನು ಹೊರತೆಗೆದು ಶವಾಗಾರ ವ್ಯಾನ್‌ನಲ್ಲಿ ಸ್ಮಶಾನಕ್ಕೆ ಸಾಗಿಸಿದರು. ಪೊಲೀಸರು ಕುಮಾರ್‌ಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

**ಏರ್‌ಪೋರ್ಟ್ ವಿಮಾನಗಳ ಹಾರಾಟದಲ್ಲಿ ವ್ಯತ್ಯಯ**

ಯಲಹಂಕ ವಾಯುನೆಲೆಯಲ್ಲಿ ಇಂದು ಬೆಳಗ್ಗೆ 9:30ರ ವೇಳೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ ನೀಡಲಿದ್ದಾರೆ. ದೇಶ–ವಿದೇಶಗಳ ಪ್ರಮುಖ ನಾಯಕರು, ರಕ್ಷಣಾ ವಿಭಾಗದ ಅಧಿಕಾರಿಗಳು ಏರ್ ಶೋ ನಲ್ಲಿ ಭಾಗಿಯಾಗಲಿದ್ದಾರೆ. ಫೆಬ್ರವರಿ 14ರ ವರೆಗೆ ನಡೆಯಲಿರುವ ಏರ್ ಶೋನಲ್ಲಿ ಅಮೆರಿಕ, ರಷ್ಯನ್ ಸೇರಿದಂತೆ ವಿವಿಧ ದೇಶಗಳ ಯುದ್ಧ ವಿಮಾನಗಳು ಭಾಗಿಯಾಗಲಿವೆ.

**ಈ ಬಾರಿಯ ವಿಶೇಷತೆ ಏನು?;** ಈ ಬಾರಿ 42,438 ವಿಸ್ತೀರ್ಣದಲ್ಲಿ ಏರ್ ಶೋ ನಡೆಯುತ್ತಿದ್ದು, ವಿವಿಧ 30 ದೇಶಗಳ ರಕ್ಷಣಾ ಸಚಿವರು, ವಿವಿಧ ದೇಶಗಳ 43 ಮಂದಿ ಸೇನಾ ಮುಖ್ಯಸ್ಥರು ಭಾಗಿಯಾಗಲಿದ್ದಾರೆ. ಒಟ್ಟಾರೆ 90 ದೇಶಗಳು ಏರೋ ಇಂಡಿಯಾದವನ್ನು ಪ್ರತಿನಿಧಿಸಲಿವೆ. 70 ಯುದ್ಧ ವಿಮಾನಗಳು, ಸರಕು, ತರಬೇತಿ ವಿಮಾನಗಳು, 30 ವಿಮಾನಗಳು, ಹೆಲಿಕಾಪ್ಟರ್ ಹೃದಯ ಬಡಿತ ಹೆಚ್ಚಿಸುವ ಕಸರತ್ತು ನಡೆಸಲಿವೆ. ರಷ್ಯನ್ ಅಮೆರಿಕನ್ ಯುದ್ಧ ವಿಮಾನಗಳು ಈ ಪ್ರದರ್ಶನದ ಆಕರ್ಷಣೆಯಾಗಿವೆ.

ಅಲ್ಲದೇ ವಿವಿಧ ದೇಶಗಳ 900ಕ್ಕೂ ಹೆಚ್ಚು ಉತ್ಪಾದಕರು ಇದರಲ್ಲಿ ಭಾಗಿಯಾಗಲಿದ್ದಾರೆ. ಎಐ, ಡ್ರೋನ್, ಸೈಬರ್ ಸೆಕ್ಯೂರಿಟಿ, ಗ್ಲೋಬರ್ ಏರೋಸ್ಪೇಸ್, ನೂತನ ತಂತ್ರಜ್ಞಾನಗಳನ್ನು ಪರಿಚಯಿಸಲಿದ್ದಾರೆ. ಆತ್ಮನಿರ್ಭರ ಭಾರತ ಉತ್ಪನ್ನಗಳು ಈ ಬಾರಿಯ ಶೋನಲ್ಲಿ ಇರಲಿವೆ. 100 ವಿವಿಧ ಕಂಪನಿಗಳ ಸಿಇಒಗಳು, 50 ವಿದೇಶಿ ಓಎಂಎಸ್ ಭಾಗಿಯಾಗಲಿದ್ದಾರೆ. ಹೂಡಿಕೆ, ಸಂಶೋಧನೆ, ಜಾಯಿಂಟ್ ವೆಂಚರ್, ರಕ್ಷಣಾ ವಲಯದ ಬಗ್ಗೆ ಚರ್ಚೆ ನಡೆಯಲಿದೆ. 10 ವಿವಿಧ ವಿಷಯಗಳನ್ನ ಒಳಗೊಂಡ ಸೆಮಿನಾರ್‌ಗಳು ಇರಲಿದೆ. 70ಕ್ಕೂ ಹೆಚ್ಚು ಫ್ಲೈಯಿಂಗ್ ಡಿಸ್‌ಪ್ಲೇಗಳು ಏರ್ ಶೋನಲ್ಲಿ ಇರಲಿವೆ. 7 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿ ವೀಕ್ಷಕರು ಆಗಮಿಸುವ ನಿರೀಕ್ಷೆ ಹೊಂದಲಾಗಿದೆ.

## ಟ್ರಾಫಿಕ್ ಜಾಮ್ ಕಿರಿಕಿರಿ

**ಹಲವು ರಸ್ತೆಗಳಲ್ಲಿ ಸಂಚಾರ ಮಾರ್ಪಾಡು:** ಇನ್ನೂ ಇಂದಿನಿಂದ ಏರ್ ಶೋ ಆರಂಭ ಹಿನ್ನಲೆ 5 ದಿನಗಳ ಕಾಲ ಏರ್‌ಪೋರ್ಟ್ ರಸ್ತೆಯ ಸವಾರರಿಗೆ ಟ್ರಾಫಿಕ್ ಬಿಸಿ ತಟ್ಟುವ ಸಾಧ್ಯತೆ ಇದೆ. ವಿದೇಶಿ ಗಣ್ಯರು ಆಗಮಿಸುವ ಕಾರಣ ಎಲಿವೇಟೆಡ್ ರಸ್ತೆಯ ಓಡಾಟವನ್ನ ಕೆಲ ಕಾಲ ಬಂದ್ ಮಾಡಲಾಗುತ್ತೆ. ಸರ್ವೀಸ್ ರಸ್ತೆಯಲ್ಲೇ ಸಂಚಾರ ಮಾಡಬೇಕಿರೋ ಕಾರಣ ಆ ಭಾಗದ ವಾಹನ ಸವಾರರು 5 ದಿನಗಳ ಕಾಲ ಇದೇ ಪರಿಸ್ಥಿತಿ ಎದುರಿಸಬೇಕಾಗುತ್ತದೆ. ಇನ್ನೂ, ಏರ್ ಪೋರ್ಟ್ ರಸ್ತೆ ಸುತ್ತಮುತ್ತ ಹಲವು ರಸ್ತೆಗಳಲ್ಲಿ ಸಂಚಾರ ಮಾರ್ಪಾಡು ಮಾಡಿ ಸಂಚಾರಿ ಪೊಲೀಸರು ಆದೇಶಿಸಿದ್ದಾರೆ.

## ಯಾವೆಲ್ಲ ವಾಹನಗಳಿಗೆ ಸಂಚಾರ ನಿಷೇಧ

**■ ಲಾರಿ, ಟ್ರಕ್, ಬಸ್, ಸರಕು ಸಾಗಾಣಿಕೆ ವಾಹನಗಳಿಗೆ ಸಂಚಾರ ನಿರ್ಬಂಧ ■ ಮೇಖ್ರಿ ವೃತ್ತದಿಂದ–ಎಂವಿಐಟಿ ಕ್ರಾಸ್‌ವರೆಗೆ ಸಂಚಾರ ನಿಷೇಧ ■ ಗೊರಗುಂಟೆಪಾಳ್ಯದಿಂದ ಹೆಬ್ಬಾಳ ಮಾರ್ಗವಾಗಿ ಹೆಣ್ಣೂರು ಕ್ರಾಸ್‌ವರೆಗೆ ನಿಷೇಧ ■ ನಾಗವಾರ ಜಂಕ್ಷನ್‌ನಿಂದ ರೇವಾ ಕಾಲೇಜ್ ಜಂಕ್ಷನ್‌ವರೆಗೆ ಸಂಚಾರ ನಿಷೇಧ ■ ಹೆಸರಘಟ್ಟ, ಚಿಕ್ಕಬಾಣಾವರ ಕಡೆಯಿಂದ ಬೆಂಗಳೂರು ಕಡೆಗೆ ಸಂಚಾರ ನಿಷೇಧ ■ ಜಿಕೆವಿಕೆ ಕ್ಯಾಂಪಸ್‌ನಲ್ಲಿ ಸಾರ್ವಜನಿಕರಿಗೆ ಉಚಿತ ಪಾರ್ಕಿಂಗ್ ವ್ಯವಸ್ಥೆ**

## ಹೈಕಮಾಂಡ್ ಬುಲಾವ್, ದೆಹಲಿಗೆ ತೆರಳಿದ ವಿಜಯೇಂದ್ರ

ಬೆಂಗಳೂರು: ಕರ್ನಾಟಕ ಬಿಜೆಪಿ ಅಂತಃಕಲಹ ದಿನಕ್ಕೊಂದು ಸ್ವರೂಪ ಪಡೆದುಕೊಳ್ಳುತ್ತಿದೆ. ರಾಜ್ಯಾಧ್ಯಕ್ಷ ಪಟ್ಟದಿಂದ ವಿಜಯೇಂದ್ರರನ್ನು ಕೆಳಕ್ಕಿಳಿಸಲು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದ ನಾಯಕರ ಗುಂಪು ಶತಪ್ರಯತ್ನ ಮಾಡುತ್ತಿದೆ. ಆದರೆ, ಇದಕ್ಕೆ ಕೌಂಟರ್ ಕೊಡುತ್ತಿರುವ ವಿಜಯೇಂದ್ರ, ನಾನಾ ವ್ಯೂಹ ಹೆಣೆಯುತ್ತಿದ್ದಾರೆ. ಇದೇ ಹೊತ್ತಲ್ಲೇ ವಿಜಯೇಂದ್ರ ಮತ್ತು ಯತ್ನಾಳ್ ಇಬ್ಬರೂ ಕೇಂದ್ರ ಸಚಿವ ಸೋಮಣ್ಣ ಮನೆ ಪೂಜೆ ನೆಪದಲ್ಲಿ ದೆಹಲಿಯಲ್ಲಿ ತಂತ್ರಗಾರಿಕೆ ಮಾಡುತ್ತಿದ್ದಾರೆ. ಸೋಮಣ್ಣ ಮನೆ ಪೂಜೆಗೆ ಹೋಗುತ್ತಿದ್ದೇವೆ ಎಂದು ಎರಡೂ ಬಣದ ನಾಯಕರು ಹೇಳಿದ್ದರೆ, ಅತ್ತ 'ನಾನು ಯಾರನ್ನೂ ಕರೆದಿಲ್ಲ' ಎಂದು ಸೋಮಣ್ಣ ಖಡಾಖಂಡಿತವಾಗಿ ಹೇಳಿದ್ದಾರೆ. ಹೀಗಾಗಿ, ಹೈಕಮಾಂಡ್ ಭೇಟಿಗೆ ಇಬ್ಬರೂ ಮುಂದಾಗಿದ್ದಾರಾ ಎಂಬ ಅನುಮಾನ ಸಹಜವಾಗಿ ಮೂಡಿದೆ. ದಾವಣಗೆರೆ ಪ್ರವಾಸಕ್ಕೆ ಹೋಗುತ್ತಿದ್ದ ವಿಜಯೇಂದ್ರಗೆ ಹೈಕಮಾಂಡ್‌ನಿಂದ ಬುಲಾವ್ ಬಂದಿದೆ. ಹೀಗಾಗಿ ದಾವಣಗೆರೆ ಪ್ರವಾಸ ರದ್ದು ಮಾಡಿದ ದೆಹಲಿ ವಿಮಾನ ಹತ್ತಿದ್ದಾರೆ. ಯತ್ನಾಳ್ ಬಣ ದೆಹಲಿಯಿಂದ ವಾಪಸ್ ಆಗಿ ವಾರವೂ ಆಗಿಲ್ಲ. ದಾವಣಗೆರೆಯ ಮಾಜಿ ಸಂಸದ ಜಿಎಂ ಸಿದ್ದೇಶ್ವರ್ ಗೆಸ್ಟ್ ಹೌಸ್‌ನಲ್ಲಿ ಯತ್ನಾಳ್ ಬಣದ ನಾಯಕರು ಭಾನುವಾರ ಸಭೆ ಸೇರಿದ್ದಾರೆ. ಮುಂದಿನ ಹೋರಾಟಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಸಂಸದ ಬಸವರಾಜ್ ಬೊಮ್ಮಾಯಿ ಜೊತೆಗೆ ವಾಲ್ಮೀಕಿ ಜಾತ್ರೆಯ ವೇದಿಕೆ ಹಂಚಿಕೊಂಡಿದ್ದಾರೆ. ಬೊಮ್ಮಾಯಿ ಭೇಟಿ ಬಗ್ಗೆ ಪ್ರತಿಕ್ರಿಯಿಸಿದ ಯತ್ನಾಳ್, ತಟಸ್ಥ ಬಣವೂ ಪರಿವರ್ತನೆಯಾಗಿದೆ ಎಂದಿದ್ದಾರೆ. ದೆಹಲಿಗೆ ತೆರಳುವ ಮುನ್ನ ಮಾತನಾಡಿದ ಯತ್ನಾಳ್, ನಾನು ರಾಜ್ಯಾಧ್ಯಕ್ಷ ರೇಸ್‌ನಲ್ಲಿದ್ದೇನೆ ಎಂದಿದ್ದಾರೆ. ವಿಜಯೇಂದ್ರ ಕೂಡಾ ದೆಹಲಿಗೆ ಹೋಗುವ ಮುನ್ನ ಟಾಂಗ್ ಕೊಟ್ಟಿದ್ದು, ಯತ್ನಾಳ್ ಹೇಳಿದ್ದರಲ್ಲಿ ತಪ್ಪಿಲ್ಲ ಎಂದಿದ್ದಾರೆ.

# ಪೌರಾಣಿಕ ನಾಟಕಗಳಿಂದ ಒಳ್ಳೆತನ, ಭಕ್ತಿ, ಶ್ರದ್ಧೆ ಮೂಡಲು ಸಾಧ್ಯ

**ಬೆಂಗಳೂರು:** ಪೌರಾಣಿಕ ನಾಟಕಗಳಿಂದ ಭಕ್ತಿ, ಶ್ರದ್ದೆ, ನಂಬಿಕೆ, ವಿಶ್ವಾಸ , ಮಾನವೀಯ ಮೌಲ್ಯ,ಪ್ರೀತಿ ವಾತ್ಸಲ್ಯ, ಒಳ್ಳೆಯತನ ಸಮಾಜದಲ್ಲಿರುವ ಅಂಕುಡೊಂಕುಗಳನ್ನು ತಿದ್ದಿಕೊಂಡು ನಾವೆಲ್ಲರೂ ಒಂದಾಗಿ ಕೂಡಿ ಬಾಳಲು ಸಾಧ್ಯವಾಗಿದೆ ಎಂದು ಯುವ ಮುಖಂಡ ಎನ್.ಸಿ.ಕುಮಾರ್ ಅವರು ಅಭಿಪ್ರಾಯಪಟ್ಟರು.

ನಾಗದೇವನಹಳ್ಳಿಯಲ್ಲಿ ಶ್ರೀ ಭೂತಪ್ಪ ಕೃಪಾ ಪೋಷಿತ ನಾಟಕಮಂಡಲಿಯವರು ಶ್ರೀ ಕರಿಯಮ್ಮದೇವರ ಜಾತ್ರಾಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ಕುರುಕ್ಷೇತ್ರ ಎಂಬ ಪೌರಾಣಿಕ ನಾಟಕ ಸಮಾರಂಭದಲ್ಲಿ ಮಾತನಾಡಿ ಒಳ್ಳೆತನ, ಧಾರ್ಮಿಕ ಪರಂಪರೆ, ಸಂಸ್ಕೃತಿ ಪರಂಪರೆಯನ್ನು ಉಳಿಯುವಿಗಾಗಿ ನೂರಾರು ವರ್ಷಗಳಿಂದ ನಮ್ಮ ಪೂರ್ವಿಕರು ಭಕ್ತಿ ಭಾವದಿಂದ ಕಲಿತು ನಾಟಕ ಪ್ರದರ್ಶನ ನೀಡುತ್ತಿದ್ದರೂ ಇಂದಿನ ಯುವ ಜನಾಂಗ ನಾಟಕ, ರಂಗಗೀತೆಗಳ ಕಡೆ ಮುಖ ಮಾಡಬೇಕಾಗಿದೆ ಎಂದರು

ದುರ್ಯೋಧನ ಪಾತ್ರದಾರಿ ಚಿತ್ತಪ್ಪ, ಇಲ್ಲಿಯವರೆಗೆ 30 ನಾಟಕಗಳಲ್ಲಿ ಶನೇಶ್ವರ, ಸತ್ಯರಥ, ಕೃಷ್ಣ, ಅರ್ಜುನ, ಕರ್ಣ , ಯಾದವರಾಜ ಪಾತ್ರಗಳನ್ನು ಕಲಿತು ಪ್ರದರ್ಶನ ನೀಡಿದ್ದೇನೆ ಕಲೆಗೆ ಜಾತಿ, ಧರ್ಮ, ಶ್ರೀಮಂತ-ಬಡವ ಎಂಬ ಭೇದ ಭಾವವಿಲ್ಲ ಸಾಮರಸ್ಯಕ್ಕಾಗಿ ಎಲ್ಲರೂ ಒಗ್ಗೂಡಲು ನಾಟಕಗಳು ಮೇಲ್ಪಂಕ್ತಿಯಾಗಿದೆ ಎಂದರು.



ಶಾಸಕ ಎಸ್.ಟಿ.ಸೋಮಶೇಖರ್ ಅವರು ನಾಟಕ, ರಂಗಭೂಮಿ, ಗ್ರಾಮೀಣ ಸಂಸ್ಕೃತಿ ಉಳಿಯಬೇಕಾಗಿದೆ ಎಂದು ಶುಭ ಹಾರೈಸಿದರು

ಹಿರಿಯ ರಂಗಕಲಾವಿದ, ಪಾತ್ರಧಾರಿಗಳಾದ ಸಿರಿಯಪ್ಪ, ಜುಂಜೇಗೌಡ, ಜಗದೀಶ್, ಟಿ.ರಘು, ಹೊಸಮನೆ ರಾಜಣ್ಣ, ಬಡ ಚಿಕ್ಕಣ್ಣ, ಆರ್.ಕೌಲ್ಲಪ್ಪ, ಡಿಪೋಕೃಷ್ಣಪ್ಪ, ವಕೀಲ ಆರ್.ಕುಮಾರ್, ದಾಸಪ್ಪ, ದೊಡ್ಡಯ್ಯ ಇದ್ದರು.

# ಸಮಾರೋಪ ಸಮಾರಂಭ

**ಬೆಂಗಳೂರು:** ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಸಹಕಾರ ಸಹಯೋಗದೊಂದಿಗೆ ತಿರುಮಲ ತಿರುಪತಿ ದೇವಸ್ಥಾನದ ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್.ಕೆ. ವಾದೀಂದ್ರಾಚಾರ್ ಹಾಗೂ ಟಿ ಟಿ ಡಿ ಹೆಚ್.ಡಿ.ಪಿ.ಪಿ ಸಂಚಾಲಕರಾದ ಡಾ|| ಪಿ. ಭುಜಂಗರಾವ್ ಅವರ ನೇತೃತ್ವದಲ್ಲಿ ಫೆಬ್ರವರಿ 4 ರಿಂದ 7ರ ವರೆಗೆ ನಾಲ್ಕು ದಿನಗಳ ಕಾಲ ವಿವಿಧ ಭಜನಾ ಮಂಡಳಿಗಳಿಂದ ಶ್ರೀ ಹರಿ ಭಜನೆ, ಮ||ಶಾ||ಸಂ|| ವಿದ್ವಾನ್ ಶ್ರೀ ಮಾದನೂರು ಪವಮಾನಾಚಾರ್ಯರಿಂದ ಶ್ರೀ ಮಧ್ವಾಚಾರ್ಯರ ಮಹಿಮೆ ವಿಷಯವಾಗಿ ಧಾರ್ಮಿಕ ಪ್ರವಚನ ಹಾಗೂ ವಿದುಷಿ ಶ್ರೀಮತಿ ಸುಷ್ಮಾ ಶ್ರೇಯಸ್ ಮತ್ತು ಸಂಗಡಿಗರಿಂದ ಹರಿನಾಮ ಸಂಕೀರ್ತನೆ ಕಾರ್ಯಕ್ರಮಗಳು ಜರುಗಿ, ಅದರ ಸಮಾರೋಪ ಸಮಾರಂಭವು ಇಂದು (ಫೆ.7) ನಡೆಯಿತು ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದರು. ಈ ದಿನ ಪ್ರವಚನ ಮಂಗಳದ ಅಂಗವಾಗಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರ ಆಚಾರ್ಯರು ವಿದ್ವಾಂಸರಾದ ಮಾದನೂರು ಶ್ರೀಯುತ ಪವಮಾನ ಆಚಾರ್ಯರಿಗೆ ಶ್ರೀ ಮಠದ ಪರವಾಗಿ ಶ್ರೀ ಗುರುರಾಯರ ಶೇಷ ವಸ್ತ್ರ ಫಲ ಮಂತ್ರಾಕ್ಷತೆ ನೀಡಿ ಸತ್ಕರಿಸಿದರು.





## ರಾಜ್ಯ ಮಟ್ಟದಅಬಾಕಸ್ ಸ್ಪರ್ಧೆ ಪ್ರಣವ್ಆರ್ ಗೆ- ಪ್ರಥಮ ಸ್ಥಾನ

**ಮೈಸೂರು:** ಸರಸ್ವತಿಪುರಂನಲ್ಲಿರುವ ವಿಜಯವಿಠಲ ಆಂಗ್ಲ ಮಾಧ್ಯಮ ಶಾಲೆಯ 2ನೇ ತರಗತಿಯ ವಿದ್ಯಾರ್ಥಿ ಪ್ರಣವ್.ಆರ್ರಾಜ್ಯ ಮಟ್ಟದಅಬಾಕಸ್ ಸ್ಪರ್ಧೆ 4ನೇ ವಿಭಾಗದಲ್ಲಿಭಾಗವಹಿಸಿ ಪ್ರಥಮ ಸ್ಥಾನ ಪಡೆದಿರುತ್ತಾರೆ.ಇಂದು ಗಾನ ಭಾರತಿ ಸಭಾಂಗಣದಲ್ಲಿಅಬಾಕಸ್‌ನ ಮುಖ್ಯಸ್ಥರು ಪ್ರಶಸ್ತಿ ಮತ್ತು ಫಲಕವನ್ನು ನೀಡಿ ಗೌರವಿಸಿದರು.

## ನಿಯಂತ್ರಣ ತಪ್ಪಿದ ಬಸ್ ಮರಕ್ಕೆ ಡಿಕ್ಕಿ

**ಚಾಮರಾಜನಗರ:** ಚಾಲಕ ಮೂರ್ಛೆ ಬಿದ್ದು ನಿಯಂತ್ರಣ ತಪ್ಪಿದ ಏಖಖಖಿಅ ಬಸ್ ಮರಕ್ಕೆ ಡಿಕ್ಕಿ ಹೊಡೆದು ಪ್ರಯಾಣಿಕರು ಗಾಯಗೊಂಡ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಚಿಕ್ಕರಂಗಶೆಟ್ಟಿ ದೊಡ್ಡಿ ಗ್ರಾಮದ ಸಮೀಪ ಭಾನುವಾರ ನಡೆಯಿತು. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಒಡೆಯರಪಾಳ್ಯ ಗ್ರಾಮದಿಂದ ಮೈಸೂರಿಗೆ ತೆರಳುತ್ತಿದ್ದ ಬಸ್ ಇದಾಗಿದ್ದು, ಚಾಲಕನಿಗೆ ದಿಢೀರ್ ಮೂರ್ಛೆ ರೋಗ ಕಾಣಿಸಿಕೊಂಡಿದೆ. ಪರಿಣಾಮ, ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದೆ. ಬಸ್ನಲ್ಲಿ ಸುಮಾರು 40ಕ್ಕೂ ಹೆಚ್ಚು ಪ್ರಯಾಣಿಕರು ಪ್ರಯಾಣಿಸುತ್ತಿದ್ದರು ಎನ್ನಲಾಗಿದ್ದು, ಮುಂಭಾಗದಲ್ಲಿ ಕುಳಿತಿದ್ದ ಐವರು ಗಾಯಗೊಂಡಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಬಸ್ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆಯದೇ ಹೋಗಿದ್ದರೆ ಚಾಲಕನ ನಿಯಂತ್ರಣ ಕಳೆದುಕೊಂಡು ರಸ್ತೆಯ ಎಡಭಾಗಕ್ಕೆ ಪಲ್ಟಿಯಾಗಿ ಅಪಾರ ಪ್ರಮಾಣದ ಸಾವುನೋವು ಆಗುತ್ತಿತ್ತುಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.



## ದೇವಸಾನದ ಕಲ್ಯಾಣಿಯಲ್ಲಿ ಮುಳುಗಿ ಇಬ್ಬರು ವಿದ್ಯಾರ್ಥಿಗಳ ಸಾವು

**ಬೆಂಗಳೂರು:** ಬನ್ನೇರುಘಟ್ಟ ಬಳಿಯ ಸುವರ್ಣ ಮುಖಿ ಕಲ್ಯಾಣಿಗೆ ಈಜಲು ತೆರಳಿದ್ದ ಇಬ್ಬರು ವಿದ್ಯಾರ್ಥಿಗಳು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಭಾನುವಾರ ನಡೆದಿದೆ. ಮೃತರನ್ನು ದೀಪು (20) ಹಾಗೂ ಯೋಗೀಶ್ವರ್ (20) ಎಂದು ಗುರುತಿಸಲಾಗಿದೆ. ಬೊಮ್ಮಸಂದ್ರದ ಎಸ್ ಎಫ್ ಎಸ್ ಕಾಲೇಜಿನ ಐವರು ವಿದ್ಯಾರ್ಥಿಗಳು ಈಜು ಗೊತ್ತಿಲ್ಲದಿದ್ದರೂ ಸುವರ್ಣಮುಖಿ ಕಲ್ಯಾಣಿಗೆ ಈಜಲು ತೆರಳಿದ್ದರು. ಈ ವೇಳೆ ಇಬ್ಬರು ಸ್ನೇಹಿತರೊಂದಿಗೆ ದೀಪು ಹಾಗೂ ಯೋಗೀಶ್ವರ್ ಕಲ್ಯಾಣಿಗೆ ಇಳಿದಿದ್ದಾರೆ. ಮತ್ತೋರ್ವ ದಡದಲ್ಲಿ ನಿಂತು ವಿಡಿಯೋ ಮಾಡುತ್ತಿದ್ದ ಎನ್ನಲಾಗಿದೆ. ಇಬ್ಬರು ಸ್ನೇಹಿತರು ನೀರಿನಲ್ಲಿ ಈಜಲಾಗದೇ ಮುಳುಗುತ್ತಿರುವುದೂ ಉಳಿದವರಿಗೆ ಅರಿವಾಗಿಲ್ಲ. ಇದನ್ನು ಗಮನಿಸಿದ ದಡದಲ್ಲಿ ನಿಂತಿದ್ದ ವಿದ್ಯಾರ್ಥಿ ಅವರ ರಕ್ಷಣೆಗೆ ಕೂಗಿ ಹೇಳಿದ್ದಾನೆ. ಆದರೆ ಆದಾಗಲೇ ಸಾಕಷ್ಟು ನೀರು ಕುಡಿದಿದ್ದ ಇಬ್ಬರನ್ನು ರಕ್ಷಿಸಲು ಸಾಧ್ಯವಾಗಿಲ್ಲ. ಇಬ್ಬರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ವಿದ್ಯಾರ್ಥಿಗಳ ಮೃತದೇಹವನ್ನು ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ನೀರಿನಿಂದ ಹೊರತೆಗೆದಿದ್ದಾರೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.



# ಸರಿಯಾಗಿ ಮುಚ್ಚದ ಕತ್ತರಿಸಿದ ಕಾಂಕ್ರೀಟ್ ರಸ್ತೆಗಳಿಂದ ಅಪಘಾತ

**ಚಿತ್ರದುರ್ಗ:** ಚಿತ್ರದುರ್ಗದ ಹಾಗೂ ಹಲವಾರು ಊರುಗಳಲ್ಲೂ ಸಹ ಕಾಂಕ್ರೀಟ್ ರಸ್ತೆಗಳನ್ನ ಮಧ್ಯಮಧ್ಯ ಕತ್ತರಿಸಿ, ಪೈಪ್ಗಳನ್ನ ಅಳವಡಿಸಿ, ಕೇಬಲ್ ಗಳನ್ನ ಅಳವಡಿಸಿ, ಅವುಗಳನ್ನು ಸರಿಯಾಗಿ ಮತ್ತೆ ಕಾಂಕ್ರೀಟ್ನಿಂದ ಅಥವಾ ಸಿಮೆಂಟ್ ನಿಂದ ಅಥವಾ ಟಾರು ಮಿಶ್ರಿತ ಜಲ್ಲಿಯಿಂದ ಮುಚ್ಚದಲೇ ಬಿಟ್ಟಿರುವುದರಿಂದ ರಸ್ತೆಯಲ್ಲಿ ದ್ವಿಚಕ್ರ ವಾಹನಗಳು ಅಪಘಾತಕ್ಕೀಡಾಗುತ್ತಿವೆ, ಕತ್ತರಿಸಿದ ಕಾಂಕ್ರೀಟ್ ರಸ್ತೆಗಳನ್ನ ಸರಿಯಾಗಿ ಕಾಂಕ್ರೀಟ್ ಮಿಶ್ರಣದಿಂದಲೇ ಮುಚ್ಚಿ ದ್ವಿಚಕ್ರ, ತ್ರಿಚಕ್ರ ಮತ್ತು ಸೈಕಲ್ ಸವಾರರಿಗೆ, ವಾಹನ ಚಾಲಕರಿಗೆ ಸುರಕ್ಷಿತವಾಗಿ ಚಾಲನೆ ಮಾಡಲು ಅನುಕೂಲ ಮಾಡಿಕೊಡಿ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಜಿಲ್ಲಾಡಳಿತದ, ನಗರಸಭೆಯ ಅಧಿಕಾರಿಗಳಿಗೆ ವಿನಂತಿಸಿಕೊಂಡಿದ್ದಾರೆ.

ಕತ್ತರಿಸಿ ಗುಂಡಿ ಮಾಡಿದ ಕಾಂಕ್ರೀಟ್ ರಸ್ತೆಗಳನ್ನ ಸರಿಯಾಗಿ ಮುಚ್ಚಿದರೆ ಮಾತ್ರ ವಾಹನ ಚಾಲಕರಿಗೆ ಸುರಕ್ಷಿತ ವಾಹನ ಚಾಲನೆ ಮಾಡಲು ಅನುಕೂಲಕರವಾಗುತ್ತದೆ, ಇಲ್ಲದಿದ್ದರೆ ಪ್ರತಿ 100 ಮೀಟರ್ ಗೆ ಒಂದೊಂದು ಕತ್ತರಿಸಿದ ಗುಂಡಿಗಳು ದೊರೆಯುತ್ತಿರುವುದರಿಂದ, ದ್ವಿಚಕ್ರ ವಾಹನಗಳಿಗೆ, ಆಟೋರಿಕ್ಷಾ ಗಳಿಗೆ ಅಪಘಾತಗಳು ಹೆಚ್ಚಾಗಿ ಜೀವ ಹಾನಿಯಾಗುತ್ತಿರುವುದನ್ನು ನಗರಸಭೆಯವರು ಜಿಲ್ಲಾಡಳಿತದವರು ಗಮನಿಸಿ ಅವುಗಳನ್ನ ಸರಿಯಾಗಿ ಮುಚ್ಚುವ ಕ್ರಮ ಜರುಗಿಸಬೇಕು ಎಂದು ವಿನಂತಿಸಿಕೊಂಡಿದ್ದಾರೆ.

ನಗರದ ಯಾವುದೇ ಭಾಗದಲ್ಲಿ ನೀವು ಸಂಚರಿಸಿದರು ಸಹ, ಕಾಂಕ್ರೀಟ್ ರಸ್ತೆಗಳನ್ನ ಪ್ರತಿ ಐವತ್ತು ಅಡಿಗೆ ಒಂದೊಂದು ಕತ್ತರಿಸಿದ, ಜೋಡಿಸಿದ ಭಾಗಗಳನ್ನು ನಾವು ನೋಡಬಹುದು. ಕನಿಷ್ಠ ವೇಗದಲ್ಲಿ ಬರುತ್ತಿರುವ ವಾಹನಗಳು ಸಹ ಆ ಗುಂಡಿಯ ಒಳಗಡೆ ಕುಸಿದು, ಮೇಲೆದ್ದು ಸಂಚರಿಸುತ್ತಿರುವುದರಿಂದ, ವಾಹನದ ಚಕ್ರಗಳಿಗೆ, ವಾಹನ ಸವಾರರಿಗೆ, ಏಕಾಏಕಿ ಬ್ರೇಕ್ ಹಾಕಬೇಕು ಹಾಗೂ ನಿಯಂತ್ರಣಕ್ಕೆ ತಂದುಕೊಳ್ಳಬೇಕು. ರಸ್ತೆಯಲ್ಲಿ ಹಂಪ್ಸ್ ಗಳ ಜೊತೆಗೆ ಈ ಕತ್ತರಿಸಿದೆ ಜೋಡಿಸಿದ ರಸ್ತೆಯ ಭಾಗಗಳು ಸಹ ಸಂಚಾರಕ್ಕೆ ಅಡೆತಡೆ ಉಂಟು ಮಾಡುತ್ತಿದ್ದು, ಹೆಚ್ಚಿನ ಮಟ್ಟದ ಅಪಘಾತಗಳಿಗೆ ಆಸ್ಪದ ನೀಡುತ್ತಿದೆ ಎಂದರು.

ನೀರಿನ ಪೈಪು, ಗ್ಯಾಸ್ನ ಪೈಪು, ಕೇಬಲ್ಗಳ ಅಳವಡಿಕೆ, ಈ ರೀತಿ ಹಲವಾರು ರಿಪೇರಿ ಕೆಲಸಗಳಿಗೆ ಕಾಂಕ್ರೀಟ್ ರಸ್ತೆಗಳನ್ನು ಕತ್ತರಿಸಿ ಅವುಗಳನ್ನು ಮತ್ತೆ ಸರಿಯಾಗಿ ಮುಚ್ಚದಲೇ, ಹಾಗೆ ಮಣ್ಣಿನಿಂದ ಮುಚ್ಚಿ ಹೋಗುತ್ತಿರುವುದರಿಂದ ಅದು ಕೆಲವೇ ದಿನಗಳಲ್ಲಿ ಗುಂಡಿಗಳು ತೆರೆದುಕೊಂಡು, ರಸ್ತೆ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂದರು.

ರಸ್ತೆ ಬಗೆಯುವವರು ಜವಾಬ್ದಾರಿಯಿಂದ ಆ ಗುಂಡಿಗಳನ್ನು ಮತ್ತೆ ಕಾಂಕ್ರೀಟ್ ಮಿಶ್ರಣ ಹಾಕಿ, ಬಲಿಷ್ಠವಾಗಿ ಮುಚ್ಚಿದರೆ ಮಾತ್ರ, ಸರಾಗವಾಗಿ ವಾಹನಗಳು ಆ ಗುಂಡಿಯನ್ನು ದಾಟಿಕೊಂಡು ಸಂಚರಿಸಲು ಅನುಕೂಲಕರವಾಗುತ್ತದೆ, ಇಲ್ಲದಿದ್ದರೆ ಅವು ತೆರೆದ ಗುಂಡಿಗಳ ತರ ಪ್ರತಿಯೊಂದು ಗಾಡಿಯು ಸಹ ಅದರಲ್ಲಿ ಕುಸಿದು ಚಲಿಸುವುದರಿಂದ, ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂದರು.

# ತಾಂಡವಪುರ ಗ್ರಾಪಂಗೆ 5ನೇ ಹಣಕಾಸು ಆಯೋಗದ ಸದಸ್ಯರ ಭೇಟಿ: ಕಾರ್ಯವೈಖರಿಗೆ ಮೆಚ್ಚುಗೆ

**ತಾಂಡವಪುರ:** ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮ ಪಂಚಾಯಿತಿಗೆ ಐದನೇ ಹಣಕಾಸು ಆಯೋಗದ ಸದಸ್ಯರು ಭೇಟಿ ನೀಡಿ ಹಣಕಾಸಿನ ಖರ್ಚು ವೆಚ್ಚಗಳ ಬಗ್ಗೆ ಮಾಹಿತಿ ಪಡೆದುಕೊಂಡು ಪಂಚಾಯತಿ ಕಾರ್ಯವೈಕರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು

ಐದನೇ ಹಣಕಾಸು ಆಯೋಗ ಸದಸ್ಯ ಮಹಮ್ಮದ್ ಸನಾವುಲ್ಲ ರವರು ಹಾಗೂ ಆರ್ ಎಸ್ ಪೊಂಡೆ ರವರು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಅವರ ಜೊತೆ ಮಾತನಾಡಿ ಪ್ರತಿವರ್ಷನೂ ಸರ್ಕಾರದ 5ನೇ ಹಣಕಾಸು ಯೋಜನೆಯ ಅನುದಾನ ಪಂಚಾಯತಿಗೆ ಸಕಾಲದಲ್ಲಿ ಬರುತ್ತಿದೆಯೇ ಹಣವನ್ನು ಪಂಚಾಯತಿಯ ಅಭಿವೃದ್ಧಿಗೆ ಬಳಸಿಕೊಳ್ಳುತ್ತಿದ್ದೀರಾ ಎಂದು ಮಾಹಿತಿ ಪಡೆದುಕೊಂಡರು ಇದೇ ವೇಳೆ ಮಾತನಾಡಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ರವರು ಐದನೇ ಹಣಕಾಸು ಯೋಜನೆಯ ಅನುದಾನವು ನಮ್ಮ ಪಂಚಾಯಿತಿಗೆ ಬರುತ್ತಿದ್ದು ನಾವು ಆ ಅನುದಾನವನ್ನು ಬಳಸಿಕೊಂಡು ಪಂಚಾಯತಿಯ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇವೆ ಎಂದು ತಿಳಿಸಿದರು

ಇದೆ ವೇಳೆ ಪಂಚಾಯಿತಿಯ ಸದಸ್ಯರುಗಳು ಮಾತನಾಡಿ ನಮ್ಮ ಪಂಚಾಯತಿ ವ್ಯಾಪ್ತಿಯ ಕೈಗಾರಿಕಾ ಪ್ರದೇಶದಲ್ಲಿ ಹೊಸದಾಗಿ ಹಲವಾರು ಕಂಪನಿಗಳು ಬರುತ್ತಿದ್ದು ಕೆಲವು ಕಂಪನಿಗಳ ಮಾಲೀಕರು ನಾವು ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ಭೂಮಿಯನ್ನು ಪಡೆದುಕೊಂಡಿದ್ದೇವೆ ಅವರಿಗೆ ನಾವು ತೆರಿಗೆಯನ್ನು ಕೊಡುತ್ತೇವೆ ನಿಮ್ಮ ಪಂಚಾಯತಿಗೆ ನಾವು ತೆರಿಗೆ ಕಟ್ಟುವ ಅವಶ್ಯಕತೆ ಇಲ್ಲ ಎಂದು ಹೇಳುತ್ತಾರೆ



ಎಂದು ಸದಸ್ಯರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಹಲವಾರು ಸಮಸ್ಯೆಗಳನ್ನು ಐದನೇ ಹಣಕಾಸು ಆಯೋಗದ ಸದಸ್ಯರ ಗಮನಕ್ಕೆ ತಂದರು

ಸಮಸ್ಯೆ ಆಲಿಸಿದ ಸದಸ್ಯರುಗಳು ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ಭೂಮಿ ಪಡೆದುಕೊಂಡಿದ್ದರು ಸಹ ಆ ಭೂಮಿಯಲ್ಲಿ ಕೈಗಾರಿಕೆಯಾಗಲಿ ಮತ್ತೊಂದು ಕಟ್ಟಡ ನಿರ್ಮಾಣಗೊಂಡರು ಸಹ ಅಂಥವರು ಗ್ರಾಮ ಪಂಚಾಯತಿಗೆ ತೆರಿಗೆಯನ್ನು ಕಟ್ಟಲೇಬೇಕು ಇದರಲ್ಲಿ ಯಾವುದೇ ಅನುಮಾನ ಬೇಡ ಎಂದರು

ನಿಮ್ಮ ಪಂಚಾಯತಿ ವ್ಯಾಪ್ತಿಯಲ್ಲಿ ಕೈಗಾರಿಕೆಗಳು ಇರುವುದರಿಂದ ಪಂಚಾಯತಿಯ ಅಭಿವೃದ್ಧಿಗೆ ಅನುದಾನ ಕೊರತೆ ಇಲ್ಲ ಸರ್ಕಾರದಿಂದ ಬರುವಂತಹ ಬಳಸಿಕೊಂಡು ಮತ್ತಷ್ಟು ಅಭಿವೃದ್ಧಿ ಮಾಡುವ ಮೂಲಕ ಪಂಚಾಯತಿಯನ್ನು ಉನ್ನತ ಮಟ್ಟಕ್ಕೆ ಕೊಂಡೋಯಿರಿ ಎಂದು ಸಲಹೆ ನೀಡಿದರು

ಮೈಸೂರು ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳಾದ ಕೆಂಪೇಗೌಡ ಯಾಲಕ್ಕಿ ಗೌಡ ಪ್ರಭುಸ್ವಾಮಿ ತಾಲೂಕು ಪಂಚಾಯತಿ ಕಾರ್ಯನಿರ್ವಾಧಿಕಾರಿ ಜರಾಲ್ಡ್ ರಾಜೇಶ್ ಗ್ರಾಮ ಪಂಚಾಯತಿ ಅಧ್ಯಕ್ಷ ನಾಗಮ್ಮ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಲೆಕ್ಕ ಸಹಾಯಕ ಎಸ್ ಪುಟ್ಟರಾಜು ಕಾರ್ಯದರ್ಶಿ ಕೆಕೆ ಮಾರಯ್ಯ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀಕಂಠಸ್ವಾಮಿ ಎನ್ ಚಂದ್ರು, ಸಿದ್ದಮ್ಮ ಲೀಲಾವತಿ ಪ್ರಭುಸ್ವಾಮಿ ಮಧುರ ಅನಂತ್ ಸಿಎನ್ ಚಂದ್ರು, ಕೆ ರಾಜು ಮಧು ಪಾಟೀಲ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಶಿವರಾತ್ರಿ ಪ್ರಯುಕ್ತ ಪಾದಾಯಾತ್ರೆಗಳಿಂದ ಅದ್ದೂರಿ ಗಿರಿಜಾ ಕಲ್ಯಾಣೋತ್ಸವ

**ರಾಜರಾಜೇಶ್ವರಿನಗರ:** ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ 15ನೇ ವರ್ಷದ ಧರ್ಮಸ್ಥಳ ಪಾದಯಾತ್ರಾ ಸೇವಾ ಸಮಿತಿ ಹಮ್ಮಿಕೊಂಡಿದ್ದ ಗಿರಿಜಾ ಕಲ್ಯಾಣ ಮಹೋತ್ಸವ, ವಿವಿಧ ಪೂಜೆ, ಪುರಸ್ಕಾರ, ಹೋಮ, ಹವನಗಳು ಮಲ್ಲತ್ತಹಳ್ಳಿಯಲ್ಲಿ ಭಕ್ತಾಧಿಗಳು, ಪಾದಯಾತ್ರೆಗಳು ನಡೆಸಿಕೊಟ್ಟರು. ಬೆಂಗಳೂರು ಕೇಂದ್ರ ಜಿಲ್ಲಾ ಬಿಜೆಪಿ ಎಸ್ ಸಿಮೋರ್ಚಾ ಉಪಾಧ್ಯಕ್ಷ ಎಂ.ಮಂಜುನಾಥ್ ಮಾತನಾಡಿ 15 ವರ್ಷಗಳಿಂದ ನೂರಾರು ಭಕ್ತಾಧಿಗಳು ಪಾದಯಾತ್ರೆ ಮೂಲಕ ಧರ್ಮಸ್ಥಳಕ್ಕೆ ತೆರಳಿ ಶ್ರೀಮಂಜುನಾಥಸ್ವಾಮಿ ದೇವರ ದರ್ಶನ ಪಡೆಯುತ್ತಿದ್ದಾರೆ. ಪಾದಯಾತ್ರೆ ಸಮಯದಲ್ಲಿ ದೇವರಧ್ಯಾನ, ಭಜನೆ, ನಾಮಸ್ಮರಣೆ ಮೂಲಕ ಭಗವಂತನನ್ನು ಕಾಣುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಶಂಸೆ ವ್ಯಕ್ತ ಪಡಿಸಿದರು. ಮುಖಂಡರಾದ ಜಯರಾಮಯ್ಯ, ಶಿವಶಂಕರ್, ಹನುಮೇಗೌಡ, ಚಿಕ್ಕಣ್ಣ, ಹನುಮಯ್ಯಕುಮಾರ್ ಇದ್ದರು.



# ನೂತನ ದೇವಸ್ಥಾನದ ಪೂಜಾ ಮಹೋತ್ಸವ

**ಮಂಡ್ಯ:** ತಾಲೂಕು ಹೊಳಲು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಮುನೇಶ್ವರ ಸ್ವಾಮಿ, ಶ್ರೀ ಪಾರ್ವತಮ್ಮ ದೇವಿ, ಶ್ರೀ ದೊಡ್ಡಮ್ಮತಾಯಿ ಹಾಗೂ ಶ್ರೀ ಚಿಕ್ಕಮ್ಮ ದೇವಿ, ದೇವಸ್ಥಾನ ದೇವರುಗಳ ವಿಗ್ರಹ ಪ್ರತಿಷ್ಠಾಪನೆ ಕಾರ್ಯಕ್ರಮವು ಜರುಗಿತು. ದಿನಾಂಕ 6.2.2025ನೇ ಗುರುವಾರ ಸಂಜೆ ಗುರು ಗಣಪತಿ ಪೂಜೆ ,ನವಗ್ರಹ ಪೂಜೆ, ವಾಸ್ತು ಪೂಜೆ , ಗಣಪತಿ ಹೋಮ, ನವಗ್ರಹ ಹೋಮ ದುರ್ಗಾ ಹೋಮ, ಶಾಂತಿ ಹೋಮ, ಹಾಗೂ ಮಹಾಮಂಗಳಾರತಿ ಕಾರ್ಯಕ್ರಮ. ದಿನಾಂಕ 07.02.2025ನೇ ಶುಕ್ರವಾರ ಬೆಳಿಗ್ಗೆ: 5 ಗಂಟೆಯಿಂದ 6 ಗಂಟೆವರೆಗೆ ಪ್ರಾಣ ಪ್ರತಿಷ್ಠೆ, ಪ್ರತಿಷ್ಠಾಪನ ಹೋಮ, ಅಮ್ಮನವರಿಗೆ ಪಂಚಾಮೃತ ಅಭಿಷೇಕ, ವಿಶೇಷ ಹೂವಿನ ಅಲಂಕಾರ ಅರ್ಚನೆ ಮಹಾಮಂಗಳಾರತಿ ನೆರವೇರಿಸಲಾಯಿತು.



ದೇವತಾ ಕಾರ್ಯಕ್ರಮವನ್ನು ಮಂಡ್ಯದ ಅರ್ಚಕರಾದ ಮಂಜು ಉಡುಪ, ತಂಡದವರಿಂದ ಪೂಜಾ ವಿಧಿ ವಿಧಾನವನ್ನು ನೆರವೇರಿಸಿ ಕೊಟ್ಟರು.

ಈ ಸಂದರ್ಭದಲ್ಲಿ ಮನ್ಮುಲ್ ನಿರ್ದೇಶಕರಾದ ಜೆಡಿಎಸ್. ಮುಖಂಡರಾದ ಶಿವಕುಮಾರ್, ಜೆಡಿಎಸ್ ಮುಖಂಡ ರಾಮಚಂದ್ರು, ಗ್ರಾಮದ ಮುಖಂಡರಾದ ಎಚ್. ಸಿ. ಹರಿಪ್ರಸಾದ್, ಎಚ್.ಸಿ.ಶ್ರೀಧರ್, ಎಚ್.ಎಸ್ .ಯೋಗೇಶ್ ಕುಮಾರ್ , ಜಟ್ಟಿ ಕುಮಾರ್, ಪುಟ್ಟಸ್ವಾಮಿ, ಸೂರಿ, ಹೆಚ್.ಎಂ.ಕುಮಾರ್ , ಕೃಷ್ಣ, ಎಚ್ ಡಿ ರವಿ, ಶ್ರೀಮತಿ ಹೊನ್ನಮ್ಮ ಹೆಚ್ .ಬಿ.ರಾಮು, ದೇವರ ದರ್ಶನ ಪಡೆದರು. ಈ ಕಾರ್ಯಕ್ರಮದಲ್ಲಿ ಡೈರಿ ಅಧ್ಯಕ್ಷರಾದ ಶಿವರಾಮು, ಉಪಾಧ್ಯಕ್ಷರಾದ ದೊಡ್ಡ ಸಿದ್ದಯ್ಯ, ಹಾಗೂ ಕುರಟ್ಟಿ ಮಹೇಶ್, ಚಂದು, ಶ್ರೀ ಮುನೇಶ್ವರ ದೇವಸ್ಥಾನ ಸಮಿತಿಯ ಪದಾಧಿಕಾರಿಗಳಾದ ಗುಡ್ಡಪ್ಪ ಸಂತೋಷ್, ಶಿವರಾಂ, ಪವನ್, ಏಳುಮಲೈ, ಶಿವಣ್ಣ, ಗುರುಪ್ರಸಾದ್, ನಾಗರಾಜ್, ಹಾಗೂ ಹೊಳಲು ಗ್ರಾಮಸ್ಥರು ಉಪಸ್ಥಿತರಿದ್ದರು.

ದೇವಸ್ಥಾನದ ದೇವರುಗಳ ವಿಗ್ರಹವನ್ನು ಮಾಡಿದ ಶಿಲ್ಪಿಯಾದ ಅಶೋಕ್ (ಲಕ್ಷ್ಮಿಸಾಗರ) ರವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.



## ಅವಿರೋಧ ಆಯ್ಕೆ

**ರಾಜರಾಜೇಶ್ವರಿನಗರದ ಪ್ರತಿಷ್ಠಿತ ಐಡಿಯಲ್ ಹೋಮ್ಸ್ ಕೋ-ಆಪರೇಟಿವ್ ಹೌಸಿಂಗ್ ಸೊಸೈಟಿ ಸಂಸ್ಥೆಯ ನೂತನ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಆತ್ಮೀಯರು ಹಾಗೂ ಯುವ ನಾಯಕರಾದ ಶ್ರೀ ಕೃಷ್ಣಂ ರಾಜ್ ರವರಿಗೆ ಹೃದಯಪೂರ್ವಕ ಅಭಿನಂದನೆ ಸಲ್ಲಿಸಿದ ಯಶವಂತಪುರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರುಗಳು.**

# ನನಗೆ ಪಕ್ಷ ಮುಖ್ಯವಲ್ಲ ಅಭಿವೃದ್ಧಿ ಮುಖ್ಯ

**ಬೆಂಗಳೂರು:** ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ನಡೆಸುತ್ತಿದ್ದು, ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಕೈಜೋಡಿಸಿದ್ದೇನೆ ಎಂದು ಶಾಸಕ ಎಸ್ .ಟಿ.ಸೋಮಶೇಖರ್ ಹೇಳಿದರು

ತಾವರೆಕೆರೆ ಹೋಬಳಿಯ ದೊಡ್ಡ ಆಲದಮರ ಬಳಿ ನಡೆದ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳ ನೇಮಕಾತಿ ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿ ಕ್ಷೇತ್ರದ ಅಭಿವೃದ್ದಿ ಮುಖ್ಯ ಜನರ ಸಮಸ್ಯೆ ಬಗೆಹರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಲವು ಯೋಜನೆ ಮಂಜೂರಾತಿಮಾಡಿ 300 ಕೋಟಿ ರೂ ಅನುದಾನ ಬಿಡುಗಡೆ ಮಾಡಿದ್ದಾರೆ ಎಂದ ಅವರು 3 ವಿಧಾನ ಸಭಾಕ್ಷೇತ್ರವಾಗುವಷ್ಟು ಯಶವಂತಪುರವಾಗಿದ್ದು, ತುಮಕೂರುರಸ್ತೆಯ ದೊಡ್ಡ ಬಿದರಕಲ್ಲುನಿಂದ ಮಾಗಡಿರಸ್ತೆಯ ಹೇರೋಹಳ್ಳಿ, ತಿಪ್ಪಗೊಂಡನಹಳ್ಳಿಯಿಂದ, ಮಂಚನಬೆಲೆ ಜಲಾಶಯ ಬಳಿಯ ಚಿಕ್ಕನಹಳ್ಳಿ, ಮೈಸೂರುರಸ್ತೆಯ ಬಿಡದಿಗೆ 5 ಕಿ.ಮೀ. ದೂರವಿರುವ ಹಂಪಾಪುರ, ಹಾರೋಹಳ್ಳಿಗೆ 6 ಕಿ.ಮೀ. ರಾವುಗೊಡ್ಲು, ರಾಜರಾಜೇಶ್ವರಿನಗರ ಬಳಿಯ ಕೆಂಚೇನಹಳ್ಳಿಯ ರಾಜರಾಜೇಶ್ವರಿ ದೇವಸ್ಥಾನದವರೆಗೆ ಬಹುದೊಡ್ಡ ಕ್ಷೇತ್ರವಾಗಿದ್ದು ನನಗೆ ಅಭಿವೃದ್ಧಿ ಮುಖ್ಯ ಎಂದರು.

ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹನುಮಂತರಾಯಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ ಮುಖಂಡರು ಮತ್ತು ಕಾರ್ಯಕರ್ತರು ಸರ್ಕಾರದ ಗ್ಯಾರಂಟಿ ಯೋಜನೆಗಳು, ಸವಲತ್ತುಗಳನ್ನು ನಿಜವಾದ ಫಲಾನುಭವಿಗಳನ್ನು ತಲುಪಿಸುವ ಮೂಲಕ ಸಂಘಟನೆ ಮಾಡಬೇಕು ಮುಂಬರುವ ಬಿಬಿಎಂಪಿ, ತಾಲ್ಲೂಕು, ಜಿಲ್ಲಾ ಪಂಚಾಯಿತಿಯಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯಲು ಶ್ರಮವಹಿಸಿ ರೈತರು, ಬಡವರು, ಶ್ರಮಿಕರು, ನೊಂದವರ ಸೇವೆಯನ್ನು ಯಾರು ಮಾಡುತ್ತಾರೊ ಅಂತಹವರು ಜನಮಾನಸದಲ್ಲಿ ಉಳಿಯುತ್ತಾರೆ ಎಂದರು

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರೇವಣ್ಣ ಸಿದ್ದಯ್ಯ, ಜಿಲ್ಲಾಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ರೋಹಿಣಿ ಸುರೇಶ್, ಬ್ಲಾಕ್ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸಾವಿತ್ರಮ್ಮ, ಕೆಂಚನಪುರ ತಿಮ್ಮೇಗೌಡ, ನಾಗರಾಜು, ಸಾಕಮ್ಮ ಮಾತನಾಡಿದರು.



**ತಾವರೆಕೆರೆ ಬ್ಲಾಕ್ ಕಾಂಗ್ರೆಸ್ ನ ನೂತನ ಪದಾಧಿಕಾರಿಗಳಿಗೆ ಶಾಸಕ ಎಸ್ ಟಿ ಸೋಮಶೇಖರ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿದರು. ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹನುಮಂತರಾಯಪ್ಪ, ರೇವಣ್ಣ ಸಿದ್ದಯ್ಯ, ರೋಹಿಣಿ ಸುರೇಶ್ ಇದ್ದಾರೆ.**

# ಗೃಹ ಪ್ರವೇಶದಲ್ಲಿಕನ್ನಡ ಪುಸ್ತಕ ವಿತರಣೆ

**ಮೈಸೂರು:** ಬನ್ನೂರುರಸ್ತೆಯ ವಾಜಮಂಗಲ ಬಡಾವಣೆಯಲ್ಲಿಇಂದು ನೂತನವಾಗಿ ನಿರ್ಮಿಸಿರುವ ಸಾಹಿತಿ ಹಾಗೂ ಉಪನ್ಯಾಸಕಡಾ. ಉಮೇಶ್ ಬೇವಿನಹಳ್ಳಿ ರವರ ಸಿರಿಗನ್ನಡ ನಿವಾಸ ಗೃಹ ಪ್ರವೇಶಕಾರ್ಯಕ್ರಮದಲ್ಲಿ ಬಂದ ಅತಿಥಿಗಳಿಗೆ ಕನ್ನಡ ಪುಸ್ತಕಗಳನ್ನು ಉಡುಗೊರೆಯಾಗಿ ವಿತರಿಸಿ ಮಾತನಾಡಿದರು. ಇಂದಿನ ಮಕ್ಕಳು ಪುಸ್ತಕವನ್ನುಓದುವ ಹವ್ಯಾಸ ಬೆಳಸಿಕೊಳ್ಳಬೇಕು.ಜ್ಞಾನವನ್ನು ಸಂಪಾದಿಸುವುದು ಓದಿನಿಂದ ಮಾತ್ರ ಸಾಧ್ಯ. ಇತ್ತೀಚಿನ ದಿನಗಳಲ್ಲಿ ಜನರುಆಡಂಬರಕ್ಕೆ ಮನಸೋತುಐಸಾರಾಮಿ ಬದುಕಿನಲ್ಲಿಜೀವನ ನಡೆಸುತ್ತಿದ್ದಾರೆ.ಇದು ಬದುಕಿನಕ್ಷಣಿಕತೆ.ಜೀವನದ ಮೌಲ್ಯ ಹೆಚ್ಚಲು ಅನುಭವ ಹೊಂದಲು ಪುಸ್ತಕಗಳು ಸಹಕಾರವಾಗುತ್ತವೆಆದ್ದರಿಂದಯುವಕರು ಓದಿನ ಸಂಸ್ಕೃತಿಯನ್ನು ಹೆಚ್ಚಿಸಿಕೊಳ್ಳಬೇಕೆಂದು ತಿಳಿಸಿ ಶುಭ ಹಾರೈಸಿದರು. ಸಾಹಿತಿ, ಉಪನ್ಯಾಸಕ ಬೇವಿನಹಳ್ಳಿ ಮಾತನಾಡಿ ಸಭೆ ಸಮಾರಂಭ, ಶಾಲಾ ಕಾಲೇಜುಗಳಲ್ಲಿ ಬಹುಮಾನವಾಗಿ ಪುಸ್ತಕಗಳನ್ನೇ ಹೆಚ್ಚು ಹೆಚ್ಚು ನೀಡುವಂತಾಗಬೇಕು, ಆದಾಗ ಮಾತ್ರ ಮಕ್ಕಳು ಬೌದ್ಧಿಕವಾಗಿ ಹೆಚ್ಚು ಬೆಳೆಯುತ್ತಾರೆ.ಇಂದು ನಾವು ಮಕ್ಕಳಿಗಾಗಿ ನೀತಿ ಕತೆಗಳು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಬದುಕು ಬರಹ, ಕನ್ನಡ ನಾಡು ನುಡಿಗೆ ಸೇವೆಗೈದ ಅನೇಕ ಜನ ಮಹನೀಯರ ಪುಸ್ತಕಗಳನ್ನು ಬಂದವರಿಗೆಉಡುಗೊರೆಯಾಗಿ ನೀಡುತ್ತಿರುವುದು ಸಂತೋಷತಂದಿದೆ.ಈ ಸಂಸ್ಕೃತಿ ಹೊಸ ತಲೆಮಾರಿಗೆ ಸ್ಫೂರ್ತಿಯಾಗಲಿ ಎಂದು ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿಕೆಸರೆ ಸರ್ಕಾರಿ ಪದವಿಪೂರ್ವಕಾಲೇಜಿನ ಪ್ರಾಂಶುಪಾಲರಾದ ಬಾಲಸುಬ್ರಮಣ್ಯಂ, ಶ್ರೀಮತಿ ಅಶ್ವಿನಿ ಉಮೇಶ್, ಉಪನ್ಯಾಸಕ ಮಹದೇವುಇತರರು ಭಾಗಿಯಾಗಿದ್ದರು.



**ಗೃಹ ಪ್ರವೇಶದಲ್ಲಿಕನ್ನಡ ಪುಸ್ತಕ ವಿತರಣೆ ಹಾಗೂ ಓದು ಸಾಹಿತಿ ಹಾಗೂ ಉಪನ್ಯಾಸಕಡಾ.ಉಮೇಶ್ ಬೇವಿನಹಳ್ಳಿ ರವರ ಸಿರಿಗನ್ನಡ ನಿವಾಸ ಗೃಹ ಪ್ರವೇಶಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದರವರು ಪುಸ್ತಕಗಳನ್ನು ಉಡುಗೊರೆಯಾಗಿ ನೀಡಿ ಓದಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ಕೆಸರೆ ಸರ್ಕಾರಿ ಪದವಿಪೂರ್ವಕಾಲೇಜಿನ ಪ್ರಾಂಶುಪಾಲರಾದ ಬಾಲಸುಬ್ರಮಣ್ಯಂ, ಶ್ರೀಮತಿ ಅಶ್ವಿನಿ ಉಮೇಶ್, ಉಪನ್ಯಾಸಕ ಮಹದೇವುರವರನ್ನುಕಾಣಬಹುದು**

ಸಂಜೆ ಮುಗಿಲು
ಸೋಮವಾರ 10.2.2025

# ಸಂಜೆ ಟಿಪ್ಸ್

## ಸೃಜನಶೀಲ ಮೇಳ

ಅಗಸ್ತ್ಯ ಇಂಟರ್ನ್ಯಾಷನಲ್ ಫೌಂಡೇಷನ್ ಆಯೋಜಿಸಿದ್ದ ''ಆಹಾ! ಕಲೆಕ್ಟಿವ್ 2025'' ಉತ್ಸವದಲ್ಲಿ ಸೃಜನಶೀಲತೆ ಮತ್ತು ಆವಿಷ್ಕಾರ ಒಗ್ಗೂಡಿ ಮಕ್ಕಳ ಕಲಾ ಅಭಿವ್ಯಕ್ತಿಗೆ ವೇದಿಕೆ ಒದಗಿಸಲಿದೆ. 2,000ಕ್ಕೂ ಹೆಚ್ಚು ಸರ್ಕಾರಿ ಮಾಧ್ಯಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳು ಕಲೆ, ಛಾಯಾಗ್ರಹಣ, ಡಿಜಿಟಲ್ ಮಾಧ್ಯಮ ಮತ್ತು ವಾಸ್ತುಶಿಲ್ಪಗಳ ಮೂಲಕ ಯುವ ಮನಸ್ಸುಗಳಲ್ಲಿ ಆವಿಷ್ಕಾರ ಮತ್ತು ತಾಜಾ ಚಿಂತನೆಯನ್ನು ಬಿಂಬಿಸಲು ಸಾಧನವಾಗಿ ಬಳಸಲಿದ್ದಾರೆ. ಫೆಬ್ರವರಿ 12-13, 2025ರಂದು ದೊಮ್ಮಲೂರಿನ ಬೆಂಗಳೂರು ಇಂಟರ್ನ್ಯಾಷನಲ್ ಸೆಂಟರ್ ನಲ್ಲಿ ನಡೆಯಲಿರುವ ಈ ಮೇಳವು ಸ್ಥಳೀಯ ಕಾಲೇಜು ವಿದ್ಯಾರ್ಥಿಗಳಿಂದ, ಅನುಭವಿ ಛಾಯಾಗ್ರಾಹಕರು ಮತ್ತು ವೃತ್ತಿಪರ ಕಲಾವಿದರಿಂದ ಕಾರ್ಯಾಗಾರಗಳು ಒಳಗೊಂಡಿರುತ್ತವೆ. ವಿದ್ಯಾರ್ಥಿಗಳು ಹೇಗೆ ಸಾಂಪ್ರದಾಯಿಕ ಮತ್ತು ಆಧುನಿಕ ಕಲಾ ಮಾಧ್ಯಮಗಳನ್ನು ಹೊಸ ಬಗೆಯ ಆಲೋಚನೆಗಳನ್ನು ರೂಪಿಸಲು ಬಳಸಿಕೊಳ್ಳಲಾಗುತ್ತದೆ ಎಂದು ಆವಿಷ್ಕರಿಸುತ್ತಾರೆ. ಪ್ರದರ್ಶನವು ಭಾಗವಹಿಸುವ ವಿದ್ಯಾರ್ಥಿಗಳ ಗಡಿಯಿಲ್ಲದ ಕಲ್ಪನೆ ಮತ್ತು ಸೃಜನಶೀಲ ಸಾಮರ್ಥ್ಯದ ಕಿರುನೋಟ ನೀಡಿತು.ಈ ಮೇಳದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಚಲನಚಿತ್ರಗಳು, ಛಾಯಾಚಿತ್ರಗಳು ಮತ್ತು ಕಥೆಗಳನ್ನು ಪ್ರದರ್ಶಿಸಲಿದ್ದು ಅವರ ಧ್ವನಿಗಳು ಮತ್ತು ಕಲಾತ್ಮಕ ಕೌಶಲ್ಯಗಳನ್ನು ಬಿಂಬಿಸಲಿದ್ದಾರೆ. ''ಇಂದಿನ ತೀವ್ರವಾಗಿ ವಿಕಾಸಗೊಳ್ಳುತ್ತಿರುವ ವಿಶ್ವದಲ್ಲಿ ಸೃಜನಶೀಲತೆಯು ಕಲಾ ಕೌಶಲ್ಯಕ್ಕಿಂತ ಹೆಚ್ಚಿನದಾಗಿದೆ. ಇದು ಸಮಸ್ಯೆ ಪರಿಹರಿಸುವ ಮತ್ತು ಆವಿಷ್ಕಾರದ ಪ್ರಮುಖ ಅಂಶವಾಗಿದೆ'' ಎಂದು ಅಗಸ್ತ್ಯ ಇಂಟರ್ನ್ಯಾಷನಲ್ ಫೌಂಡೇಷನ್ ಅಧ್ಯಕ್ಷ ರಾಮ್ಜಿ ರಾಘವನ್ ಹೇಳಿದರು. ''ಸಾಂಪ್ರದಾಯಿಕ ಕಲಾ ಮಾದರಿಗಳನ್ನು ಡಿಜಿಟಲ್ ಸಾಧನಗಳು ಮತ್ತು ಉದಯೋನ್ಮುಖ ತಂತ್ರಜ್ಞಾನಗಳೊಂದಿಗೆ ಸಂಯೋಜಿಸುವ ಮೂಲಕ ಈ ವಿದ್ಯಾರ್ಥಿಗಳಿಗೆ ಪ್ರಯೋಗ ನಡೆಸಲು, ಭಿನ್ನವಾಗಿ ಆಲೋಚಿಸಲು ಮತ್ತು ಅವರ ಕಲಿಕೆಯ ಎಲ್ಲ ಆಯಾಮಗಳಲ್ಲಿ ಆವಿಷ್ಕಾರ ಅಪ್ಪಿಕೊಳ್ಳಲು ಅವಕಾಶ ನೀಡುತ್ತದೆ'' ಎಂದರು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

**35.'ದುರ್ಗಾಸ್ತಮಾನ' - ಈ ಕೃತಿಯನ್ನು ರಚಿಸಿದವರು ಯಾರು ?**

(ಉತ್ತರ)

[illegible]

## ತೊಂಡೆಕಾಯಿ ಪಲ್ಯ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ತೊಂಡೆಕಾಯಿ - 400 ಗ್ರಾಮ್ ಅರಶಿನ ಎಣ್ಣೆ ಸಾಸಿವೆ ಜೀರಿಗೆ ಒಣ ಮೆಣಸು ತೆಂಗಿನಕಾಯಿ ಉದ್ದಿನ ಬೇಳೆ ಕಡಲೆ ಬೇಳೆ ಕರಿಬೇವು ಹುಣಸೆ ಹುಳಿ

### ಮಾಡುವ ವಿಧಾನ

ತೊಂಡೆಕಾಯಿಯನ್ನು ಚೆನ್ನಾಗಿ ತೊಳೆದು ಬಳಿಕ ವೃತ್ತಾಕಾರವಾಗಿ ಕತ್ತರಿಸಿಕೊಳ್ಳಬೇಕು. ಬಳಿಕ ಇದನ್ನು ಒಂದು ಕುಕ್ಕರ್ಗೆ ಹಾಕಿ ಬೇಯಿಸಿಕೊಳ್ಳಬೇಕು. ಕುಕ್ಕರ್ಗೆ ಹಾಕಿ ಅದಕ್ಕೆ ಉಪ್ಪು, ಅರಶಿನ, ಎಣ್ಣೆ, ನೀರು ಹಾಕಿಕೊಂಡು ಮಿಕ್ಸ್ ಮಾಡಿ ಕುಕ್ಕರ್ ಮುಚ್ಚಳ ಮುಚ್ಚಿ ಒಂದು ಸೀಟಿ ಹೊಡೆಸಬೇಕು. ಒಂದು ಸೀಟಿ ಹೊಡೆದಾಗ ಒಲೆ ಆಫ್ ಮಾಡಿ. ಬಳಿಕ ಒಂದು ಪಾತ್ರೆಯನ್ನು ಒಲೆ ಮೇಲೆ ಇಟ್ಟು ಎಣ್ಣೆ ಹಾಕದೆಯೇ ಸಾಸಿವೆ, ಜೀರಿಗೆ, ಮೆಣಸು, ಕರಿಬೇವು ಹಾಕಿ ಫ್ರೈ ಮಾಡಿಕೊಳ್ಳಬೇಕು. ಇದಕ್ಕೆ ಎಣ್ಣೆ ಮಾತ್ರ ಹಾಕಬೇಡಿ. ಬಳಿಕ ಇದನ್ನು ಬದಿಗಿಟ್ಟುಕೊಳ್ಳಿ. ಇದು ತಣ್ಣಗಾದ ಬಳಿಕ ಸಣ್ಣ ಮಿಕ್ಸಿ ಜಾರ್ಗೆ ಹಾಕಿ ಸಣ್ಣಗೆ ರುಬ್ಬಿಕೊಳ್ಳಬೇಕು. ಬಳಿಕ ರುಬ್ಬಿಕೊಂಡ ಮಸಾಲೆಗೆ ತೆಂಗಿನಕಾಯಿ ಹಾಕಿ ಮತ್ತೆ ರುಬ್ಬಿಕೊಳ್ಳಬೇಕು. ಈಗ ರುಬ್ಬಿಕೊಂಡ ಮಸಾಲೆಯನ್ನು ಬದಿಗಿಟ್ಟುಕೊಳ್ಳಿ. ಈ ಮಸಾಲೆ ತರಿತರಿಯಾಗಿ ಇರಲಿ. ಈಗ ಬೇಯಿಸಿಕೊಂಡಿರುವ ತೊಂಡೆಕಾಯಿಯನ್ನು ತೆಗೆದುಕೊಂಡು ಅದನ್ನು ಒಂದು ಪಾತ್ರೆಗೆ ಹಾಕಿಕೊಳ್ಳಿ. ಈಗ ಒಲೆ ಮೇಲೆ ಒಂದು ಪಾತ್ರೆ ಇಟ್ಟು ಇದಕ್ಕೆ ಎಣ್ಣೆ, ಜೀರಿಗೆ, ಸಾಸಿವೆ, ಉದ್ದಿನ ಬೇಳೆ, ಕಡಲೆಬೇಳೆ, ಕರಿವೇವು ಹಾಕಿ ಫ್ರೈ ಮಾಡಿಕೊಳ್ಳಿ. ಈಗ ರುಬ್ಬಿಕೊಂಡಿರುವ ಮಸಾಲೆಯನ್ನು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈಗ ಬೇಯಿಸಿಕೊಂಡಿರುವ ತೊಂಡೆಕಾಯಿಯನ್ನು ಹಾಕಿ ಮಿಕ್ಸ್ ಮಾಡಿ. ಕೊನೆಯದಾಗಿ ಸ್ವಲ್ಪ ಹುಣಸೆ ಹುಳಿ ಹಿಂಡಿಕೊಳ್ಳಿ. ನಿಮಗೆ ಎಷ್ಟು ಡ್ರೈ ಬೇಕೋ ಅಷ್ಟು ಡ್ರೈ ಮಾಡಬಹುದು.

# ಸತ್ಯ ಬಿಚ್ಚಿಟ್ಟ ಖ್ಯಾತ ನಟಿ ರೇಖಾ!



ರೇಖಾ ಅವರ ವೃತ್ತಿಪರ ವೃತ್ತಿಜೀವನ ಎಷ್ಟು ಅದ್ಭುತವಾಗಿದೆಯೋ, ಅವರ ವೈಯಕ್ತಿಕ ಜೀವನ ಅಷ್ಟೇ ನೋವಿನಿಂದ ಕೂಡಿದೆ. ಬಾಲಿವುಡ್ ಮೆಗಾಸ್ಟಾರ್ ಅಮಿತಾಭ್ ಬಚ್ಚನ್ ಜೊತೆ ರೇಖಾ ಅವರ ಅಫೇರ್ ಬಗ್ಗೆ ಸಾಕಷ್ಟು ಚರ್ಚೆ ನಡೆದಿತ್ತು. ಆ ಸಮಯದಲ್ಲಿ ಅಮಿತಾಬ್ ಬಚ್ಚನ್ ಮದುವೆಯಾಗಿತ್ತು.. ಹೀಗಾಗಿ ಅವರು ರೇಖಾ ಅವರೊಂದಿಗಿನ ಸಂಬಂಧದ ಬಗ್ಗೆ ಏನನ್ನೂ ಹೇಳಲಿಲ್ಲ. ನಟಿ ರೇಖಾ 1990 ರಲ್ಲಿ ದೆಹಲಿಯ ದೊಡ್ಡ ಉದ್ಯಮಿ ಮುಖೇಶ್ ಅಗರ್ವಾಲ್ ಅವರನ್ನು ವಿವಾಹವಾದರು. ಮಾಧ್ಯಮ ವರದಿಗಳ ಪ್ರಕಾರ, ಮದುವೆಯಾದ 3 ತಿಂಗಳ ನಂತರ ರೇಖಾ ತನ್ನ ಪತಿ ಮುಖೇಶ್ನೊಂದಿಗೆ ಬೇಸರಗೊಂಡು ಆತನಿಂದ ಬೇರೆಯಾಗಲು ನಿರ್ಧರಿಸಿದ್ದಳು. ಬಳಿಕ ಮದುವೆಯಾದ 7 ತಿಂಗಳಿಗೆ ರೇಖಾ ಅವರ ಪತಿ ಮುಖೇಶ್ ಆತ್ಮಹತ್ಯೆ ಮಾಡಿಕೊಂಡರು..

ಆದರೂ ರೇಖಾ ಇನ್ನೂ ತನ್ನ ಹಣೆಗೆ ಸಿಂಧೂರ ಹಚ್ಚುತ್ತಾರೆ. ವಿವಾಹಿತ ಮಹಿಳೆಯಂತೆಯೇ ಪ್ರತಿ ಕಾರ್ಯಕ್ರಮಕ್ಕೂ ಹಾಜರಾಗುತ್ತಾರೆ.. ರೇಖಾ ಅವರ ಎರಡನೇ ಮದುವೆಯ ಬಗ್ಗೆ ಸಿಮಿ ಗ್ರೆವಾಲ್ ಅವರ ಚಾಟ್ ಶೋನಲ್ಲಿ ಪ್ರಶ್ನಿಸಿದಾಗ, ನಟಿ ಶಾಕಿಂಗ್ ಮಾಹಿತಿಯನ್ನು ರಿವೀಲ್ ಮಾಡಿದರು..

ಆಕೆಯ ಮೊದಲ ಪತಿ ಮುಖೇಶ್ ಸಾವನ್ನಪ್ಪಿದ್ದಾರೆ, ನಟಿ ಎರಡನೇ ಬಾರಿಗೆ ಮದುವೆಯಾಗುತ್ತೀರಾ ಎಂದು ರೇಖಾ ಅವರನ್ನು ಕೇಳಿದಾಗ... ನನ್ನ ಗಂಡನನ್ನು ಹೊರತುಪಡಿಸಿ, ನಾನು ಈ ಮೂವರನ್ನು ಮದುವೆಯಾಗಿದ್ದೇನೆ. ನಾನು ನನ್ನನ್ನು, ನನ್ನ ವೃತ್ತಿಯನ್ನು ಮತ್ತು ನನ್ನ ಹೃದಯದಲ್ಲಿ ನನ್ನ ಅಭಿಮಾನಿಗಳನ್ನು ಮದುವೆಯಾಗಿದ್ದೇನೆ. ಹೀಗಾಗಿ ನನಗೆ ಮೂರು ಮದುವೆಯಾಗಿದೆ. ಮದುವೆಗೆ ಪುರುಷ ಅಗತ್ಯವಿಲ್ಲ. ಮಹಿಳೆ ತನ್ನನ್ನು ತಾನು ರಕ್ಷಿಸಿಕೊಳ್ಳಬಹುದು ಎಂದು ನಟಿ ಶಾಕಿಂಗ್ ಹೇಳಿಕೆ ನೀಡಿದ್ದರು.

# ಕಪ್ಪು ಸೀರೆಯಲ್ಲಿ ಕಂಗೊಳಿಸಿದ ರಮ್ಯಾ



ಕ್ರೇಜಿ ಕ್ವೀನ್ ರಕ್ಷಿತಾ ಸಹೋದರ ರಾಣಾಮದುವೆ ಆರತಕ್ಷತೆ ಫೆ.8ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಅದ್ದೂರಿಯಾಗಿ ಜರುಗಿದೆ. ಈ ಸಂಭ್ರಮದಲ್ಲಿ ಮೋಹಕತಾರೆ ರಮ್ಯಾ ಸ್ಟೈಲೀಶ್ ಆಗಿ ಕಾಣಿಸಿಕೊಂಡು ಎಲ್ಲರ ಗಮನ ಸೆಳೆದಿದ್ದಾರೆ.

ರಾಣಾ ಹಾಗೂ ಫ್ಯಾಷನ್ ಡಿಸೈನರ್ ರಕ್ಷಿತಾಗೆ ಶುಭ ಕೋರಲು ರಮ್ಯಾ ಕೂಡ ಆರತಕ್ಷತೆಗೆ ಆಗಮಿಸಿದ್ದರು. ಒಂದು ಕ್ಷಣ ಮೋಹಕತಾರೆ ರಮ್ಯಾ ಎಂಟ್ರಿ ನೋಡಿ ಅನೇಕರು ದಂಗಾದರು.

ರಕ್ಷಿತಾ ಸಹೋದರನ ಆರತಕ್ಷತೆಯಲ್ಲಿ ಸ್ಲೀವ್ ಲೆಸ್ ಬ್ಲೌಸ್ಗೆ ಕಪ್ಪು ಬಣ್ಣದ ಸೀರೆಯುಟ್ಟು ರಮ್ಯಾ ಮಿರ ಮಿರ ಅಂತ ಮಿಂಚಿದ್ದಾರೆ. ವಯಸ್ಸು 42 ವರ್ಷವಾಗಿದ್ರೂ, ಬಳುಕುವ ಬಳ್ಳಿಯಂತೆ ರಮ್ಯಾ ಕಂಗೊಳಿಸಿದ್ದಾರೆ. ಅವರ ಫಿಟ್ನೆಸ್ಗೆ ಅನೇಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಚಿತ್ರರಂಗಕ್ಕೆ ಬಂದು ಹಲವು ವರ್ಷಗಳು ಕಳೆದಿದ್ರೂ ಕೂಡ ಇಂದಿಗೂ ರಕ್ಷಿತಾ ಹಾಗೂ ರಮ್ಯಾ ನಡುವಿನ ಅದೆಷ್ಟು ಚೆನ್ನಾಗಿದೇ ಎಂಬುದಕ್ಕೆ ರಾಣಾ ಆರತಕ್ಷತೆಯಲ್ಲಿ ಇಬ್ಬರೂ ಇದ್ದ ರೀತಿಯೇ ಸಾಕ್ಷಿಯಾಗಿದೆ. ರಕ್ಷಿತಾರನ್ನು ನೋಡ್ತಿದ್ದಂತೆ ರಮ್ಯಾ ತಬ್ಬಿಕೊಂಡಿದ್ದಾರೆ.

ರಕ್ಷಿತಾ ಹಾಗೂ ರಮ್ಯಾ ಒಂದೇ ಕಾಲಘಟ್ಟದಲ್ಲಿ ಸಿನಿಮಾ ರಂಗದಲ್ಲಿ ಮಿಂಚಿದವರು. ಪುನೀತ್ರಾಜ್ ಕುಮಾರ್ಗೆ ನಾಯಕಿಯರಾಗಿ ಸದ್ದು ಮಾಡಿದವರು.

# ಸಬ್ಬಕ್ಕಿ ಸೋಪ್ಪಿನಗುಣ

## ಹೆಲ್ತ್ ಟಿಪ್ಸ್



ಸಬ್ಬಕ್ಕಿ ಸೊಪ್ಪನ್ನು ಬಳಸಿ ಮಾಡಿದ ಸಾರು ಅಥವಾ ಸೂಪ್ ಕುಡಿದರೆ ಎದೆ ಹಾಲು ಹೆಚ್ಚಾಗುವುದು ಹಾಗೂ ಜೀರ್ಣಕ್ರಿಯೆ ಸರಾಗವಾಗಿ ನಡೆದು ಮಲಬದ್ಧತೆ ಸಮಸ್ಯೆ ಉಂಟಾಗುವುದಿಲ್ಲ.

ಈ ಸೊಪ್ಪಿನಲ್ಲಿ ಅಧಿಕ ಪ್ರಮಾಣದ ಕಬ್ಬಿಣಾಂಶ ಇರುವುದರಿಂದ ಮಕ್ಕಳು ಮತ್ತು ಬಾಣಂತಿಯರಿಗೆ ಉತ್ತಮ ಆಹಾರ. ಬಾಣಂತಿಯರಿಗೆ ಎದೆ ಹಾಲು ಹೆಚ್ಚಿಸಲು ದಕ್ಷಿಣ ಭಾರತದಲ್ಲಿ ಹೆಚ್ಚಾಗಿ ಬಳಕೆಯಲ್ಲಿದೆ. ಸಬ್ಬಸಿಗೆ ಸೊಪ್ಪು ಪಚನಶಕ್ತಿಯನ್ನು ವೃದ್ಧಿಗೊಳಿಸುತ್ತದೆ. ಇವುಗಳಲ್ಲಿ ವಾತಾವರಣ ಉತ್ತೇಜಕ ಮತ್ತು ಮೂತ್ರೋತ್ಪಾದಕ ಗುಣಗಳಿವೆ. ಆಯುರ್ವೇದ ಮತ್ತು ಯುನಾನಿ ವೈದ್ಯ ಪದ್ಧತಿಗಳಲ್ಲಿ ಇವುಗಳ ಬಳಕೆ ಹೆಚ್ಚು. ಸಬ್ಬಕ್ಕಿ ಕಾಳುಗಳನ್ನು ನೀರಿನಲ್ಲಿ ನೆನೆಸಿ ತಿಳಿಯನ್ನು ಗ್ರೈಪ್ ವಾಟರ್ನಲ್ಲಿ ಬಳಸಲಾಗುತ್ತದೆ.

ವಾತ, ಶೂಲೆ, ವಾಕರಿಕೆ ಮತ್ತು ಬಿಕ್ಕಳಿಕೆಯಂತಹ ರೋಗಗಳಿಗೆ ಬಹು ಉಪಯುಕ್ತ. ಸಬ್ಬಸಿಗೆ ಸೊಪ್ಪನ ರಸಕ್ಕೆ ಜೇನು ಬೆರಸಿ ಕುಡಿದರೆ ಅಜೀರ್ಣ, ಹೊಟ್ಟೆಯುಬ್ಬರ ಕಡಿಮೆಯಾಗುತ್ತದೆ. ಹೊಟ್ಟೆನೋವು ಕಡಿಮೆಯಾಗುತ್ತದೆ. ಸಬ್ಬಸಿಗೆ ಸೊಪ್ಪು ನರಗಳಿಗೆ ಶಕ್ತಿಯನ್ನು ನೀಡುತ್ತದೆ, ನಿತ್ಯ ಆಹಾರದಲ್ಲಿ ಸಬ್ಬಸಿಗೆ ಸೊಪ್ಪು ಬಳಸಿದರೆ ನಿದ್ರೆ ಚೆನ್ನಾಗಿ ಬರುತ್ತದೆ. ಅರಿಶಿನದ ಜೊತೆಗೆ ಸಬ್ಬಸಿಗೆ ಸೊಪ್ಪನ್ನು ಅರೆದು ಗಾಯದ ಮೇಲೆ ಹಚ್ಚುವುದರಿಂದ ಗಾಯದ ಊತ, ನೋವು ಕಡಿಮೆಯಾಗುತ್ತದೆ.

ಯಾವುದೇ ಗಾಯಗಳಿಗೆ ಸಬ್ಬಸಿಗೆ ಸೊಪ್ಪಿನ ರಸ ಹಚ್ಚಿದರೆ ರಕ್ತ ಬೇಗ ನಿಲ್ಲುತ್ತದೆ. ಗಾಯ ಬಲುಬೇಗ ಒಣಗಿ ವಾಸಿಯಾಗುತ್ತದೆ. ಸಬ್ಬಸಿಗೆ ಸೊಪ್ಪನ್ನು ನುಣ್ಣಗೆ ಅರೆದು ಚರ್ಮದ ಅಲರ್ಜಿ ಇದ್ದ ಜಾಗಕ್ಕೆ ಲೇಪಿಸಿ. ಅಲರ್ಜಿ ನಿವಾರಣೆ ಆಗುವುದು. ಸೊಪ್ಪಿನಲ್ಲಿರುವ ಎಣ್ಣೆ ಅಂಶವು ಕಾರ್ವೋನ್ ಸಂಯುಕ್ತವನ್ನೊಳಗೊಂಡಿದೆ. ಮಧುಮೇಹಿಗಳಿಗಾಗಿ ಇದೊಂದು ಉತ್ತಮ ಸಿದ್ಧೌಷಧ.

# ಎಂಐ ಕೇಪ್‌ಟೌನ್‌ಗೆ ಎಸ್‌ಎ20 ಚಾಂಪಿಯನ್ಸ್ ಕಿರೀಟ!




ಎಂಐ 2025ರ ಕ್ಯಾಲೆಂಡರ್ವರ್ಷವನ್ನು ಉನ್ನತ ಮಟ್ಟದಲ್ಲಿ ಪ್ರಾರಂಭಿಸಿದೆ! ಇತಿಹಾಸ ಬರದಿದೆ. ಎಂಐ ಕೇಪ್ಟೌನ್ ತಂಡ ದಕ್ಷಿಣ ಆಫ್ರಿಕಾದ ಎಸ್ಎ20 ಟೂರ್ನಿಯ 2025ರ ಚಾಂಪಿಯನ್ಸ್ ಕಿರೀಟವನ್ನು ತನ್ನದಾಗಿಸಿಕೊಂಡಿದೆ.

ಮೊದಲ ಎರಡು ಆವೃತ್ತಿಯ ಚಾಂಪಿಯನನ್ಸನ್ರೈಸರ್ಸ್ಈಸ್ಟರ್ನ್ಕೇಪ್ತಂಡಕ್ಕೆ ಫೈನಲ್ಪಂದ್ಯದಲ್ಲಿ ಸೋಲುಣಿಸುವ ಮೂಲಕ ಎಂಐ ಕೇಪ್ಟೌನ್ತಂಡ ದ. ಆಫ್ರಿಕಾದ ಮೂರನೇ ಆವೃತ್ತಿಯ ಎಸ್ಎ20 ಲೀಗ್ನಲ್ಲಿ ಪ್ರಶಸ್ತಿ ಗೆದ್ದುಕೊಂಡಿದೆ. ಶನಿವಾರ ನಡೆದ ಪ್ರಶಸ್ತಿ ಕಾದಾಟದಲ್ಲಿ ರಶೀದ್ಖಾನ್ಸಾರಥ್ಯದ ಎಂಐ ಕೇಪ್ಟೌನ್8 ವಿಕೆಟ್ಗೆ 181 ರನ್ಪೇರಿಸಿದರೆ, ಸನ್ರೈಸರ್ಸ್ಈಸ್ಟರ್ನ್ಕೇಪ್ತಂಡ 18.4 ಓವರ್ಗಳಲ್ಲಿ 105 ರನ್ಗಳಿಗೆ ಆಲೌಟ್ ಆಗಿ 76 ರನ್ಗಳಿಂದ ಶರಣಾಯಿತು. ಈ ಮೂಲಕ ಮುಂಬೈ ಇಂಡಿಯನ್ಸ್ಫ್ರಾಂಚೈಸಿ ತಾನು ತಂಡವನ್ನು ಹೊಂದಿರುವ ಎಲ್ಲ ಟಿ20 ಲೀಗ್ಗಳಲ್ಲಿ ಪ್ರಶಸ್ತಿ ಜಯಿಸಿದಂತಾಗಿದೆ.

ಲೀಗ್ನಲ್ಲಿ ತಮ್ಮ ಮೊದಲ ಟ್ರೋಫಿಯನ್ನು ಎತ್ತುವ ಮೂಲಕ, ಎಂಐ ಕೇಪ್ಟೌನ್ ತಂಡ ಆರಂಭದಿಂದ ಮುಕ್ತಾಯದವರೆಗೆ ಋತುವಿನ ಮೂಲಕ ಸಂಪೂರ್ಣ ಪ್ರಾಬಲ್ಯವನ್ನು ಪ್ರದರ್ಶಿಸಿತು. ಪಟ್ಟುಬಿಡದ ಸ್ಥಿರತೆಯೊಂದಿಗೆ, ಅವರು ಪಂದ್ಯದ ನಂತರ ಪಂದ್ಯವನ್ನು ಗೆದ್ದರು. ಈ ವಿಜಯೋತ್ಸವದೊಂದಿಗೆ ಮುಂಬೈ. ನ್ಯೂಯಾರ್ಕ್. ಎಮಿರೇಟ್ಸ್. ಕೇಪ್ ಟೌನ್. ಎಂಐ ಕುಟುಂಬದ ಪ್ರತಿಯೊಂದು ತಂಡವು ಈಗ ತನ್ನ ಕ್ಯಾಬಿನೆಟ್ನಲ್ಲಿ ವಿಜೇತರ ಟ್ರೋಫಿಯನ್ನು ಹೊಂದಿದೆ.

ಎಂಐ ಕುಟುಂಬಕ್ಕೆ ಎಂಥ ಹೆಮ್ಮೆಯ ಮತ್ತು ಐತಿಹಾಸಿಕ ಕ್ಷಣ! ಮುಂಬೈನಿಂದ ನ್ಯೂಯಾರ್ಕ್ವರೆಗೆ, ಯುಎಇಯಿಂದ ಕೇಪ್ಟೌನ್ಗೆ - ಎಂಐ ತಂಡಗಳು ಲೀಗ್ ಪ್ರಶಸ್ತಿಗಳನ್ನು ಗೆದ್ದಿವೆ ಮತ್ತು ಜಗತ್ತಿನಾದ್ಯಂತ ಅಭಿಮಾನಿಗಳ ಹೃದಯಗಳನ್ನು ಗೆದ್ದಿವೆ. ಈ ಶೀರ್ಷಿಕೆಯು ಶ್ರೇಷ್ಠತೆಗೆ ನಮ್ಮ ಬದ್ಧತೆ, ಪ್ರತಿಭೆಯಲ್ಲಿನ ನಮ್ಮ ನಂಬಿಕೆ ಮತ್ತು ಮುಂಬೈ ಇಂಡಿಯನ್ಸ್ನ ಉತ್ಸಾಹಕ್ಕೆ ಸಾಕ್ಷಿಯಾಗಿದೆ. ನಾವು ನಿಜವಾಗಿಯೂ ಜಾಗತಿಕ ಕುಟುಂಬವಾಗಿದ್ದು, ಆಟದ ಮೇಲಿನ ನಮ್ಮ ಉತ್ಸಾಹದಿಂದ ಒಂದಾಗಿದ್ದೇವೆ. ಅವರ ಅಚಲ ಬೆಂಬಲಕ್ಕಾಗಿ ನಮ್ಮ ಎಲ್ಲಾ ಅಭಿಮಾನಿಗಳಿಗೆ ಹೃತ್ಪೂರ್ವಕ ಧನ್ಯವಾದಗಳು - ಈ ಗೆಲುವು ನಮ್ಮದು ಅಷ್ಟೇ. 2025 ಅನ್ನು ನೆನಪಿಡುವ ವರ್ಷವನ್ನಾಗಿ ಮಾಡಿದ್ದಕ್ಕಾಗಿ ಎಂಐ ಕೇಪ್ಟೌನ್ಗೆ ಅಭಿನಂದನೆಗಳು ಎಂದು ಶ್ರೀಮತಿ ನೀತಾ ಎಂ. ಅಂಬಾನಿ ಹೇಳಿದರು.

ಈ ಋತುವಿನಲ್ಲಿ ಎಂಐ ಕೇಪ್ಟೌನ್ ತಂಡದ ಪ್ರಯಾಣ ಯಾವ ಅಸಾಧಾರಣಕ್ಕಿಂತಲೂ ಕಡಿಮೆ ಇರಲಿಲ್ಲ ಮತ್ತು ನಾನು ತಂಡದ ಬಗ್ಗೆ ಇದಕ್ಕಿಂತ ಹೆಮ್ಮೆಪಡಲು ಸಾಧ್ಯವಿಲ್ಲ. ಈ ವಿಜಯವು ಪ್ರತಿಭೆಗಳಿಗೆ ಬೆಂಬಲ, ಪ್ರಕ್ರಿಯೆಯಲ್ಲಿ ನಂಬಿಕೆ ಮತ್ತು ಹೃದಯದಿಂದ ಆಟವಾಡುವ ಎಂಐ ಕಾರ್ಯತಂತ್ರಕ್ಕೆ ಸಾಕ್ಷಿಯಾಗಿದೆ. ಈ ಗೆಲುವು ನಮ್ಮ ಅಭಿಮಾನಿಗಳಿಗೆ ಅರ್ಪಣೆ. ಅವರು ನಮಗೆ ಎಲ್ಲ ಏಳುಬೀಳುಗಳಲ್ಲಿ ಬೆಂಬಲವಾಗಿ ನಿಂತವರು. ನ್ಯೂಲ್ಯಾಂಡ್ಸ್ ಕೇಪ್ಟೌನ್, ಇದು ನಿಮ್ಮ ಕ್ಷಣ-ಇದನ್ನು ಆನಂದಿಸಿ ಎಂದು ಶ್ರೀ. ಆಕಾಶ್ ಎಂ. ಅಂಬಾನಿ ಅವರು ಹೇಳಿದರು.

ಈ ಐತಿಹಾಸಿಕ ಗೆಲುವಿನೊಂದಿಗೆ ಮುಂಬೈ ಇಂಡಿಯನ್ಸ್ ಜಾಗತಿಕ ಫ್ರಾಂಚೈಸಿ ಕ್ರಿಕೆಟ್ನಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುವುದನ್ನು ಮುಂದುವರೆಸಿದೆ. ಕಳೆದ 17 ವರ್ಷಗಳಲ್ಲಿ, ಮುಂಬೈ ಇಂಡಿಯನ್ಸ್ (ಐಪಿಎಲ್ಮತ್ತು ಡಬ್ಲ್ಯುಪಿಎಲ್), ಎಂಐ ಕೇಪ್ಟೌನ್, ಎಂಐ ಎಮಿರೇಟ್ಸ್ ಮತ್ತು ಎಂಐ ನ್ಯೂಯಾರ್ಕ್ ಒಳಗೊಂಡಿರುವ ಎಂಐ ಕುಟುಂಬದ ಸಮರ್ಪಣೆಯು ವಿಶ್ವಾದ್ಯಂತ ನಂಬಲಾಗದ 11 ಟಿ20 ಲೀಗ್ ಪ್ರಶಸ್ತಿಗಳಿಗೆ ಕಾರಣವಾಗಿದೆ. ಇದು ಐದು ಐಪಿಎಲ್ ಚಾಂಪಿಯನ್ಶಿಪ್ಗಳು, ಎರಡು ಚಾಂಪಿಯನ್ಸ್ ಲೀಗ್ ವಿಜಯಗಳು ಮತ್ತು 2023 ರಲ್ಲಿ ಉದ್ಘಾಟನಾ ಡಬ್ಲ್ಯುಪಿಎಲ್ಮತ್ತು ಮೇಜರ್ ಲೀಗ್ ಕ್ರಿಕೆಟ್ ಪ್ರಶಸ್ತಿಗಳನ್ನು 2024 ರಲ್ಲಿ ಐಎಲ್ಟಿ20 ಪ್ರಶಸ್ತಿಯನ್ನು ಒಳಗೊಂಡಿವೆ.

ಎಂಐನ ಪ್ರಯಾಣವು ಉತ್ಸಾಹ, ಪರಿಶ್ರಮ ಮತ್ತು ಉತ್ಕೃಷ್ಟತೆಯಿಂದ ಕೂಡಿದೆ, ಪ್ರಪಂಚದಾದ್ಯಂತದ ಪ್ರತಿಭೆಗಳನ್ನು ಒಟ್ಟುಗೂಡಿಸುತ್ತದೆ ಮತ್ತು ಟ್ರೋಫಿಗಳನ್ನು ಮಾತ್ರವಲ್ಲದೆ ಲಕ್ಷಾಂತರ ಅಭಿಮಾನಿಗಳ ಹೃದಯವನ್ನು ಗೆದ್ದಿದೆ. ಈ ಎಸ್ಎ20 ಗೆಲುವಿನೊಂದಿಗೆ 2025ರಲ್ಲಿ ಎಂಐ ಕುಟುಂಬದ ಪರಿಪೂರ್ಣವಾದ ಗೆಲುವಿನ ಓಟ ಪ್ರಾರಂಭವಾಗಿದೆ!

# ಮೊಡವೆಗೆ ಮನೆಮದ್ದು

## ಬ್ಯೂಟಿ ಟಿಪ್ಸ್



ಯಾವುದೇ ಮಚ್ಚೆ, ಕಲೆ ಅಥವಾ ಕಳಿಚುಗಳನ್ನು ಮನೆ ಮದ್ದಿನಿಂದ ವಾಸಿ ಮಾಡಬಹುದು ಆದರೆ ಚಿಕಿತ್ಸೆಯನ್ನು ಬೇಗನೆ ಶುರು ಮಾಡಬೇಕಾಗುತ್ತದೆ. ಹಾಗಾಗಿ ನಿಮ್ಮಗೆ ಇತ್ತೀಚೆಗೆ ಮೊಡವೆ ಕಲೆಗಳು ಬಂದಿದ್ದಾರೆ ಈ ಕೂಡಲೇ ಮೇಲಿನ ಯಾವುದಾದರೂ ಒಂದು ಮನೆ ಮದ್ದನ್ನು ಬಳಸಲು ಮೊದಲು ಮಾಡಿ. ಮೊದವೆಗಳು ಒಣಗಿದ ಕೂದಲೆ ಯಾವುದಾದರೂ ಒಂದು ಮನೆ ಮದ್ದನ್ನು ಬಳಸಲು ಪ್ರಾರಂಭಿಸಿ. ಇದರಿಂದ ಕಲೆಗಳು ನೆಲೆಯಾಗದಂತೆ ತಡೆಯಬಹುದು. ಅರಿಶಿನ, ಜ್ಯೇಷ್ಟಮಧು ಹಾಗೂ ಶ್ರೀಗಂಧದ ಔಶಧಿಗಳು ಹಳೆಯ ಕಲೆಗಳನ್ನು ಸಹ ವಾಸಿಮಾಡಲು ಬಹಳ ಪ್ರಭಾವಿಗಳು. ಆದರೆ ಸಂಪೂರ್ಣವಾಗಿ ಕಲೆಗಳು ಮಾಯವಾಗಲು ತಿಂಗಳಿಗಿಂತ ಹೆಚ್ಚು ಸಮಯವಾಗಬಹುದು. ಇದಕ್ಕಾಗಿ ನೀವು ಇದನ್ನು ಚಾಚು ತಪ್ಪದೆ ಚಿಕಿತ್ಸೆಯನ್ನು ಪಾಲಿಸಬೇಕಾಗಿಬರುತ್ತದೆ. ಮನೆ ಮದ್ದಿನ ಪ್ರಭಾವ ನಿಮ್ಮ ಚರ್ಮದ ಬಗೆ ಹಾಗು ವಯಸ್ಸಿನ ಮೇಲೆ ಆಧಾರವಾಗಿರುತ್ತದೆ. ಹೆಚ್ಚಾಗುವ ವಯ್ಯಸ್ಸಿನೊಂದಿಗೆ ಚರ್ಮದ ಪುನ್ನರುಜ್ಜೀವನಗೊಳ್ಳುವ ಶಕ್ತಿಯು ಕಡಿಮೆಯಾಗುತ್ತಾ ಬರುತ್ತದೆ. ಆದ್ದರಿಂದ ಕಲೆಗಳು ಹಾಗೂ ಕಚ್ಚುಗಳು ಕಡಿಮೆಯಾಗುವುದಕ್ಕೆ ಸ್ವಲ್ಪ ಹೆಚ್ಚು ಸಮಯ ಹಿಡಿಯಬಹುದು.ಮನೆ ಮದ್ದಿನಿಂದ ಸಂಪೂರ್ಣವಾಗಿ ಮಚ್ಚೆ ಹಾಗೂ ಕಲೆಗಳು ಮಾಯವಾಗಲು ಅದನ್ನು ಚಾಚು ತಪ್ಪದೆ ನಿರಂತರವಾಗಿ ಕಟ್ಟುನಿಟ್ಟಾಗಿ ಪಾಲಿಸಬೇಕಾಗಿಬರುತ್ತದೆ. ಇದರಿಂದ ಉತ್ತಮ ಫಲಿತಾಂಶವನ್ನು ಪಡೆಯಬಹುದು. ಮನೆ ಮದ್ದಿನ ಅತಿ ಮುಖ್ಯವಾದ ಗುಣವೇನೆಂದರೆ ಇದರಿಂದ ಯಾವುದೇ ಅಡ್ಡ ಪರಿಣಾಮಗಳಿರುವುದಿಲ್ಲ ಹಾಗೂ ಹೆಚ್ಚು ಹಣವು ಪೋಲಾಗುವುದಿಲ್ಲ.

ಮೇಲೆ ಹೇಳಿರುವ ಮನೆ ಮದ್ದುಗಳನ್ನು ಬಳಸುವ ಕಾಲಕ್ಕೆ ಹೊಸದಾಗಿ ತಯಾರಿಸಿಕೊಳ್ಳುವುದು ಒಲ್ಲೆಯಾದುದರಿಂದಾ ಔಷಧಿ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಜ್ಯೇಷ್ಟಮಧು ಹಾಗೂ ಮತ್ತು ಕೆಲವು ಮನೆ ಮದ್ದುಗಳು ನಿಮ್ಮ ಚರ್ಮವನ್ನು ಸೂಕ್ಷ್ಮ ಸಂವೇದಿಯಾಗಿಸಬಹುದು ಹಾಗಾಗಿ ಇದನ್ನು ಬಳಸುವಾಗ, ಆಚೆ ಹೋಗುವ ಮುನ್ನ ಒಳ್ಳೆಯ ಸನ್ ಸ್ಕ್ರೀನ್ ಬಳಸಿ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಧಾರ್ಮಿಕ ಕಾರ್ಯಗಳಲ್ಲಿ ಭಾಗಿ, ಕುಟುಂಬ ಸೌಖ್ಯ, ಯತ್ನ ಕಾರ್ಯಗಳಲ್ಲಿ ಜಯ, ಆದಾಯ ಕಡಿಮೆ ಖರ್ಚು ಜಾಸ್ತಿ.

**ವೃಷಭ:** ಅನಾವಶ್ಯಕ ಖರ್ಚಿಗೆ ನೂರಾರು ದಾರಿ, ವಿಪರೀತ ವ್ಯಸನ, ದಂಡ ಕಟ್ಟುವಿರಿ, ಅನಾರೋಗ್ಯ.

**ಮಿಥುನ:** ಮಹಿಳೆಯರಿಗೆ ಶುಭ, ದೂರ ಪ್ರಯಾಣ, ಅಕಾಲ ಭೋಜನ, ಮನಕ್ಲೇಶ, ವಿದ್ಯಾರ್ಥಿಗಳಲ್ಲಿ ಹಿನ್ನಡೆ, ಅನಾರೋಗ್ಯ.

**ಕಟಕ:** ಸಣ್ಣ ವಿಷಯಕ್ಕೆ ಕಲಹ, ಮಾತಿನ ಮೇಲೆ ಹಿಡಿತವಿರಲಿ, ಭೋಗ ವಸ್ತುಗಳ ಖರೀದಿ, ವಾಹನ ಖರೀದಿ.

**ಸಿಂಹ:** ಗುರಿ ಸಾಧಿಸಲು ಶ್ರಮಪಡುವಿರಿ, ವ್ಯಾಪಾರ ವ್ಯವಹಾರಗಳಲ್ಲಿ ಉತ್ತಮ ಫಲ, ಸುಖ ಭೋಜನ, ಧನ ಲಾಭ.

**ಕನ್ಯಾ:** ಮೂಗಿನ ಮೇಲೆ ಕೋಪ, ಪರರ ಮಾತಿಗೆ ಕಿವಿ ಕೊಡಬೇಡಿ, ವ್ಯಾಪಾರದಲ್ಲಿ ವಿಶೇಷ ಲಾಭ, ಗಣ್ಯ ವ್ಯಕ್ತಿಗಳ ಭೇಟಿ.

**ತುಲಾ:** ಪ್ರಯತ್ನ ಪಟ್ಟರೆ ಉತ್ತಮ ಫಲ ಸಿಗುತ್ತೆ, ಕಾರ್ಯಸಿದ್ಧಿ, ಅನೇಕ ಜನರಿಗೆ ವಿವಾಹ ಯೋಗ.

**ವೃಶ್ಚಿಕ:** ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ, ಸಾಲ ಮರುಪಾವತಿ, ವಾಹನದಿಂದ ತೊಂದರೆ.

**ಧನಸ್ಸು:** ಭಯಭೀತಿ ನಿವಾರಣೆ, ದಾಂಪತ್ಯದಲ್ಲಿ ಪ್ರೀತಿ, ಯತ್ನ ಕಾರ್ಯಾನುಕೂಲ, ಸಾಲಭಾದೆ, ಆಕಸ್ಮಿಕ ಖರ್ಚು.

**ಮಕರ:** ಆರೋಗ್ಯದಲ್ಲಿ ಏರುಪೇರು, ಮಾನಸಿಕ ಚಿಂತೆ, ಪುಣ್ಯಕ್ಷೇತ್ರ ದರ್ಶನ, ರೋಗಭಾದೆ, ನಾನು ವಿಚಾರಗಳಲ್ಲಿ ಆಸಕ್ತಿ.

**ಕುಂಭ:** ವಾತಭಾದೆ, ಪಾಪ ಬುದ್ಧಿ, ಮಾತಾ ಪಿತರ ಹಿತ ವಚನ, ವಿದ್ಯಾರ್ಥಿಗಳಿಗೆ ಪ್ರಶಂಸೆ, ಕೀರ್ತಿ ಲಾಭ.

**ಮೀನ:** ಕ್ರಯ ವಿಕ್ರಯಗಳಲ್ಲಿ ಲಾಭ, ವಿವಾದಗಳಿಂದ ದೂರವಿರಿ, ಅನಗತ್ಯ ಖರ್ಚು, ಕಣ್ಣಿನ ತೊಂದರೆ.

# ವಿಶ್ವ ದ್ವಿದಳ ಧಾನ್ಯಗಳ ದಿನ

ವಿಶ್ವ ದ್ವಿದಳ ಧಾನ್ಯಗಳ ದಿನವನ್ನು ಪ್ರತಿ ವರ್ಷ ಫೆಬ್ರವರಿ 10 ರಂದು ಆಚರಿಸಲಾಗುತ್ತದೆ. ದ್ವಿದಳ ಧಾನ್ಯಗಳ (ದ್ವಿದಳ ಧಾನ್ಯಗಳು ಎಂದೂ ಕರೆಯುತ್ತಾರೆ) ಮಹತ್ವ ಮತ್ತು ಪೌಷ್ಟಿಕಾಂಶದ ಪ್ರಯೋಜನಗಳನ್ನು ಗುರುತಿಸಲು 2018 ರಲ್ಲಿ ವಿಶ್ವಸಂಸ್ಥೆಯು ಗೊತ್ತುಪಡಿಸಿದ ವಾರ್ಷಿಕ ಜಾಗತಿಕ ಕಾರ್ಯಕ್ರಮ ಇದು. ಇದಲ್ಲದೆ, ದ್ವಿದಳ ಧಾನ್ಯಗಳು ಪೌಷ್ಟಿಕಾಂಶ ಮಾತ್ರವಲ್ಲ, ವಿಶ್ವ ಹಸಿವು ಮತ್ತು ಬಡತನವನ್ನು ನಿರ್ಮೂಲನೆ ಮಾಡುವತ್ತ ಸುಸ್ಥಿರ ಆಹಾರ ವ್ಯವಸ್ಥೆಗಳ ಅಭಿವೃದ್ಧಿಗೆ ಸಹ ಕೊಡುಗೆ ನೀಡಬಹುದು ಎಂದು ವಿಶ್ವಸಂಸ್ಥೆ ನಂಬುತ್ತದೆ. ವಿಶ್ವಸಂಸ್ಥೆಯ ಪ್ರಕಾರ, ಜಾಗತಿಕ ಶಾಂತಿಯನ್ನು ಬಲಪಡಿಸುವ ಮತ್ತು ಆಹಾರ ಭದ್ರತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ 2030 ರ ಸುಸ್ಥಿರ ಅಭಿವೃದ್ಧಿ ಕಾರ್ಯಸೂಚಿಯನ್ನು ಸಾಧಿಸಲು ಇದು ಪರಿಣಾಮಕಾರಿ ತಂತ್ರವಾಗಿದೆ. ದ್ವಿದಳ ಧಾನ್ಯಗಳು - ದ್ವಿದಳ ಧಾನ್ಯಗಳು ಎಂದೂ ಕರೆಯಲ್ಪಡುತ್ತವೆ - ಒಣ ಬಟಾಣಿ, ಒಣ ಬೀನ್ಸ್, ಲುಪಿನ್, ಮಸೂರ ಮತ್ತು ಕಡಲೆ ಮುಂತಾದ ಬೀಜಗಳನ್ನು ಹೊಂದಿರುವ ಸಸ್ಯಗಳ ಖಾದ್ಯ ಬೀಜಗಳನ್ನು ಉಲ್ಲೇಖಿಸುತ್ತವೆ. ದ್ವಿದಳ ಧಾನ್ಯಗಳು ವಿವಿಧ ಆಕಾರಗಳು, ಪ್ರಭೇದಗಳು, ಗಾತ್ರಗಳು ಮತ್ತು ಬಣ್ಣಗಳಲ್ಲಿ ಅಸ್ತಿತ್ವದಲ್ಲಿವೆ ಮತ್ತು ಪ್ರಪಂಚದಾದ್ಯಂತದ ಭಕ್ಷ್ಯಗಳ ದೊಡ್ಡ ಭಾಗವಾಗಿ ಉಳಿದಿವೆ, ಅತ್ಯಂತ ಜನಪ್ರಿಯ ಮತ್ತು ವ್ಯಾಪಕವಾಗಿ ಸೇವಿಸುವ ದ್ವಿದಳ ಧಾನ್ಯಗಳು ಒಣಗಿದ ಬೀನ್ಸ್, ಬಟಾಣಿ ಮತ್ತು ಮಸೂರಗಳಾಗಿವೆ. ವ್ಯಾಖ್ಯಾನದ ಪ್ರಕಾರ, ದ್ವಿದಳ ಧಾನ್ಯಗಳು ಆಹಾರಕ್ಕಾಗಿ ಬೆಳೆಸುವ ದ್ವಿದಳ ಧಾನ್ಯಗಳ ಒಣಗಿದ ಬೀಜಗಳನ್ನು ಒಳಗೊಂಡಿರುತ್ತವೆ ಮತ್ತು ಇನ್ನೂ ಹಸಿರಾಗಿರುವಾಗ ಕೊಯ್ಲು ಮಾಡಿದ ತರಕಾರಿ ಬೆಳೆಗಳನ್ನು ಒಳಗೊಂಡಿರುವುದಿಲ್ಲ. ಅವುಗಳ ಬೀಜಗಳು ಫೈಬರ್, ಪ್ರೋಟೀನ್, ಜೀವಸತ್ವಗಳು ಮತ್ತು ಖನಿಜಗಳಂತಹ ಅಗತ್ಯ ಪೋಷಕಾಂಶಗಳಿಂದ ತುಂಬಿರುತ್ತವೆ, ಇದು ಅವುಗಳನ್ನು ಪ್ರಮುಖ ಮತ್ತು ಆರೋಗ್ಯಕರ ಸೂಪರ್ಫುಡ್ಗಳನ್ನಾಗಿ ಮಾಡುತ್ತದೆ. ಈ ಪೋಷಕಾಂಶಗಳಿಂದ ತುಂಬಿದ ಆಹಾರ ಬೆಳೆಗಳ ಮಹತ್ವವನ್ನು ಗೌರವಿಸಲು, ಡಿಸೆಂಬರ್ 20, 2013 ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ವಿಶೇಷ ನಿರ್ಣಯವನ್ನು ಅಂಗೀಕರಿಸಿತು ಮತ್ತು 2016 ಅನ್ನು ಅಂತರರಾಷ್ಟ್ರೀಯ ದ್ವಿದಳ ಧಾನ್ಯಗಳ ವರ್ಷ ಎಂದು ಘೋಷಿಸಿತು. ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ 2016 ರಲ್ಲಿ ಆಚರಣೆಯನ್ನು ಮುನ್ನಡೆಸಿತು ಮತ್ತು ಈ ಕಾರ್ಯಕ್ರಮವು ದ್ವಿದಳ ಧಾನ್ಯಗಳ ಪೌಷ್ಟಿಕಾಂಶ ಮತ್ತು ಪರಿಸರ ಪ್ರಯೋಜನಗಳ ಬಗ್ಗೆ ಸಾರ್ವಜನಿಕ ಜಾಗೃತಿಯನ್ನು ಯಶಸ್ವಿಯಾಗಿ ಹೆಚ್ಚಿಸಿತು. I.Y.P.ಯ ಯಶಸ್ಸು ಮತ್ತು ಆವೇಗವನ್ನು ಆಧರಿಸಿ, ಮತ್ತು 2030 ರ ಸುಸ್ಥಿರ ಅಭಿವೃದ್ಧಿ ಕಾರ್ಯಸೂಚಿಯನ್ನು ಮತ್ತಷ್ಟು ಸಾಧಿಸಲು ದ್ವಿದಳ ಧಾನ್ಯಗಳ ಸಾಮರ್ಥ್ಯವನ್ನು ಗುರುತಿಸಿ, ಭೂಕುಸಿತ ಪಶ್ಚಿಮ ಆಫ್ರಿಕಾದ ರಾಷ್ಟ್ರವಾದ ಬುರ್ಕಿನಾ ಫಾಸೊ, ವಿಶ್ವ ದ್ವಿದಳ ಧಾನ್ಯಗಳ ದಿನವನ್ನು ಜಾಗತಿಕವಾಗಿ ಆಚರಿಸಲು ಪ್ರಸ್ತಾಪಿಸಿತು. ಡಿಸೆಂಬರ್ 20, 2018 ರಂದು, ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಫೆಬ್ರವರಿ 10 ಅನ್ನು ವಿಶ್ವ ದ್ವಿದಳ ಧಾನ್ಯಗಳ ದಿನವೆಂದು ನಿರ್ಣಯದ ಮೂಲಕ ಘೋಷಿಸಿತು ಮತ್ತು ಈ ದಿನವನ್ನು 2019 ರಿಂದ ಜಾಗತಿಕ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದೆ ಮತ್ತು ಅನೇಕ ಸದಸ್ಯ ರಾಷ್ಟ್ರಗಳು ಬೆಂಬಲಿಸುತ್ತಿವೆ. ವಿಶ್ವಸಂಸ್ಥೆಯ ಪ್ರಕಾರ, ಬಡತನ, ಆಹಾರ ಭದ್ರತೆ ಮತ್ತು ಪೋಷಣೆ, ಮಾನವ ಆರೋಗ್ಯ ಮತ್ತು ಮಣ್ಣಿನ ಆರೋಗ್ಯದ ಜಾಗತಿಕ ಸವಾಲುಗಳನ್ನು ತಗ್ಗಿಸುವಲ್ಲಿ ದ್ವಿದಳ ಧಾನ್ಯಗಳು ಪ್ರಭಾವಶಾಲಿಯಾಗಿ ಉಳಿದಿವೆ.

ಸಂಜೆ ಮುಗಿಲು
ಸೋಮವಾರ
10.2.2025


# ದೇಶದ್ರೋಹದ ಆರೋಪ: ಬಾಂಗ್ಲಾ ನಟಿ ಮೆಹರ್ ಅಫ್ರೋಜ್ ಶಾನ್ ಬಂಧನ

**ಢಾಕಾ:** ಬಾಂಗ್ಲಾದೇಶದಲ್ಲಿ ಗಲಭೆ ಮತ್ತೆ ಭುಗಿಲೆದ್ದಿದೆ. ಮಾಜಿ ಅಧ್ಯಕ್ಷ ಶೇಕ್ ಮುಜಿಬುರ್ ರೆಹಮಾನ್ ಮನೆಗೆ ಬೆಂಕಿ ಹಚ್ಚಲಾಗಿದೆ. ಇದರಿಂದ ಇಡೀ ಬಾಂಗ್ಲಾದಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣ ಆಗಿದೆ. ಹೀಗಿರುವಾಗಲೇ ದೇಶದ್ರೋಹದ ಆರೋಪದ ಮೇಲೆ ಬಾಂಗ್ಲಾ ನಟಿ ಮೆಹರ್ ಅಫ್ರೋಜ್ ಶಾನ್ ಅವರನ್ನು ಬಂಧಿಸಲಾಗಿದೆ. ಅವರನ್ನು ಸದ್ಯ ವಿಚಾರಣೆ ನಡೆಸಲಾಗುತ್ತಿದೆ. ಇದು ಅವರ ಅಭಿಮಾನಿಗಳಲ್ಲಿ ಆತಂಕ ಮೂಡಿಸಿದೆ.



ಇದೆಲ್ಲದರ ನಡುವೆ ದೇಶದ್ರೋಹದ ಆರೋಪದಲ್ಲಿ ಬಾಂಗ್ಲಾ ನಟಿ, ನಿರ್ದೇಶಕಿ ಮೆಹರ್ ಅಫ್ರೋಜ್ ಶಾನ್ ಬಂಧನವಾಗಿದೆ. ಗುರುವಾರ(ಫೆಬ್ರವರಿ 6) ರಾತ್ರಿ ಮೆಹರ್ ಅಫ್ರೋಜ್ ಅವರನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ದೇಶದ ವಿರುದ್ಧ ಪಿತೂರಿ ನಡೆಸಿದ ಆರೋಪದ ಮೇಲೆ ಢಾಕಾ ಮೆಟ್ರೋಪಾಲಿಟನ್ ಪೊಲೀಸ್ಯ ಪತ್ತೇದಾರಿ ವಿಭಾಗದ ತಂಡವು ಆಕೆಯನ್ನು ಬಂಧಿಸಿದೆ ಎಂದು ಹೆಚ್ಚುವರಿ ಡಿಎಂಪಿ ಆಯುಕ್ತ ರೆಜೌಲ್ ಕರೀಮ್ ಮಲ್ಲಿಕ್ ಮಾಹಿತಿ ನೀಡಿದ್ದಾರೆ

ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶದ ಮಧ್ಯಂತರ ಸರ್ಕಾರವನ್ನು ನಟಿ ಮೆಹರ್ ಅಫ್ರೋಜ್ ಟೀಕಿಸಿದ್ದರು ಎಂದು ವರದಿಯಾಗಿದೆ. ಜಮಾಲ್ಪುರದಲ್ಲಿ ನಟಿ ಮೆಹರ್ ಕುಟುಂಬ ಸದಸ್ಯರು ವಾಸವಾಗಿದ್ದಾರೆ. ಸ್ಥಳಿಯ ಮಾಧ್ಯಮಗಳ ವರದಿ ಪ್ರಕಾರ ನಿನ್ನೆ ಸಂಜೆ 6 ಗಂಟೆ ಸುಮಾರಿಗೆ ವಿದ್ಯಾರ್ಥಿಗಳು ಮತ್ತು ಸ್ಥಳೀಯ ನಿವಾಸಿಗಳು ಅವರ ಮನೆ ಮೇಲೆ ದಾಳಿ ನಡೆಸಿದ್ದರು. ಅದರ ಬೆನ್ನಲ್ಲೇ ನಟಿಯ ಬಂಧನವಾಗಿದೆ.

ಮೆಹರ್ ಕುಟುಂಬಕ್ಕೆ ರಾಜಕೀಯರಂಗದ ನಂಟು ಇದೆ. ಸ್ವತಃ ನಟಿ ಮೆಹರ್ ಕಳೆದ ಚುನಾವಣೆಯಲ್ಲಿ ಅವಾಮಿ ಲೀಗ್ ಅಭ್ಯರ್ಥಿಯಾಗಿ ಮೀಸಲು ಸಂಸದೀಯ ಸ್ಥಾನಕ್ಕೆ ಸ್ಪರ್ಧಿಸಿದ್ದರು.

ತಂದೆ ಮೊಹಮ್ಮದ್ ಅಲಿ ಕಳೆದ ರಾಷ್ಟ್ರೀಯ ಚುನಾವಣೆಗೆ ಅವಾಮಿ ಲೀಗ್ ಕಡೆಯಿಂದ ನಾಮನಿರ್ದೇಶನ ಬಯಸಿದ್ದರು. ಇನ್ನು ಮೆಹರ್ ಅವರ ತಾಯಿ ಬೇಗಂ ತಹುರಾ ಅಲಿ, ಮೀಸಲು ಮಹಿಳಾ ಸ್ಥಾನದಿಂದ ಎರಡು ಅವಧಿಗೆ ಬಾಂಗ್ಲಾ ಸಂಸತ್ತಿನಲ್ಲಿ ಕೆಲಸ ಮಾಡಿದ್ದರು. 2004ರಲ್ಲಿ ಚಿತ್ರ ನಿರ್ದೇಶಕ ಹುಮಾಯೂನ್ ಅಹ್ಮದ್ ಎಂಬುವವರ ಜೊತೆ ನಟಿ ಮೆಹರ್ ಮದುವೆ ಆಗಿತ್ತು. ಇಬ್ಬರು ಗಂಡು ಮಕ್ಕಳು ಇದ್ದಾರೆ. 2012ರಲ್ಲಿ ಪತಿ ನಿಧನರಾಗಿದ್ದರು.

# ಖೈಬರ್ ಕಣಿವೆಯಲ್ಲಿ 7 ಭಯೋತ್ಪಾದಕರ ಹತ್ಯೆ

**ಪೇಶಾವರ:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಭಾನುವಾರ ಇಬ್ಬರು ಪೊಲೀಸ್ ಅಧಿಕಾರಿಗಳನ್ನು ಅಪಹರಿಸಿದ ಟಿಟಿಪಿಗೆ ಸೇರಿದ ಭಯೋತ್ಪಾದಕರು ಅವರನ್ನು ಗುಂಡಿಕ್ಕಿ ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನಿಷೇಧಿತ ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ತಾನ್‌ಯೊಂದಿಗೆ ಸಂಬಂಧ ಹೊಂದಿರುವ ಅಪಹರಣಕಾರರು ಬನ್ನು ಜಿಲ್ಲೆಯ ಗುರ್ಬಾಜ್ ಬಾಕಾ ಖೇಲ್ ಪ್ರದೇಶದ ಮೈದಾನದಲ್ಲಿ ಪೊಲೀಸ್ ಸಿಬ್ಬಂದಿಯ ಮೇಲೆ ಗುಂಡು ಹಾರಿಸಿ ಕೊಲೆ ಮಾಡಿದ್ದಾರೆ. ಬಕಾ ಖೇಲ್ ಪೊಲೀಸ್ ಠಾಣೆ ವ್ಯಾಪ್ತಿಯ ಬಕಾ ಖೇಲ್ ಮಂಡಿಯಿಂದ ಇಬ್ಬರು ಅಧಿಕಾರಿಗಳನ್ನು ಅಪಹರಿಸಲಾಗಿತ್ತು ಎಂದು ಪಾಕ್ ಪೊಲೀಸರು ಹೇಳಿದ್ದಾರೆ. ಟಿಟಿಪಿ ಇತ್ತೀಚಿನ ತಿಂಗಳುಗಳಲ್ಲಿ ತನ್ನ ದಾಳಿಗಳನ್ನು ಹೆಚ್ಚಿಸಿದೆ. ಪಾಕಿಸ್ತಾನದ ಪ್ರಕ್ಷುಬ್ಧ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಎರಡು ಪ್ರತ್ಯೇಕ ಗುಪ್ತಚರ ಆಧಾರಿತ ಕಾರ್ಯಾಚರಣೆಗಳಲ್ಲಿ ಏಳು ಭಯೋತ್ಪಾದಕರು ಹತರಾಗಿದ್ದಾರೆ ಎಂದು ಸೇನಾ ಮಾಧ್ಯಮ ವಿಭಾಗ ಭಾನುವಾರ ತಿಳಿಸಿದೆ. ಇಂಟರ್-ಸರ್ವೀಸಸ್ ಪಬ್ಲಿಕ್ ರಿಲೇಶನ್ಸ್‌ಯ ಹೇಳಿಕೆ ಪ್ರಕಾರ, ಫೆಬ್ರವರಿ 8-9,2025 ರ ರಾತ್ರಿ, ಭದ್ರತಾ ಪಡೆಗಳು, ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯ ಮಡ್ಡಿ ಸಾಮಾನ್ಯ ಪ್ರದೇಶದಲ್ಲಿ ಗುಪ್ತಚರ ಇಲಾಖೆಯ ಖಚಿತ ಮಾಹಿತಿ ಆಧಾರದ ಮೇಲೆ ಭಯೋತ್ಪಾದಕರ ಮೇಲೆ ದಾಳಿ ಮಾಡಲಾಯಿತು. ಈ ಸಮಯದಲ್ಲಿ ಭದ್ರತಾ ಪಡೆಗಳು ಭಯೋತ್ಪಾದಕರ ಸ್ಥಳವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ ಪರಿಣಾಮ ಮೂವರು ಭಯೋತ್ಪಾದಕರು ಕೊಲ್ಲಲ್ಪಟ್ಟರು, ಇಬ್ಬರು ಗಾಯಗೊಂಡರು ಎಂದು ಹೇಳಿದೆ.

# ಮಣಿಪುರ: ಸಿಎಂ ಎನ್ ಬಿರೇನ್ ಸಿಂಗ್ ದಿಢೀರ್ ರಾಜೀನಾಮೆ!

**ಇಂಫಾಲ್:** ಮಣಿಪುರದ ಬಿಜೆಪಿ ಸರ್ಕಾರದ ಬಗ್ಗೆ ಅವಿಶ್ವಾಸ ನಿರ್ಣಯ ಮಂಡಿಸುವ ಬಗ್ಗೆ ಪ್ರತಿಪಕ್ಷಗಳು ಚರ್ಚೆಯಲ್ಲಿ ತೊಡಗಿರುವಂತೆಯೇ ಮುಖ್ಯಮಂತ್ರಿ ಸ್ಥಾನಕ್ಕೆ ಎನ್. ಬಿರೇನ್ ಸಿಂಗ್ ಭಾನುವಾರ ದಿಢೀರ್ ರಾಜೀನಾಮೆ ನೀಡಿದ್ದಾರೆ. ಈಶಾನ್ಯ ರಾಜ್ಯ ಮೇ 2023 ರಿಂದ ಜನಾಂಗೀಯ ಹಿಂಸಾಚಾರದಿಂದ ನರಳುತ್ತಿದೆ. ನವದೆಹಲಿಯಲ್ಲಿ ಗೃಹ ಸಚಿವ ಅಮಿತ್ ಶಾ ಅವರನ್ನು ಬಿರೇನ್ ಸಿಂಗ್ ಭೇಟಿಯಾದ ಸ್ವಲ್ಪ ಸಮಯದ ನಂತರ ಇಂಫಾಲ್ನಲ್ಲಿ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ. ಇದಕ್ಕೂ ಮೊದಲು ಸಿಂಗ್ ಅವರು ಬಿಜೆಪಿ ನೇತೃತ್ವದ ಆಡಳಿತಾರೂಢ ಮೈತ್ರಿಕೂಟದ ಶಾಸಕರೊಂದಿಗೆ ಸಿಎಂ ಸೆಕ್ರೆಟರಿಯೇಟ್ನಲ್ಲಿ ಸಭೆ ನಡೆಸಿದರು. ಸಿಂಗ್ ಸರ್ಕಾರದ ವಿರುದ್ಧ ವಿಧಾನಸಭೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸುವುದಾಗಿ ಕಾಂಗ್ರೆಸ್ ಶುಕ್ರವಾರ ಘೋಷಿಸಿತ್ತು. ಇದರ ಬೆನ್ನಲ್ಲೇ ಬಿರೇನ್ ಸಿಂಗ್ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಮುಂದಿನ ರಾಜಕೀಯ ಬೆಳವಣಿಗೆಗಳು ತೀವ್ರ ಕುತುಹೂಲ ಮೂಡಿಸಿವೆ.





# ಪ್ರಯಾಗರಾಜ್‌ಗೆ ಭಕ್ತರ ಪ್ರವಾಹ

**ಪ್ರಯಾಗರಾಜ್:** ಇಲ್ಲಿ ನಡೆಯುತ್ತಿರುವ ಕುಂಭಮೇಳಕ್ಕೆ ಭಾನುವಾರವೂ ಭಕ್ತ ಮಹಾಸಾಗರವೇ ಹರಿದು ಬಂತು. ಮಹಾ ಕುಂಭಮೇಳದ ಮಾರ್ಗಗಳಲ್ಲಿ ಕಿಲೋಮೀಟರ್ಗಟ್ಟಲೆ ತೀವ್ರ ಟ್ರಾಫಿಕ್ ದಟ್ಟಣೆ ಉಂಟಾಗಿದೆ. ಈ ನಡುವೆ ಟ್ರಾಫಿಕ್ ಜಾಮ್ ನಿಂದಾಗಿ ಈ ದಟ್ಟಣೆಯಲ್ಲಿ ಸಿಕ್ಕಿಬಿದ್ದಿರುವ ಭಕ್ತರಿಗೆ ತುರ್ತು ವ್ಯವಸ್ಥೆ ಮಾಡುವಂತೆ ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್, ಯೋಗಿ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಮಧ್ಯೆ, ನಿಲ್ದಾಣದ ಹೊರಗೆ ವಿಪರೀತ ಜನಸಂದಣಿಯಿಂದಾಗಿ ಪ್ರಯಾಗರಾಜ್ ನ ಸಂಗಮ್ ರೈಲು ನಿಲ್ದಾಣವನ್ನು ಮುಚ್ಚಲಾಗಿದೆ. ಭಾನುವಾರ ಸಂಜೆ 6 ಗಂಟೆಯವರೆಗೆ 1.42 ಕೋಟಿಗೂ ಹೆಚ್ಚು ಭಕ್ತರು ಗಂಗಾ ಮತ್ತು ಸಂಗಮದಲ್ಲಿ ಸ್ನಾನ ಮಾಡಿದ್ದಾರೆ ಎಂದು ಮಹಾಕುಂಭದ ಆಡಳಿತ ಬಿಡುಗಡೆ ಮಾಡಿದ ಅಂಕಿ- ಅಂಶಗಳು ತಿಳಿಸಿವೆ. ಇದುವರೆಗೆ 42 ಕೋಟಿಗೂ ಹೆಚ್ಚು ಭಕ್ತರು ಗಂಗಾ ಮತ್ತು ಸಂಗಮದಲ್ಲಿ ಸ್ನಾನ ಮಾಡಿದ್ದಾರೆ ಎಂದು ಅಂಕಿ-ಅಂಶಗಳು ಹೇಳುತ್ತಿವೆ.

ಟ್ರಾಫಿಕ್ ಜಾಮ್ ಕುರಿತು ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿದ್ದಾರೆ. ಪ್ರಯಾಗ್ರಾಜ್ ಮಹಾಕುಂಭದಲ್ಲಿ ಸಿಲುಕಿರುವ ಕೋಟ್ಯಂತರ ಭಕ್ತರಿಗೆ ತುರ್ತು ವ್ಯವಸ್ಥೆ ಮಾಡಬೇಕು. ಎಲ್ಲೆಡೆ ಟ್ರಾಫಿಕ್ ಜಾಮ್ನಲ್ಲಿ ಹಸಿವು, ಬಾಯಾರಿಕೆ, ಸಂಕಷ್ಟ ಮತ್ತು ದಣಿದ ಯಾತ್ರಾರ್ಥಿಗಳನ್ನು ಮಾನವೀಯ ದೃಷ್ಟಿಕೋನದಿಂದ ನೋಡಬೇಕು. ನವಾಬ್ಗಂಜ್ನಲ್ಲಿ ಈಗಾಗಲೇ ಲಕ್ನೋ ಕಡೆಗೆ ಪ್ರಯಾಗರಾಜ್ಗೆ ಪ್ರವೇಶಿಸುವ ಮೊದಲು 30 ಕಿಲೋಮೀಟರ್ ಟ್ರಾಫಿಕ್ ಜಾಮ್, ರೀವಾ ರಸ್ತೆಯ 16 ಕಿಮೀ ಮೊದಲು ಗೌಹಾನಿಯಾದಲ್ಲಿ ಜಾಮ್, ಮತ್ತು ವಾರಣಾಸಿ ಕಡೆಗೆ 12 ರಿಂದ 15 ಕಿಮೀ ಜಾಮ್ ಆಗಿದೆ. ರೈಲಿನ ಇಂಜಿನ್ನೂ ಜನರು ಪ್ರವೇಶಿಸಿದ ಸುದ್ದಿ ಎಲ್ಲೆಡೆ ಪ್ರಕಟವಾಗುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲಿ ಸಾಮಾನ್ಯ ಜೀವನ ಕಷ್ಟಕರವಾಗಿದೆ ಎಂದು ವರದಿಯಾಗುತ್ತಿದೆ.

# ದೆಹಲಿ ಸಿಎಂ ಆಯ್ಕೆ; ಅಮಿತ್ ಶಾ, ನಡ್ಡಾ ಭೇಟಿ

**ಹೊಸದಿಲ್ಲಿ:** ಬಿಜೆಪಿ ದಿಲ್ಲಿ ವಿಧಾನಸಭಾ ಚುನಾವಣೆಯಲ್ಲಿ 26 ವರ್ಷಗಳ ಬಳಿಕ ಅಭೂತಪೂರ್ವ ಗೆಲುವು ಸಾಧಿಸಿರುವ ಬೆನ್ನಲ್ಲೇ ನೂತನ ದಿಲ್ಲಿ ಮುಖ್ಯಮಂತ್ರಿಯನ್ನು ಆಯ್ಕೆ ಮಾಡುವ ಪಕ್ಷದ ಕಸರತ್ತು ರವಿವಾರ ಚುರುಕು ಪಡೆದುಕೊಂಡಿದ್ದು, ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಕೇಂದ್ರ ಗೃಹಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಚರ್ಚಿಸಿದ್ದಾರೆ. ಶನಿವಾರ ಬಿಜೆಪಿಯ ಪ್ರಧಾನ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ್ದ ಪ್ರಧಾನಿ ನರೇಂದ್ರ, ಮೋದಿ,ಬಳಿಕ ಹಿರಿಯ ನಾಯಕರೊಂದಿಗೆ ಸಮಾಲೋಚನೆಗಳನ್ನು ನಡೆಸಿದ್ದರು.



ದಿಲ್ಲಿಯ ಎಲ್ಲ ಪ್ರದೇಶಗಳಲ್ಲಿ ಮತ್ತು ಹೆಚ್ಚಿನ ಸಮುದಾಯಗಳಿಂದ ಗಣನೀಯ ಮತಗಳನ್ನು ಗಳಿಸಿರುವ ಬಿಜೆಪಿಯಲ್ಲೀಗ ಮುಖ್ಯಮಂತ್ರಿ ಹುದ್ದೆಗೆ ಆಕಾಂಕ್ಷಿಗಳ ದೊಡ್ಡ ದಂಡೇ ಇದೆ. ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳ ಆಯ್ಕೆಯಲ್ಲಿ ರಾಜಕೀಯ ಸಂದೇಶವನ್ನು ರವಾನಿಸಿದ್ದ ಬಿಜೆಪಿ ದಿಲ್ಲಿಯಲ್ಲಿಯೂ ಅದೇ ಹೆಜ್ಜೆಯನ್ನಿಡುವ ಸಾಧ್ಯತೆಯಿದೆ ಎಂದು ರಾಜಕೀಯ ವೀಕ್ಷಕರು ಅಭಿಪ್ರಾಯಿಸಿದ್ದಾರೆ.

# ಛತ್ತೀಸ್‌ಗಡದಲ್ಲಿ 31 ನಕ್ಸಲರ ಭರ್ಜರಿ ಬೇಟೆ

**ಛತ್ತೀಸ್‌ಗಢ:** ಛತ್ತೀಸ್‌ಗಢದಲ್ಲಿ ಕೆಂಪು ಉಗ್ರರ ವಿರುದ್ಧ ಕಾಯಾಚರಣೆಯನ್ನು ಭರ್ಜರಿಯಾಗಿ ಮುಂದುವರೆಸಿರುವ ಭದ್ರತಾಪಡೆಗಳು, ಭಾನುವಾರ ಬೆಳ್ಳಂಬೆಳಗ್ಗೆ 31 ನಕ್ಸಲರನ್ನು ಹೊಡೆದುರುಳಿಸಿದ್ದಾರೆ. ಇದರೊಂದಿಗೆ ಈ ವರ್ಷವೊಂದರಲ್ಲೇ ಭದ್ರತಾ ಪಡೆಗಳ ಗುಂಡಿಗೆ ಬಲಿಯಾದ ನಕ್ಸಲರ ಸಂಖ್ಯೆ 81ಕ್ಕೆ ಏರಿದೆ. ಈ ಕಾರ್ಯಾಚರಣೆಯಲ್ಲಿ ಇಬ್ಬರು ಭದ್ರತಾ ಸಿಬ್ಬಂದಿ ಕೂಡ ಸಾವನ್ನಪ್ಪಿದ್ದಾರೆ. ಘಟನಾ ಸ್ಥಳದಿಂದ ಭಾರೀ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ.ಖಚಿತ ಮಾಹಿತಿ ಮೇರೆಗೆ ಬಿಜಾಪುರ ಜಿಲ್ಲೆಯ ಇಂದ್ರಾವತಿ ರಾಷ್ಟ್ರೀಯ ಉದ್ಯಾನವನದ ದಟ್ಟಾರಣ್ಯದಲ್ಲಿ ನಕ್ಸಲರ ಅಡಗುತಾಣದ ಮೇಲೇ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಮತ್ತು ವಿಶೇಷ ಕಾರ್ಯಪಡೆಯ (ಎಸ್ಟಿಎಫ್) 650 ಜನರ ತಂಡ ಭಾನುವಾರ ಬೆಳಗ್ಗೆ ದಾಳಿ ನಡೆಸಿತ್ತು.



ಈ ವೇಳೆ ನಕ್ಸಲರು ಮತ್ತು ಭದ್ರತಾ ಪಡೆಗಳ ನಡುವೆ ಭಾರೀ ಪ್ರಮಾಣದ ಗುಂಡಿನ ಚಕಮಕಿ ನಡೆದಿದೆ. ಹಲವು ಗಂಟೆಗಳ ಕಾಲ ನಡೆದ ಗುಂಡಿನ ಚಕಮಕಿ ಬಳಿಕ ಸ್ಥಳದಲ್ಲಿ 31 ನಕ್ಸಲರು ಶವ ಪತ್ತೆಯಾಗಿದೆ. ಘಟನಾ ಸ್ಥಳದಲ್ಲಿ ಎಕೆ-47, ಐಎನ್‌ಎಸ್‌ಎಎಸ್, ಎಸ್‌ಎಲ್ ಆರ್ ಮತ್ತು 303 ರೈಫಲ್ಸ್‌ಗಳು, ಬ್ಯಾರೆಲ್ ಗ್ರೆನೇಡ್ ಲಾಂಚರ್ಗಳು, ಸ್ಫೋಟಕ ಪತ್ತೆಯಾಗಿದೆ.ಗುಂಡಿನ ಚಕಮಕಿ ವೇಳೆ ಜಿಲ್ಲಾ ಮೀಸಲು ಪಡೆ ಹಾಗೂ ವಿಶೇಷ ಕಾರ್ಯಪಡೆಯ ಇಬ್ಬರು ಸಿಬ್ಬಂದಿ ಸಾವಿಗೀಡಾಗಿದ್ದಾರೆ. ಕಾರ್ಯಾಚರಣೆ ವೇಳೆ ಗಾಯಗೊಂಡಿದ್ದ ಇಬ್ಬರು ಜವಾನರನ್ನು ಏರ್ಲಿಫ್ಟ್ ಮಾಡಲಾಗಿದ್ದು, ಅವರು ಅಪಾಯದಿಂದ ಪಾರಾಗಿದ್ದಾರೆ. ಹೆಚ್ಚುವರಿ ಸಿಬ್ಬಂದಿಯನ್ನು ಕರೆಸಿಕೊಳ್ಳಲಾಗಿದ್ದು, ಸುತ್ತಮುತ್ತ ಕೂಂಬಿಂಗ್ ಕಾರ್ಯಾಚರಣೆ ಮುಂದುವರಿದಿದೆ ಎಂದು ಬಸ್ತಾರ್ ರೇಂಜ್ನ ಇನ್ಸ್ಪೆಕ್ಟರ್ ಜನರಲ್ ಸುಂದರ್ರಾಜ್ ಪಿ. ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಈ ವರ್ಷವೊಂದರಲ್ಲೇ ಭದ್ರತಾ ಪಡೆಗಳ ಗುಂಡಿಗೆ 81 ನಕ್ಸಲರು ಬಲಿಯಾಗಿದ್ದಾರೆ. ಈ ಪೈಕಿ 65 ಜನರು ಬಸ್ತರ್ ವಲಯವೊಂದರಲ್ಲೇ ಹತರಾಗಿದ್ದಾರೆ. ಕಳೆದ ವರ್ಷ ಕೂಡಾ ವಿವಿಧ ಕಾರ್ಯಾಚರಣೆಯಲ್ಲಲಿ 219 ನಕ್ಸಲರು ಹತರಾಗಿದ್ದರು.ಕಳೆದ ವರ್ಷದ ಅ.4ರಂದು ಅಬುಜ್ಮದ್ ಪ್ರದೇಶದಲ್ಲಿ ನಡೆದ ಎನ್ಕೌಂಟರ್ ವೇಳೆ 38 ನಕ್ಸಲರು ಹತರಾಗಿದ್ದು, ಇತ್ತೀಚಿನ ವರ್ಷಗಳಲ್ಲಿ ನಕ್ಸಲರ ಬೇಟೆಯ ಅತಿದೊಡ್ಡ ಪ್ರಕರಣವಾಗಿತ್ತು.

# ವಾಟಪ್‌ಗೆ ಬಂದಿರುವ ಲಿಂಕ್ ಓಪನ್ ಮಾಡದೇ ಇದ್ರೂ ಫೋನ್ ಹ್ಯಾಕ್!

**ವಾಷಿಂಗ್ಟನ್:** ವಾಟ್ಸಪ್‌ಗೆ ಬಂದಿರುವ ಲಿಂಕ್ ಓಪನ್ ಮಾಡದೇ ಇದ್ದರೂ ಇನ್ನು ಮುಂದೆ ನಿಮ್ಮ ಫೋನ್ ಹ್ಯಾಕ್ ಆಗಬಹುದು. ಇಲ್ಲಿಯವರೆಗೆ ವಾಟ್ಸಪ್ ಬಂದ ಲಿಂಕ್ ಓಪನ್ ಮಾಡಿದ್ದರೆ ಆಗ ಫೋನ್‌ಗಳು ಹ್ಯಾಕ್ ಆಗುತ್ತಿದ್ದವು. ಆದರೆ ಈಗ ಹ್ಯಾಕರ್‌ಗಳು ಇನ್ನು ಮುಂದೆ ಹೋಗಿದ್ದು ಲಿಂಕ್ ಓಪನ್ ಮಾಡದೇ ಹ್ಯಾಕ್ ಮಾಡಲು ಆರಂಭಿಸಿದ್ದಾರೆ. ಸುಮಾರು 12ಕ್ಕೂ ಹೆಚ್ಚು ದೇಶಗಳಲ್ಲಿ 90 ಜನರ ಮೊಬೈಲಿಗೆ ಸ್ಪೈವೇರ್ ಬಳಸಿ ಹ್ಯಾಕ್ ಮಾಡಿದ್ದಾರೆ ಎಂದು ವರದಿಯಾಗಿದೆ. ಇಸ್ರೇಲ್ ಕಂಪನಿಯಾದ ಪ್ಯಾರಾಗಾನ್ ಸೊಲ್ಯೂಷನ್ಸ್ ಒಡೆತನದ ಹ್ಯಾಕಿಂಗ್ ಟೂಲ್ ಬಳಸಿ ಹ್ಯಾಕ್ ಮಾಡಲಾಗಿದೆ. ಪ್ಯಾರಾಗಾನ್‌ನ ಸ್ಪೈವೇರ್ ಅನ್ನು ಸರ್ಕಾರಗಳಿಗೆ ಮಾರಾಟ ಮಾಡಲಾಗುತ್ತದೆ. ಅಪರಾಧಿಗಳ ವಿರುದ್ಧ ಮತ್ತು ರಾಷ್ಟ್ರೀಯ ಭದ್ರತೆ ಸಂಬಂಧ ಪಟ್ಟ ಪ್ರಕರಣಗಳು ಬಂದಾಗ ಸರ್ಕಾರ ಈ ಸ್ಪೈವೇರ್ ಬಳಸಿ ಮಾಹಿತಿಗಳನ್ನು ಕಲೆ ಹಾಕುತ್ತವೆ.ಈ ಸ್ಪೈವೇರ್ ಪೀಡಿತ ಬಳಕೆದಾರರ ಸಾಧನಗಳು ಅಪಾಯಕ್ಕೆ ಸಿಲುಕಿರಬಹುದು ಎಂದು ವಾಟ್ಸಾಪ್ ದೃಢಪಡಿಸಿದೆ. ಸುಮಾರು 90 ಬಳಕೆದಾರರನ್ನು ಹ್ಯಾಕ್ ಮಾಡುವ ಪ್ರಯತ್ನವನ್ನು ಪತ್ತೆಹಚ್ಚಿರುವುದಾಗಿ ವಾಟ್ಸಾಪ್ ಅಧಿಕಾರಿಯೊಬ್ಬರು ಮಾಧ್ಯಮಕ್ಕೆ ತಿಳಿಸಿದ್ದಾರೆ. ನಿರ್ದಿಷ್ಟವಾಗಿ ಯಾರನ್ನು ಗುರಿಯಾಗಿಸಿ ಈ ಸ್ಪೈವೇರ್ ಬಿಡಲಾಗಿದೆ ಎಂದು ಹೇಳಲು ವಾಟ್ಸಪ್ ಅಧಿಕಾರಿಗಳು ನಿರಾಕರಿಸಿದ್ದಾರೆ. ಯುರೋಪಿನ ಹಲವಾರು ಜನ ಸೇರಿದಂತೆ 12 ಹೆಚ್ಚು ದೇಶಗಳ ಜನರನ್ನು ಗುರಿಯಾಗಿ ಈ ಸೈಬರ್ ದಾಳಿ ನಡೆದಿದೆ.



# ವೇದಿಕೆಯಲ್ಲೇ ಸಾವು

**ಭೋಪಾಲ್:** ಮದುವೆ ಕಾರ್ಯಕ್ರಮದಲ್ಲಿ ನೃತ್ಯ ಮಾಡುತ್ತಿದ್ದಾಗಲೇ ಹೃದಯಸ್ತಂಭನದಿಂದ 23ರ ಯುವತಿಯೊಬ್ಬಳು ಕುಸಿದು ಬಿದ್ದು ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ವಿದಿಶಾ ಜಿಲ್ಲೆಯ ರೆಸಾರ್ಟ್‌ನಲ್ಲಿ ನಡೆದಿದೆ.

ಯುವತಿಯನ್ನು ಇಂದೋರ್ ನಿವಾಸಿ ಪರಿಣಿತಾ ಜೈನ್ ಎಂದು ಗುರುತಿಸಲಾಗಿದ್ದು, ಆಕೆಯ ಸೋದರ ಸಂಬಂಧಿ ಮದುವೆಯಲ್ಲಿ ಪಾಲ್ಗೊಂಡಿದ್ದರು. 200ಕ್ಕೂ ಹೆಚ್ಚು ಗಣ್ಯರು ಉಪಸ್ಥಿತರಿದ್ದರು. ಈ ವೇಳೆ ಪರಿಣಿತಾ ವೇದಿಕೆಯಲ್ಲಿ ಬಾಲಿವುಡ್ ಗೀತೆಯೊಂದಕ್ಕೆ ನೃತ್ಯ ಮಾಡುತ್ತಿದ್ದಾಗಲೇ ಹೃದಯ ಸ್ತಂಬನದಿಂದ ಸಾವನ್ನಪ್ಪಿದ್ದಾರೆ. ಆಕೆ ಕುಸಿದು ಬಿದ್ದ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡಿದ ನಂತರ ಘಟನೆ ಬೆಳಕಿಗೆ ಬಂದಿದೆ.

ಈ ವೇಳೆ ಸಮಾರಂಭದಲ್ಲಿ ಪಾಲ್ಗೊಂಡಿದ್ದ ವೈದ್ಯರು ಆಕೆಗೆ ಸಿಪಿಆರ್ (ಕಾರ್ಡಿಯೋಪಲ್ಮನರಿ ರೆಸಸಿಟೇಶನ್) ನೀಡಲು ಪ್ರಯತ್ನಿಸಿದ್ರು, ಆದ್ರೆ ಪ್ರಯೋಜನವಾಗಲಿಲ್ಲ. ತಕ್ಷಣ ಅಲ್ಲಿಂದ ಖಾಸಗಿ ಅಸ್ಪತ್ರೆಗೆ ಕರೆದೊಯ್ಯಲಾಯಿತು ಅಷ್ಟರಲ್ಲಿ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ರು.

ಎಂಬಿಎ ಪದವೀಧರರಾಗಿದ್ದ ಪರಿಣಿತಾ ತಮ್ಮ ಪೋಷಕರೊಂದಿಗೆ ಇಂದೋರ್‌ನ ದಕ್ಷಿಣ ತುಕೋಗಂಜ್‌ನಲ್ಲಿ ವಾಸಿಸುತ್ತಿದ್ದರು. ಮೂಲಗಳ ಪ್ರಕಾರ, ಆಕೆಯ ಸಹೋದರನೊಬ್ಬ 12ನೇ ವಯಸ್ಸಿನಲ್ಲೇ ಹೃದಯಾಘಾತದಿಂದ ಸಾವನ್ನಪ್ಪಿದ.

# ಸರ್ಕಾರಿ ಭೂಮಿ ಒತ್ತುವರಿ ಆರೋಪ: ಮಸೀದಿ ಕೆಡವಿದ ಅಧಿಕಾರಿಗಳು

**ಲಕ್ನೋ:** ಉತ್ತರ ಪ್ರದೇಶದ ಕುಶಿನಗರ ಜಿಲ್ಲೆಯಲ್ಲಿ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ಮಸೀದಿ ನಿರ್ಮಿಸಿದ ಆರೋಪದಲ್ಲಿ ರವಿವಾರ ಭದ್ರತಾ ಸಿಬ್ಬಂದಿ ಮತ್ತು ಹಿರಿಯ ಅಧಿಕಾರಿಗಳ ಸಮಕ್ಷಮದಲ್ಲಿ ಬುಲ್ಡೋಜರ್ ಮೂಲಕ ಮಸೀದಿಯನ್ನು ಭಾಗಶಃ ಕೆಡವಿದ ಘಟನೆ ವರದಿಯಾಗಿದೆ.

ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ಮದನಿ ಮಸೀದಿ ನಿರ್ಮಿಸಲಾಗಿದೆ ಎಂದು ಆರೋಪಿಸಿದ ರಾಮ್ ಬಚನ್ ಸಿಂಗ್ ಎಂಬ ಸಾಮಾಜಿಕ ಹೋರಾಟಗಾರ ಸಿಎಂ ಪೋರ್ಟಲ್ ನಲ್ಲಿ ಈ ಬಗ್ಗೆ ದೂರು ದಾಖಲಿಸಿ, ಸಮೀಕ್ಷೆ ನಡೆಸುವಂತೆ ಆಗ್ರಹಿಸಿದ್ದ.

ಈ ಹಂತದಲ್ಲಿ ಮಸೀದಿಯ ಆಡಳಿತ ಮಂಡಳಿ ಅಲಹಾಬಾದ್ ಹೈಕೋರ್ಟ್ನ ಮೊರೆ ಹೋಗಿತ್ತು. ಒತ್ತುವರಿಯಾದ ಜಾಗದಲ್ಲಿ ನಿರ್ಮಿಸಿದ್ದು ಎನ್ನಲಾದ ಮಸೀದಿಯ ಭಾಗಕ್ಕೆ ಹೈಕೋರ್ಟ್ ಶನಿವಾರದ ವರೆಗೆ ತಡೆಯಾಜ್ಞೆ ನೀಡಿತ್ತು.

ಮಸೀದಿ ನಿರ್ಮಾಣಕ್ಕೆ 15 ವರ್ಷಗಳ ಹಿಂದೆ 32 ಡೆಸಿಮಲ್ ಜಾಗವನ್ನು ಖರೀದಿಸಲಾಗಿತ್ತು. ಮಸೀದಿ 30 ಡೆಸಿಮಲ್ ಜಾಗದಲ್ಲೇ ಇದ್ದು, ಯಾವುದೇ ಒತ್ತುವರಿಯಾಗಿಲ್ಲ ಎನ್ನುವುದು ಮಸೀದಿ ನಿರ್ವಹಿಸುವ ಮುಸ್ಲಿಂ ಸಮುದಾಯದ ವಾದ.



# ಬಾಂಗ್ಲಾದೇಶದಲ್ಲಿ ಆಪರೇಷನ್ ಡೆವಿಲ್ ಹಂಟ್' ಮೂಲಕ 1,308 ಜನರ ಬಂಧನ

**ಢಾಕಾ/ನವದೆಹಲಿ:** ಬಾಂಗ್ಲಾದೇಶದ ಭದ್ರತಾ ಪಡೆ ಹೊಸದಾಗಿ ಆಪರೇಷನ್ ಡೆವಿಲ್ ಹಂಟ್ ಎಂಬ ಹೆಸರಿನಡಿ 1,308 ಜನರನ್ನು ಬಂಧಿಸಿವೆ. ರಾಷ್ಟ್ರದಲ್ಲಿನ ತೀವ್ರ ವಿಧ್ವಂಸಕತೆಯ ಮಧ್ಯೆ ರಾತ್ರೋರಾತ್ರಿ ಈ ಆಪರೇಷನ್ನ್ನು ಕಾರ್ಯಗತಗೊಳಿಸಲಾಗಿದೆ. ಕಳೆದ ನಾಲ್ಕು ದಿನಗಳಿಂದ ಬಾಂಗ್ಲಾ ಅಶಾಂತಿಯಿಂದ ಕೂಡಿದೆ. ಮಧ್ಯಂತರ ಸರ್ಕಾರವು 'ಎಲ್ಲಾ ದೆವ್ವಗಳನ್ನು' ಬೇರು ಸಹಿತ ಕಿತ್ತೊಗೆಯುವವರೆಗೂ ಈ ಆಪರೇಷನ್ನ್ನು ಮುಂದುವರೆಸುವುದಾಗಿ ಪ್ರತಿಜ್ಞೆ ಮಾಡಿದೆ.



ಕಾರ್ಯಾಚರಣೆಯ ಗುರಿಗಳ ಬಗ್ಗೆ ಗೃಹ ವ್ಯವಹಾರಗಳ ಸಲಹೆಗಾರ ಎಂಡಿ ಜಹಾಂಗೀರ್ ಆಲಂ ಚೌಧರಿ ಹೇಳಿದ್ದು ಹೀಗೆ. ದೆವ್ವ' ಎಂದರೆ ಏನು? ಅದು ದುಷ್ಟ ಶಕ್ತಿಗಳನ್ನು ಸೂಚಿಸುತ್ತದೆ. ಈ ಕಾರ್ಯಾಚರಣೆಯು ದೇಶವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುವ, ಕಾನೂನು ಮುರಿಯಲು, ಅಪರಾಧ ಚಟುವಟಿಕೆಗಳಲ್ಲಿ ತೊಡಗಿರುವ ಮತ್ತು ಭಯೋತ್ಪಾದನಾ ಕೃತ್ಯಗಳನ್ನು ಎಸಗುವವರನ್ನು ಗುರಿಯಾಗಿರಿಸಿಕೊಂಡಿದೆ ಎಂದು ಅವರು ವಿವರಿಸಿದ್ದಾರೆ.

ಢಾಕಾದ ಹೊರವಲಯದಲ್ಲಿರುವ ಅವಾಮಿ ಲೀಗ್ ನಾಯಕನ ಮನೆಯಲ್ಲಿ ನಡೆದ ಕೆಲ ವಿಧ್ವಂಸಕ ಕೃತ್ಯಗಳ ಸಂದರ್ಭದಲ್ಲಿ ವಿದ್ಯಾರ್ಥಿ ಕಾರ್ಯಕರ್ತರು ಗಾಯಗೊಂಡಿದ್ದರು. ಇದಾದ ನಂತರ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಶನಿವಾರ ಈ ಆಪರೇಷನ್ ಡೆವಿಲ್ ಹಂಟ್ ಗೆ ಆದೇಶ ನೀಡಿದೆ. ಸೇನಾ ಪಡೆಗಳು, ಪೊಲೀಸರು ಮತ್ತು ಅವರ ವಿಶೇಷ ಘಟಕಗಳನ್ನು ಒಳಗೊಂಡ ಜಂಟಿ ಪಡೆಗಳು ಕಾರ್ಯಾಚರಣೆ ಪ್ರಾರಂಭಿಸಿದ 24 ಗಂಟೆಗಳಲ್ಲಿ ದೇಶದ ವಿವಿಧ ಭಾಗಗಳಲ್ಲಿ ಪ್ರಮುಖವಾಗಿ 274 ಜನರನ್ನು ಬಂಧಿಸಿವೆ ಎಂದು ಅಲ್ಲಿನ ಪ್ರಮುಖ ಮಾಧ್ಯಮಗಳು ಭಾನುವಾರ ತಿಳಿಸಿವೆ.

# ಲಿಬಿಯಾ: ಸಮಾಧಿಯಲ್ಲಿ 50 ವಲಸಿಗರ ಮೃತದೇಹ ಪತ್ತೆ

**ಟ್ರಿಪೋಲಿ:** ಆಗ್ನೇಯ ಲಿಬಿಯಾದ ಮರುಭೂಮಿಯಲ್ಲಿ 2 ಸಾಮೂಹಿಕ ಸಮಾಧಿಗಳಿಂದ ಸುಮಾರು 50 ವಲಸಿಗರ ಮೃತದೇಹಗಳನ್ನು ಅಧಿಕಾರಿಗಳು ಪತ್ತೆಹಚ್ಚಿದ್ದಾರೆ ಎಂದು ಸರಕಾರದ ಉನ್ನತ ಮೂಲಗಳು ಮಾಹಿತಿ ನೀಡಿವೆ.



ಆಗ್ನೇಯ ನಗರವಾದ ಕುಫ್ರಾದಲ್ಲಿನ ಜಮೀನಿನಲ್ಲಿ ಪತ್ತೆಹಚ್ಚಲಾದ ಸಾಮೂಹಿಕ ಸಮಾಧಿಯಲ್ಲಿ 19 ಮೃತದೇಹಗಳಿದ್ದವು. ಅವುಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಪೊಲೀಸ್ ಅಧಿಕಾರಿಗಳು ಹಾಗೂ ವೈದ್ಯಕೀಯ ಸಿಬ್ಬಂದಿಗಳು ಮರಳನ್ನು ಅಗೆದು ಕಂಬಳಿಗಳಲ್ಲಿ ಸುತ್ತಿಡಲಾಗಿದ್ದ ಮೃತದೇಹಗಳನ್ನು ಹೊರತೆಯುತ್ತಿರುವ ಚಿತ್ರವನ್ನು ಅಧಿಕಾರಿಗಳು ಫೇಸ್ಬುಬಕ್ನಲಲ್ಲಿ ಪೋಸ್ಟ್ ಮಾಡಿದ್ದಾರೆ.

ಮೃತರಲ್ಲಿ ಕೆಲವರನ್ನು ಗುಂಡಿಕ್ಕಿ ಹತ್ಯೆ ಮಾಡಿರುವುದು ಸ್ಪಷ್ಟವಾಗಿದೆ ಎಂದು ಪೂರ್ವ ಮತ್ತು ದಕ್ಷಿಣ ಲಿಬಿಯಾದಲ್ಲಿ ವಲಸಿಗರಿಗೆ ನೆರವಾಗುವ 'ಅಲ್-ಅಬ್ರೀನ್ ಚಾರಿಟಿ' ಹೇಳಿದೆ. ಕುಫ್ರಾ ನಗರದಲ್ಲಿ ಕಾರ್ಯಾಚರಿಸುತ್ತಿದ್ದ ಮಾನವ ಕಳ್ಳಸಾಗಣೆ ಕೇಂದ್ರದ ಮೇಲೆ ಅಧಿಕಾರಿಗಳು ದಾಳಿ ಮಾಡಿ ಶೋಧ ನಡೆಸಿದಾಗ ಮತ್ತೊಂದು ಸಾಮೂಹಿಕ ಗೋರಿಯಲ್ಲಿ ಕನಿಷ್ಟ 30 ವಲಸಿಗರ ಮೃತದೇಹ ಪತ್ತೆಯಾಗಿದೆ. ಅಧಿಕಾರಿಗಳು ಈ ಪ್ರದೇಶದಲ್ಲಿ ಮತ್ತಷ್ಟು ಶೋಧ ಕಾರ್ಯ ಮುಂದುವರಿಸಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ.

# ಯುಕೆಯಲ್ಲಿ ಅಕ್ರಮ ಕೆಲಸ: 600 ಕ್ಕೂ ಹೆಚ್ಚು ಜನರ ಬಂಧನ

ಯುಕೆ ವಲಸೆ ಜಾರಿ ತಂಡಗಳು ಜನವರಿಯಲ್ಲಿ 600 ಕ್ಕೂ ಹೆಚ್ಚು ಜನರನ್ನು ಬಂಧಿಸಿವೆ, ಇದು ಒಂದು ವರ್ಷದ ಹಿಂದಿನ ಇದೇ ಅವಧಿಗೆ ಹೋಲಿಸಿದರೆ 73 ಪ್ರತಿಶತ ಹೆಚ್ಚಳವಾಗಿದೆ, ಇದು ಹೊಸ ಲೇಬರ್ ಸರ್ಕಾರದ ದಾಖಲೆರಹಿತ ವಲಸೆ ಮತ್ತು ಜನರ ಕಳ್ಳಸಾಗಣೆ ಗ್ಯಾಂಗ್ಗಳನ್ನು ನಿಭಾಯಿಸುವ ಯೋಜನೆಯ ಭಾಗವಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ. ಜನವರಿ 2024 ರಲ್ಲಿ 352 ಕ್ಕೆ ಹೋಲಿಸಿದರೆ 609 ಬಂಧನಗಳನ್ನು ನೇಲ್ ಬಾರ್ಗಳು, ರೆಸ್ಟೋರೆಂಟ್ಗಳು, ಕಾರ್ ವಾಶ್ಗಳು ಮತ್ತು ಕನ್ವೀನಿಯನ್ಸ್ ಸ್ಟೋರ್ಗಳು ಸೇರಿದಂತೆ 800 ಕ್ಕೂ ಹೆಚ್ಚು ಆವರಣಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಾಡಲಾಗಿದೆ ಎಂದು ಸರ್ಕಾರಿ ಹೇಳಿಕೆ ತಿಳಿಸಿದೆ.



ಕಳೆದ ವರ್ಷ ಅಧಿಕಾರ ವಹಿಸಿಕೊಂಡ ನಂತರ, ಲೇಬರ್ ಪ್ರಧಾನಿ ಕೀರ್ ಸ್ಟಾರ್ಮರ್ ರುವಾಂಡಾಗೆ ಹೊಸ ಆಗಮನಗಳನ್ನು ಗಡೀಪಾರು ಮಾಡುವ ಮೂಲಕ ಯುಕೆಗೆ ದಾಖಲೆರಹಿತ ವಲಸೆಯನ್ನು ತಡೆಯುವ ತನ್ನ ಕನ್ಸರ್ವೇಟಿವ್ ಪೂರ್ವವರ್ತಿ ರಿಷಿ ಸುನಕ್ ಅವರ ಯೋಜನೆಯನ್ನು ತಕ್ಷಣವೇ ರದ್ದುಗೊಳಿಸಿದರು. ಗೃಹ ಕಾರ್ಯದರ್ಶಿ ಯೆವೆಟ್ ಕೂಪರ್ ಅವರು ಮಾತನಾಡಿ, ಉದ್ಯೋಗದಾತರು ಬಹಳ ಸಮಯದಿಂದ ''ಅಕ್ರಮ ವಲಸಿಗರನ್ನು ಬಳಸಿಕೊಳ್ಳಲು ಸಾಧ್ಯವಾಗಿದೆ ಮತ್ತು ಹಲವಾರು ಜನರು ಅಕ್ರಮವಾಗಿ ಬಂದು ಕೆಲಸ ಮಾಡಲು ಸಾಧ್ಯವಾಗಿದೆ ಮತ್ತು ಯಾವುದೇ ಜಾರಿ ಕ್ರಮ ತೆಗೆದುಕೊಳ್ಳಲಾಗಿಲ್ಲ. ನಮ್ಮ ಗಡಿ ಭದ್ರತೆಯನ್ನು ದುರ್ಬಲಗೊಳಿಸುವ ಮತ್ತು ಬಹಳ ಸಮಯದಿಂದ ತಪ್ಪಿಸಿಕೊಳ್ಳುತ್ತಿರುವ ಕ್ರಿಮಿನಲ್ ಗ್ಯಾಂಗ್ಗಳನ್ನು ಹೊಡೆದುರುಳಿಸಲು ಕಠಿಣ ಹೊಸ ಕಾನೂನಿನ ಜೊತೆಗೆ ನಾವು ಜಾರಿಯನ್ನು ದಾಖಲೆಯ ಮಟ್ಟಕ್ಕೆ ಹೆಚ್ಚಿಸುತ್ತಿದ್ದೇವೆ'' ಎಂದು ಅವರು ಹೇಳಿದರು.

ಪ್ರಸ್ತುತ ಐತಿಹಾಸಿಕವಾಗಿ ಹೆಚ್ಚಿನ ಮಟ್ಟದಲ್ಲಿ ನಡೆಯುತ್ತಿರುವ ನಿಯಮಿತ ವಲಸೆ, ಜೂನ್ 2024 ರವರೆಗೆ ವರ್ಷಕ್ಕೆ 728,000 ಎಂದು ಅಂದಾಜಿಸಲಾಗಿದೆ, ಇದು ಮತದಾನದಲ್ಲಿ ಬಿಸಿ ಬಟನ್ ಸಮಸ್ಯೆಯಾಗಿತ್ತು. ಜುಲೈ 4 ರ ಸಮೀಕ್ಷೆಯಲ್ಲಿ ಸರಿಸುಮಾರು ನಾಲ್ಕು ಮಿಲಿಯನ್ ಮತಗಳನ್ನು ಗೆದ್ದ ನಿಗೆಲ್ ಫರಾಜ್ ಅವರ ವಲಸೆ ವಿರೋಧಿ ಸುಧಾರಣೆ ಯುಕೆ ಪಕ್ಷಕ್ಕೆ ಹೆಚ್ಚುತ್ತಿರುವ ಬೆಂಬಲವನ್ನು ತಡೆಯಲು ಸ್ಟಾರ್ಮರ್ ಕಾನೂನು ಮತ್ತು ದಾಖಲೆರಹಿತ ವಲಸೆಯನ್ನು ಕಡಿಮೆ ಮಾಡಬೇಕಾಗಿದೆ ಇದು ತೀವ್ರ ಬಲಪಂಥೀಯ ಪಕ್ಷಕ್ಕೆ ಅಭೂತಪೂರ್ವ ಗಳಿಕೆಯಾಗಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 16ರಂದು ರಿಲೀಸ್ ಆಗಲಿದೆ 'ಡೆವಿಲ್' ಟೀಸರ್




ದರ್ಶನ್ ನಟನೆಯ 'ಡೆವಿಲ್' ಸಿನಿಮಾದ ಅಪ್‌ಡೇಟ್‌ಗಾಗಿ ಕಾಯುತ್ತಿದ್ದ ಅಭಿಮಾನಿಗಳಿಗೆ ಸಿಹಿಸುದ್ದಿ ಸಿಕ್ಕಿದೆ. 'ಡೆವಿಲ್' ಚಿತ್ರದ ಟೀಸರ್ ರಿಲೀಸ್ ಆಗಲಿದೆ ಎಂದು ಸ್ವತಃ ದರ್ಶನ್ ಸೋಶಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ. ಇದೇ ಫೆ.16ರಂದು ದರ್ಶನ್ 47ನೇ ವಸಂತಕ್ಕೆ ಕಾಲಿಡಲಿದ್ದಾರೆ. ಹಾಗಾಗಿ 'ಡೆವಿಲ್' ಚಿತ್ರದ ಟೀಸರ್ ಆಗಲಿದೆ. ನಮ್ಮ ಹೊಸ ಪ್ರಯತ್ನದ ಹಾರಿವು ಶೀಘ್ರದಲ್ಲೇ ನಿಮ್ಮ ಮುಂದೆ ಎಂದು 'ಡೆವಿಲ್' ಪೋಸ್ಟರ್ ಶೇರ್ ಮಾಡಿ ದರ್ಶನ್ ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಇನ್ನೂ ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಅರೆಸ್ಟ್ ಆಗುವ ಮುನ್ನ 'ಡೆವಿಲ್' ಸಿನಿಮಾದ ಶೂಟಿಂಗ್‌ನಲ್ಲಿ ಭಾಗಿಯಾಗಿದ್ದರು. ಆ ವೇಳೆ, ಚಿತ್ರದ ಮೊದಲ ಗ್ಲಿಂಪ್ಸ್ ಬಿಡುಗಡೆ ಆಗಿತ್ತು. ಬೇಲ್ ಮೇಲೆ ಹೊರಬಂದ ಬಳಿಕ ಸಿನಿಮಾದ ಡಬ್ಬಿಂಗ್ ಕೆಲಸದಲ್ಲಿ ದರ್ಶನ್ ಭಾಗಿಯಾಗಿದ್ದರು. ಒಟ್ನಲ್ಲಿ ನಾನಾ ಕಾರಣಗಳಿಂದ ಡೆವಿಲ್ ಸಿನಿಮಾದ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

## ರಾಜ್ ನಿಡಿಮೋರು ಜೊತೆ ನಟಿ ಸಮಂತಾ ಡೇಟಿಂಗ್ ವದಂತಿ

ನವದೆಹಲಿ: ನಟಿ ಸಮಂತಾ ರುತ್ ಪ್ರಭು ಜೊತೆಗೆ ವಿಚ್ಛೇದನ ಪಡೆದ ಬಳಿಕ ಇದೇ ಮೊದಲ ಬಾರಿಗೆ ನಟ ನಾಗ ಚೈತನ್ಯ ಮೌನ ಮುರಿದಿದ್ದಾರೆ. ಸಮಂತಾ ಕೂಡ ತಮ್ಮ ಜೀವನದಲ್ಲಿ ಮುಂದುವರಿದಿದ್ದಾರೆ ಎಂದಿದ್ದಾರೆ. ಸಮಂತಾ ಇತ್ತೀಚೆಗಷ್ಟೇ 'ಸಿಟಾಡೆಲ್: ಹನಿ ಬನ್ನಿ' ವೆಬ್ ಸರಣಿಯಲ್ಲಿ ಕಾಣಿಸಿಕೊಂಡಿದ್ದರು. ಸರಣಿಯ ನಿರ್ದೇಶಕ ರಾಜ್ ನಿಡಿಮೋರು ಜೊತೆಗೆ ನಟಿ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ವದಂತಿಗಳು ಕೇಳಿಬಂದಿದ್ದು, ಈ ನಡುವೆ ಮಾಜಿ ಪತಿ ನಾಗ ಚೈತನ್ಯ ಈ ಹೇಳಿಕೆ ನೀಡಿದ್ದಾರೆ. ರಾ ಟಾಕ್ಸ್ ವಿತ್ ವಿಕೆ ಪಾಡ್‌ಕ್ಯಾಸ್ಟ್‌ನಲ್ಲಿ ಮಾತನಾಡಿದ ನಾಗ ಚೈತನ್ಯ, 'ನಾನು ಜೀವನದಲ್ಲಿ ತುಂಬ ಮುಂದಕ್ಕೆ ಸಾಗಿದ್ದೇನೆ. ಆಕೆ (ಸಮಂತಾ) ಕೂಡ ಮುಂದಕ್ಕೆ ಸಾಗಿದ್ದಾರೆ. ನಾವಿಬ್ಬರೂ ಈಗ ನಮ್ಮದೇ ಆದ ಜೀವನವನ್ನು ನಡೆಸುತ್ತಿದ್ದೇವೆ. ನನಗೆ ಮತ್ತೆ ಪ್ರೀತಿ ಉಂಟಾಗಿದೆ. ನಾನು ಈಗ ತುಂಬಾ ಸಂತೋಷವಾಗಿದ್ದೇನೆ ಮತ್ತು ನಮ್ಮಿಬ್ಬರಿಗೆ ಪರಸ್ಪರ ತುಂಬಾ ಗೌರವವಿದೆ ಎಂದಿದ್ದಾರೆ.

## ಸಿನಿಮಾದಲ್ಲಿ ಪಾತ್ರ ನೀಡುವುದಾಗಿ ಮಾಜಿ ಸಿಎಂ ಪುತ್ರಿಗೆ 4 ಕೋಟಿ ರೂ. ಉಂಡೆನಾಮ ಹಾಕಿದ ಖದೀಮರು!



**ಉತ್ತರಾಖಂಡ್** : ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ರಮೇಶ್ ಪೋಖ್ರಿಯಾಲ್ ನಿಶಾಂಕ್ ಅವರ ಪುತ್ರಿ, ಆರುಷಿ ನಿಶಾಂಕ್ ಅವರಿಗೆ ಹಿರೋಯಿನ್ ಮಾಡುತ್ತೇವೆಂದು ಖದೀಮರು 4 ಕೋಟಿ ರೂಪಾಯಿ ಹಣವನ್ನು ಪಡೆದು ಎಸ್ಕೇಪ್ ಆಗಿರುವ ಘಟನೆ ನಡೆದಿದೆ. ಮುಂಬೈನ ಜುಹು ಪ್ರದೇಶದ ಇಬ್ಬರು ವ್ಯಕ್ತಿಗಳು ಚಲನಚಿತ್ರ ನಿರ್ಮಾಪಕರೆಂದು ಹೇಳಿಕೊಂಡು ಆಕೆಯಿಂದ 4 ಕೋಟಿ ರೂ. ಸುಲಿಗೆ ಮಾಡಿದ್ದಾರೆ. ಆರುಷಿ ನಿಶಾಂಕ್ ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ರಮೇಶ್ ಪೋಖ್ರಿಯಾಲ್ ನಿಶಾಂಕ್ ಅವರ ಪುತ್ರಿ. ಆರುಷಿ ಗೆ ಮೊದಲಿನಿಂದಲೂ ನಟನೆ ಅಂದ್ರೆ ತುಂಬಾ ಇಷ್ಟ. ಅವರು ಈಗಾಗಲೇ ಹಲವಾರು ಸಣ್ಣ ಚಿತ್ರಗಳಲ್ಲಿ ನಟಿಸಿದ್ದಾರೆ. ಆರುಷಿ ಚಲನಚಿತ್ರಗಳಲ್ಲಿ ನಟಿಸಲು ಮತ್ತು ಸ್ವಂತ ಚಲನಚಿತ್ರಗಳನ್ನು ನಿರ್ಮಿಸಲು ಹಿಮಶ್ರೀ ಫಿಲ್ಮ್ಸ್ ಎಂಬ ಕಂಪನಿಯನ್ನು ನಡೆಸುತ್ತಿದ್ದಾರೆ. ಮುಂಬೈನ ಮಾನ್ಸಿ ವರುಣ್ ಬಾಗ್ಲಾ ಮತ್ತು ವರುಣ್ ಪ್ರಮೋದ್ ಕುಮಾರ್ ಬಾಗ್ಲಾ ಎನ್ನುವವರು ಚಿತ್ರ ನಿರ್ಮಾಪಕರು ಎಂದು ಹೇಳಿಕೊಂಡು ಆರುಷಿ ನಿಶಾಂಕ್ ಮನೆಗೆ ಬಂದು ಆಕೆಯನ್ನು ಭೇಟಿಯಾಗಿದ್ದಾರೆ. ಇಬ್ಬರು ವ್ಯಕ್ತಿಗಳು ತಮ್ಮ ಮುಂಬರುವ ಚಿತ್ರ 'ಆಂಖೋಂ ಕಿ ಗುಸ್ತಖಿಯಾ'ದಲ್ಲಿ ಪ್ರಮುಖ ನಾಯಕಿ ಪಾತ್ರದಲ್ಲಿ ನಟಿಸಲು ಆರುಷಿಯನ್ನು 5 ಕೋಟಿ ರೂ. ಕೇಳಿದರು. ಚಿತ್ರ ಬಿಡುಗಡೆಯಾದ ನಂತರ, ಶೇ. 20 ರಷ್ಟು ಬಡ್ಡಿಯೊಂದಿಗೆ 15 ಕೋಟಿ ರೂ. ಗಳನ್ನು ಹಿಂದಿರುಗಿಸಲಾಗುವುದು ಎಂದು ಅವರಿಗೆ ಭರವಸೆ ನೀಡಲಾಯಿತು. ಆರುಷಿ ಒಪ್ಪಿಕೊಂಡು ಅವರಿಗೆ ನಾಲ್ಕು ಕಂತುಗಳಲ್ಲಿ ಒಟ್ಟು 4 ಕೋಟಿ ರೂ.ಗಳನ್ನು ನೀಡಿದ್ದಾರೆ. ನನ್ನ ಸ್ಕ್ರಿಪ್ಟ್ ಅನ್ನು ತಾವೇ ಫೈನಲ್ ಮಾಡುವುದಕ್ಕೂ ಅವಕಾಶವಿದೆ. ಜೊತೆಗೆ ಸಾಮಾಜಿಕ ಮಾಧ್ಯಮದಲ್ಲಿ ಪ್ರಚಾರ ಮಾಡಲು ಅವಕಾಶ ನೀಡುವುದಾಗಿ ಹೇಳಿದ್ದರು. ಈ ವರ್ಷ ಫೆಬ್ರವರಿ 2ರಂದು ಭಾರತದಲ್ಲಿ ಆಗಬೇಕಾದ ಸಿನಿಮಾದ ಶೂಟಿಂಗ್ ಪೂರ್ಣಗೊಳಿಸಲಾಗಿದ್ದು, ಉಳಿದ ಭಾಗವನ್ನು ಯುರೋಪಿನಲ್ಲಿ ಚಿತ್ರೀಕರಿಸುವ ಯೋಜನೆ ಮಾಡಲಾಗಿದೆ. ಆದರೆ ನನ್ನನ್ನು ಆಯ್ಕೆ ಮಾಡಿದ್ದ ಸ್ಥಾನದಲ್ಲಿ ಬೇರೆ ನಟಿಯನ್ನು ಆಯ್ಕೆ ಮಾಡಲಾಗಿದೆ. ತನ್ನ ಹಣ ಹಿಂದಿರುಗಿಸಿ ಕೊಡುವಂತೆ ಕೇಳಿದಕ್ಕೆ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.



## ಅರಣ್ಯದಲ್ಲಿ ನಿಯಮ ಉಲ್ಲಂಘನೆ
# ಕಲ್ಟ್ ವಿರುದ್ಧ ಕೇಸ್

ಕೊಪ್ಪಳ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ನಿಯಮ ಉಲ್ಲಂಘಿಸಿ ಚಿತ್ರೀಕರಣ ಮಾಡಿದ್ದಕ್ಕೆ ಕಲ್ಟ್ ಸಿನಿಮಾ ವಿರುದ್ಧ ಗಂಗಾವತಿ ವಲಯ ಅರಣ್ಯ ಇಲಾಖೆಯಲ್ಲಿ ಪ್ರಕರಣ ದಾಖಲಾಗಿದೆ.

ಜನವರಿ 31ರಂದು ಸಚಿವ ಜಮೀರ್ ಅಹ್ಮದ್ ಖಾನ್ ಅವರ ಪುತ್ರ ಜೈದ್ ಖಾನ್ ಹಾಗೂ ರಚಿತಾ ರಾಮ್ ನಟನೆಯ ಕಲ್ಟ್ ಚಿತ್ರ ತಂಡ ಗಂಗಾವತಿ ತಾಲೂಕಿನ, ಸಾಣಾಪುರ, ರಂಗಾಪುರ ಸೇರಿ ತುಂಗಭದ್ರಾ ದಡದಲ್ಲಿ ಚಿತ್ರೀಕರಣ ಮಾಡಿದ್ದರು. ತುಂಗಭದ್ರಾ ನೀರು ಸಂರಕ್ಷಿತ ಪ್ರದೇಶದಲ್ಲಿ ನಿಯಮ ಮೀರಿ ಚಿತ್ರೀಕರಣ ನಡೆಸಿದ್ದಕ್ಕೆ ದೂರು ದಾಖಲಾಗಿದೆ.

ಈ ಕುರಿತು ಅರಣ್ಯ ಅಧಿಕಾರಿಗಳ ಬಳಿ ಮಾಹಿತಿ ಕೇಳಿದಾಗ ನಿರಾಕರಿಸಿ, ಮಾಹಿತಿ ಬೇಕಾದರೆ ಸ್ಥಳೀಯ ನ್ಯಾಯಾಲಯದಲ್ಲಿ ವಿಚಾರಿಸುವಂತೆ ತಿಳಿಸಿದ್ದಾರೆ. ಇದೀಗ ಅಧಿಕಾರಿಗಳ ಮೇಲೆ ಸಚಿವ ಜಮೀರ್ ಅಹ್ಮದ್ ಒತ್ತಡ ಹೇರಿದ್ದಾರಾ ಎನ್ನುವ ಪ್ರಶ್ನೆ ಉದ್ಭವಿಸಿದೆ.

## ಭಾವಿ ಪತ್ನಿಗೆ ಡಾಲಿ ಪ್ರಪೋಸ್
# ವಿಡಿಯೋ ವೈರಲ್

ನಟ ರಾಕ್ಷಸ ಡಾಲಿ ಧನಂಜಯ ಅವರು ಇದೇ ಫೆ.16ರಂದು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಇದೀಗ ಆಕ್ಟರ್ ಡಾಲಿ ಲೈಫ್‌ಗೆ ಡಾಕ್ಟರ್ ಧನ್ಯತ ಎಂಟ್ರಿ ಕೊಟ್ಟಿರೋದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಇದರ ನಡುವೆ ಭಾವಿ ಪತ್ನಿ ಧನ್ಯತಾಗೆ ಉಂಗುರ ತೊಡಿಸಿ ವಿಶೇಷವಾಗಿ ಡಾಲಿ ಪ್ರಪೋಸ್ ಮಾಡಿದ್ದಾರೆ. ಹೊಸ ಜೋಡಿಯ ಪ್ರಪೋಸಲ್ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಧನ್ಯತ ಬರುವ ಮುನ್ನ ಡಾಲಿ ಸಿಂಗಲ್ ಲೈಫ್ ಹೇಗಿತ್ತು? ಎಂಬುದನ್ನು ವಿಡಿಯೋ ಮೂಲಕ ವಿವರಿಸಿದ್ದಾರೆ. ಡಾಲಿ ಆಪ್ತ ಸ್ನೇಹಿತ ನಾಗಭೂಷಣ್ ಧ್ವನಿಯಲ್ಲಿ ಈ ವಿಡಿಯೋ ಮೂಡಿ ಬಂದಿದೆ. ಬ್ಯಾಚುಲರ್ ಲೈಫ್ ಹೇಗಿತ್ತು? ಎಂಬುದನ್ನು ವಿವರಿಸಿ ನಂತರ ಧನ್ಯತ ಎಂಟ್ರಿ ಕೊಟ್ಟಿರೋದನ್ನು ತೋರಿಸಿದ್ದಾರೆ. ಡಾಕ್ಟರ್ ಅಮ್ಮ ಎಂದು ಡಾಲಿ ಹೇಳುತ್ತಾ, ಭಾವಿ ಪತ್ನಿಗೆ ಪ್ರೀತಿಯಿಂದ ಬೆರಳಿಗೆ ರಿಂಗ್ ತೊಡಿಸಿದ್ದಾರೆ. ಸಿಂಗಲ್ ಲೈಫ್ ಶುಭಂ ಹೇಳೋ ಸಮಯ ಬಂದಾಯ್ತು. ನೂರು ಬ್ಯಾಚುರಲ್ ಪಾರ್ಟಿಗಳೇ ಬರಲಿ. ನೂರು ಬ್ಯಾಚುಲರ್ ಪಾರ್ಟಿಗಳೇ ಬರಲಿ, ಸಾವಿರ ಸೋಲೋ ಟ್ರಿಪ್‌ಗಳೇ ಇರಲಿ. ನಿನ್ನಾ ಜೊತೆ ರೀಲ್ಸ್ ಮಾಡಿಕೊಂಡು ಇರುತ್ತೇನೆ. ಬನ್ನಿ ನಾವಿಬ್ಬರೂ ಹಸೆಮಣೆ ಏರುತ್ತಿರುವಾಗ ನೀವೆಲ್ಲಾ ಸಾಕ್ಷಿಯಾಗಿರಬೇಕು. ನೀವು ಅಕ್ಷತೆ ಹಾಕಬೇಕು. ಮಿಸ್ ಮಾಡದೇ ಬಂದು ಹಾರೈಸಿ ಹೋಳಿಗೆ ಊಟ ಮಾಡಿಕೊಂಡು ಹೋಗಿ. ಬ್ಯಾಚುಲರ್ ಆಗಿ ಉಳಿಯುವ ಗಂಡಿಗೆ ಬೆಲೆಯಿಲ್ಲ. ನಿಮ್ಮೆಲ್ಲರ ಹಾರೈಕೆಯೊಂದಿಗೆ ನಾನು ಬಿತ್ತಬೇಕಾಗಿರೋದು ಪ್ರೀತಿಯ ತೋಟ ಎಂದು ಡೈಲಾಗ್ ಹೊಡೆಯುತ್ತಾ ಭಾವಿ ಪತ್ನಿಗೆ ಕಿಸ್ ಮಾಡಿದ್ದಾರೆ ಡಾಲಿ. ಇನ್ನೂ ಇದೇ ಫೆ.15 ಹಾಗೂ ಫೆ.16ರಂದು ಡಾಲಿ ಮದುವೆ ಕಾರ್ಯಕ್ರಮ ನಡೆಯಲಿದೆ. ವಸ್ತುಪ್ರದರ್ಶನ ಮೈದಾನ, ಅಂಬಾವಿಲಾಸ ಅರಮನೆ ಮುಂಭಾಗ ಮೈಸೂರಿನಲ್ಲಿ ಮದುವೆ ಜರುಗಲಿದೆ. ಈ ಸಂಭ್ರಮದಲ್ಲಿ ಸಿನಿಮಾ ರಂಗದ ಸ್ಟಾರ್ಸ್ ಹಾಗೂ ರಾಜಕೀಯ ರಂಗದ ಗಣ್ಯರು ಭಾಗಿಯಾಗಲಿದ್ದಾರೆ.




## ರೋಹಿತ್ ಶರ್ಮಾ ಭರ್ಜರಿ ಶತಕ
# ಇಂಗ್ಲೆಂಡ್ ವಿರುದ್ಧ 4 ವಿಕೆಟ್ ಗೆಲುವು

**ಕಟಕ್:** ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರ ಆಕರ್ಷಕ ಶತಕದ ನೆರವಿನಿಂದ ಇಂಗ್ಲೆಂಡ್‌ನ್ನು ನಾಲ್ಕು ವಿಕೆಟ್ ಗಳಿಂದ ಸೋಲಿಸಿದ ಭಾರತ, ಮೂರು ಪಂದ್ಯಗಳ ಸರಣಿಯನ್ನು 2-1 ಅಂತರದಲ್ಲಿ ಗೆದ್ದುಕೊಂಡಿತು.

ಕಟಕ್ ನ ಬಾರಾಬತಿ ಕ್ರಿಕೆಟ್ ಮೈದಾನದಲ್ಲಿ ನಡೆದ 2ನೇ ಏಕದಿನ ಪಂದ್ಯದಲ್ಲಿ ಭಾರತ ತಂಡದ ನಾಯಕ ರೋಹಿತ್ ಶರ್ಮಾ ಮತ್ತೆ ಫಾರ್ಮ್ ಗೆ ಮರಳುವ ಮೂಲಕ ಭಾರತ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

**304 ರನ್ ಗಳಿಗೆ ಇಂಗ್ಲೆಂಡ್ ಆಲೌಟ್:** ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ತಂಡ 49.5 ಓವರ್ ಗಳಲ್ಲಿ 304 ರನ್ ಗಳಿಸುವ ಮೂಲಕ ಆಲೌಟ್ ಆಯಿತು. ಇಂಗ್ಲೆಂಡ್ ತಂಡದ ಪರ ಆರಂಭಿಕ ಆಟಗಾರ ಫಿಲ್ ಸಾಲ್ಟ್ 26 ರನ್ ಗಳಿಸಿದಾಗ ವರುಣ್ ಬೌಲಿಂಗ್ ನಲ್ಲಿ ಜಡೇಜಾ ಗೆ ಕ್ಯಾಚ್ ನೀಡಿ ನಿರ್ಗಮಿಸಿದರು. ನಂತರ ಜೊತೆಯಾದ ಬೆನ್ ಡಕೆಟ್ ಮತ್ತು ಜೊ ರೂಟ್ ಉತ್ತಮ ಜೊತೆಯಾಟದ ಮೂಲಕ ತಂಡದ ಮೊತ್ತವನ್ನು ಹೆಚ್ಚಿಸಿದರು. ಆದರೆ ಈ ಜೋಡಿಯನ್ನು ಬೇರ್ಪಡಿಸುವಲ್ಲಿ ಜಡೇಜಾ ಯಶಸ್ವಿಯಾದರು.

ಬೆನ್ ಡಕೆಟ್ 65, ಜೋ ರೂಟ್ 69 ರನ್ ಗಳಿಸಿದ ಕ್ರಮವಾಗಿ ಪಾಂಡ್ಯ ಹಾಗೂ ಕೊಹ್ಲಿ ಅವರಿಗೆ ಕ್ಯಾಚ್ ನೀಡಿ ನಿರ್ಗಮಿಸಿದರು. ನಂತರ ಹ್ಯಾರಿ ಬ್ರೂಕ್ 31, ನಾಯಕ ಜೊಸ್ ಬಟ್ಲರ್ 34, ಲಿಯಾಮ್ ಲಿವಿಂಗ್ ಸ್ಟೋನ್ 41 ರನ್ ಗಳಿಸದರು. ಇವರನ್ನು ಹೊರತುಪಡಿಸಿದರೆ ಬೇರೆ ಯಾವುದೇ ಆಟಗಾರರು ಕ್ರೀಸ್ ನಲ್ಲಿ ನಿಲ್ಲಲು ಭಾರತದ ಬೌಲರ್ ಗಳು ಬಿಡಲಿಲ್ಲ. ಪರಿಣಾಮ ಇಂಗ್ಲೆಂಡ್ 304 ರನ್ ಗಳಿಗೆ ಆಲೌಟ್ ಆಯಿತು.




**ಮತ್ತೆ ಫಾರ್ಮ್ ಗೆ ಮರಳಿದ 'ಹಿಟ್ ಮ್ಯಾನ್ ':** ಇಂಗ್ಲೆಂಡ್ ನೀಡಿದ 305 ರನ್ ಗಳ ಗೆಲುವಿನ ಗುರಿ ಬೆನ್ನಟ್ಟಿದ್ದ ಭಾರತದ ಪರ ರೋಹಿತ್ ಶರ್ಮಾ ಮತ್ತೆ ಫಾರ್ಮ್ ಗೆ ಮರಳುವ ಮೂಲಕ ಇಂಗ್ಲೆಂಡ್ ಬೌಲರ್ ಗಳ ಬೆವರಿಳಿಸಿದರು. 90 ಎಸೆತಗಳಲ್ಲಿ 7 ಸಿಕ್ಸರ್ ಹಾಗೂ 12 ಬೌಂಡರಿಗಳೊಂದಿಗೆ 119 ರನ್ ಗಳಿಸಿದರು. ಅಲ್ಲದೇ ಏಕದಿನ ಪಂದ್ಯಗಳಲ್ಲಿ 32ನೇ ಶತಕ ಬಾರಿಸುವ ಮೂಲಕ ಅತಿ ಹೆಚ್ಚು ಶತಕ ಗಳಿಸಿದ ಭಾರತದ ಬ್ಯಾಟ್ಸ್‌ಮನ್‌ಗಳ ಪಟ್ಟಿಯಲ್ಲಿ ರಾಹುಲ್ ದ್ರಾವಿಡ್ ಅವರನ್ನು ಹಿಂದಿಕ್ಕಿದರು. ಪ್ರಸ್ತುತ ಮೂರನೇ ಸ್ಥಾನದಲ್ಲಿರುವ ರೋಹಿತ್, ವಿರಾಟ್ ಕೊಹ್ಲಿ (81) ಮತ್ತು ಸಚಿನ್ ತೆಂಡೂಲ್ಕರ್ (100) ನಂತರದ ಸ್ಥಾನದಲ್ಲಿದ್ದಾರೆ. ಈ ಪಂದ್ಯದಲ್ಲಿ ರೋಹಿತ್ ಶರ್ಮಾ ಒಟ್ಟು 7 ಸಿಕ್ಸರ್ ಸಿಡಿಸಿದ್ದು, ಆ ಮೂಲಕ ಏಕದಿನ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ಬ್ಯಾಟ್ಸ್‌ಮನ್‌ಗಳ ಪಟ್ಟಿಯಲ್ಲಿ ರೋಹಿತ್ ಕ್ರಿಸ್ ಗೇಲ್ ಅವರನ್ನೂ ಹಿಂದಿಕ್ಕಿದ್ದಾರೆ.

ಕೊಹ್ಲಿ ಮತ್ತೆ ವೈಫಲ್ಯ: ಇನ್ನೂ ಶುಭ್ಮನ್ ಗಿಲ್ 52 ಎಸೆತಗಳಲ್ಲಿ 4 ಬೌಂಡರಿ ಮತ್ತು 1 ಸಿಕ್ಸರ್ ಗಳೊಂದಿಗೆ 60 ರನ್ ಗಳಿಸಿದರು. ಆದರೆ ವಿರಾಟ್ ಕೊಹ್ಲಿ ಮತ್ತೆ ವೈಫಲ್ಯ ಅನುಭವಿಸುವ ಮೂಲಕ ಅವರ ಅಭಿಮಾನಿಗಳಿಗೆ ನಿರಾಸೆ ಮೂಡಿಸಿದರು. 8 ಎಸೆತ ಎದುರಿಸಿದ ಕೊಹ್ಲಿ ಕೇವಲ 1 ಬೌಂಡರಿಗಳೊಂದಿಗೆ 5 ರನ್ ಗಳಿಸಿ ಔಟ್ ಆದರು. ನಂತರ ಬಂದ ಶ್ರೇಯಸ್ ಅಯ್ಯರ್ 44, ಅಕ್ಸರ್ ಪಟೇಲ್ ಅಜೇಯ 41 ರನ್ ಗಳಿಸಿ, ತಂಡದ ಮೊತ್ತವನ್ನು ಹಿಗ್ಗಿಸಿದರು. ಶ್ರೇಯಸ್ ಪಟೇಲ್ ರನ್ ಔಟ್ ಆದ ಬಳಿಕ ಕೆಎಲ್ ರಾಹುಲ್ ಕೇವಲ 10 ರನ್ ಗಳಿಸಿ ಕ್ಯಾಚ್ ನೀಡಿ ನಿರ್ಗಮಿಸಿದರು. ಬಳಿಕ ಹಾರ್ದಿಕ್ ಪಾಂಡ್ಯ 10, ರವೀಂದ್ರ ಜಡೇಜ ಅಜೇ. 11 ರನ್ ಗಳಿಸುವುದರೊಂದಿಗೆ ಭಾರತ ಇನ್ನೂ 33 ಎಸೆತ ಬಾಕಿ ಇರುವಾಗಲೇ 44.3 ಓವರ್ ಗಳಲ್ಲಿ 6 ವಿಕೆಟ್ ನಷ್ಟಕ್ಕೆ 308 ರನ್ ಗಳಿಸುವ ಮೂಲಕ 2ನೇ ಏಕದಿನ ಪಂದ್ಯವನ್ನು ಗೆದ್ದುಕೊಂಡಿತು. ಆ ಮೂಲಕ ಮೂರು ಪಂದ್ಯಗಳ ಸರಣಿಯನ್ನು ಗೆದ್ದುಕೊಂಡಿತು.

# ಬೆಂಬಲ ಬೆಲೆ ಜತೆಗೆ ಪ್ರೋತ್ಸಾಹ ಧನ

**ಬೆಂಗಳೂರು:** ಕೇಂದ್ರ ಸರ್ಕಾರದ ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹ ಧನ ನೀಡಲಾಗುವುದು ಎಂಬ ಭರವಸೆಗೆ ಇದೀಗ ಸಿಎಂ ಸಿದ್ದರಾಮಯ್ಯ ಅನುಮೋದನೆ ನೀಡಿದ್ದು, ಈ ಮೂಲಕ ಸರ್ಕಾರ ತೊಗರಿ ಬೆಳೆಗಾರರಿಗೆ ಸಂತಸದ ಸುದ್ದಿ ನೀಡಿದೆ.

2024-25ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆಯ ಜೊತೆಗೆ ರಾಜ್ಯದ ಸರ್ಕಾರದಿಂದ ಪ್ರೋತಾಹ ಧನ ನೀಡಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅವರು ಕಳೆದ ಜನವರಿ ತಿಂಗಳಲ್ಲಿ ಭರವಸೆ ನೀಡಿದ್ದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ತೊಗರಿ ಖರೀದಿಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಬೆಂಬಲ ಬೆಲೆ ಪ್ರತಿ ಕ್ವಿಂಟಲ್‌ಗೆ 7,550 ರೂ. ಜೊತೆಗೆ ರಾಜ್ಯ ಸರ್ಕಾರದ ಪ್ರೋತಾಹ ಧನ 450 ರೂ. ಅಂದರೆ ಪ್ರತಿ ಕ್ವಿಂಟಾಲ್‌ಗೆ ಒಟ್ಟು 8,000 ರೂ. ನೀಡುವುದಾಗಿ ಭರವಸೆ ನೀಡಿದ್ದರು.

ಪ್ರತಿ ಕ್ವಿಂಟಾಲ್ ತೊಗರಿಗೆ ರೂ.7,550 ಕನಿಷ್ಠ ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರದಿಂದ ರೂ.450 ಪ್ರೋತ್ಸಾಹಧನಘೋಷಣೆಮಾಡಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಅನುಮೋದನೆ ಕೂಡ ದೊರೆತಿದ್ದು ನಾಡಿನ ತೊಗರಿ ಬೆಳೆಗಾರರಿಗೆ ಇದರಿಂದ ಹೆಚ್ಚಿನ ಅನುಕೂಲವಾಗಲಿದೆ. ಸದ್ಯ ಈ ಸಂಬಂಧ ಮುಖ್ಯಮಂತ್ರಿಗಳು ಅನುಮೋದನೆ ನೀಡಿದ್ದು, ಆರ್ಥಿಕ ಇಲಾಖೆಯೂ ಸಹ ಸಹಮತಿ ನೀಡಿದೆ. ಈ ಕುರಿತು ಸಂಬಂಧಿಸಿದ ಇಲಾಖೆಗೆ ತಕ್ಷಣ ಅನುಷ್ಠಾನಗೊಳಿಸಲು ಸೂಕ್ತ ನಿರ್ದೇಶನ ನೀಡಲಾಗಿದೆ.



ರಾಜ್ಯದ ಪ್ರಮುಖ ತೊಗರಿ ಬೆಳೆಯುವ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ವಿಜಯಪುರ, ಕೊಪ್ಪಳ, ಬಳ್ಳಾರಿ, ವಿಜಯನಗರ, ಬಾಗಲಕೋಟೆ, ಬೆಳಗಾವಿ, ಚಿತ್ರದುರ್ಗ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಭಾಗದಲ್ಲಿ ಅಂದಾಜು 330 ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ರೈತರು ತಮ್ಮ ಹತ್ತಿರದ PACS / FPO / TAPCMS ಗಳಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಂಡು ಬೆಂಬಲ ಬೆಲೆ ಯೋಜನೆ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

# ರಕ್ತ ಸೋರುತ್ತಲೇ ಹೊರನಡೆದ ರಚಿನ್ ರವೀಂದ್ರ

ಇದೇ ಫೆಬ್ರವರಿ 19ರಿಂದ ಐಸಿಸಿ ಚಾಂಪಿಯನ್ಸ್ ಟ್ರೋಫಿ ನಡೆಯಲಿರುವ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಕಿವೀಸ್ ಸ್ಟಾರ್ ಆಟಗಾರ ಬೆಂಗಳೂರು ಮೂಲದ ರಚಿನ್ ರವೀಂದ್ರ ಹಣೆಗೆ ಚೆಂಡು ಬಡಿದು ಗಾಯಗೊಂಡಿದ್ದಾರೆ. ಈ ಬೆನ್ನಲ್ಲೇ ಪಾಕಿಸ್ತಾನದ ಕ್ರಿಕೆಟ್ ಅಂಗಳದಲ್ಲಿ ಕ್ರಿಕೆಟ್ ಫ್ಲಡ್ ಲೈಟ್ ವ್ಯವಸ್ಥೆ ಸರಿಯಾಗಿ ಕೆಲಸ ಮಾಡ್ತಿದೆಯೇ? ಎನ್ನುವ ಪ್ರಶ್ನೆಯೂ ಎದ್ದಿದೆ.

ಚಾಂಪಿಯನ್ಸ್ ಟ್ರೋಫಿಗೂ ಮುನ್ನ ಪಾಕಿಸ್ತಾನ ಕ್ರಿಕೆಟ್ ಬೋರ್ಡ್ ತನ್ನ ವ್ಯವಸ್ಥೆ ಎಲ್ಲವೂ ಸರಿಯಾಗಿದೆಯೆಂದು ಜಗತ್ತಿನೆದುರು ಖಾತ್ರಿ ಪಡಿಸಲು ನ್ಯೂಜಿಲೆಂಡ್, ದಕ್ಷಿಣ ಆಫ್ರಿಕಾ ತಂಡದೊಂದಿಗೆ ತ್ರಿಕೋನ ಸರಣಿ ಏರ್ಪಡಿಸಿದೆ. ಪಾಕಿಸ್ತಾನದಲ್ಲಿ ಆಡುವುದಿಲ್ಲ ಎಂದು ಪಟ್ಟು ಹಿಡಿದು ತನ್ನ ಪಂದ್ಯಗಳನ್ನು ದುಬೈಗೆ ಸ್ಥಳಾಂತರ ಮಾಡಿಸಿಕೊಂಡ ಭಾರತಕ್ಕೆ ಛಾಟಿಯೇಟು ನೀಡುವ ಉದ್ದೇಶವೂ ಈ ಗಡಿಬಿಡಿಯ ಟೂರ್ನಿಯಲ್ಲಿ ಇತ್ತು ಎಂಬುದು ಸ್ಪಷ್ಟ. ಆದ್ರೆ ಎಲ್ಲವೂ ಸುಸೂತ್ರವಾಗಿ ಸಾಗುತ್ತಿದೆ ಎನ್ನುವಾಗಲೇ ಆ ಘಟನೆ ನಡೆದು ಹೋಗಿದೆ. ಪಿಸಿಬಿ ಅರೆಬರೆ ಕಾರ್ಯಗಳ ಕಡೆಗೆ ಕೈ ತೋರಿಸುವಂತೆ ಆಗಿದೆ.

**ಲಾಹೋರ್ ಮೈದಾನದಲ್ಲಿ ಆಗಿದ್ದೇನು?:** ಪಾಕಿಸ್ತಾನದ ಇನ್ನಿಂಗ್ಸ್‌ನ 38ನೇ ಓವರ್ ನಲ್ಲಿ ರಚಿನ್ ರವೀಂದ್ರ ಅವರು ಸ್ಕ್ವೇರ್ ಲೆಗ್‌ನಲ್ಲಿ ಫೀಲ್ಡಿಂಗ್ ಮಾಡುತ್ತಿದ್ದರು. ಈ ವೇಳೆ ಪಾಕಿಸ್ತಾನದ ಖುಷ್ದಿಲ್ ಶಾ ಹೊಡೆದ ಸ್ವೀಪ್ ಶಾಟ್ ನೇರವಾಗಿ ರಚಿನ್ ರವೀಂದ್ರ ಅವರ ಕಡೆಗೆ ಹೋಗಿತ್ತು. ಮಾಮೂಲಿ ಫೀಲ್ಡರ್ ಅಲ್ಲಿದ್ದಿದ್ದರೂ ಕ್ಲೀಯರ್ ಕ್ಯಾಚ್ ಆಗುತ್ತಿತ್ತು. ಹಾಗೆಯೇ ಗುಡ್ ಫೀಲ್ಡರ್ ಕೂಡ ಆಗಿರುವ ರಚಿನ್ ಕ್ಯಾಚ್ ಕ್ಲಿಯರ್ ಮಾಡುತ್ತಾರೆ ಎಂಬ ವಿಶ್ವಾಸ ಕಿವೀಸ್ ಆಟಗಾರರಿಗೂ ಇತ್ತು. ಆದ್ರೆ ಅಲ್ಲಿ ಆಗಿದ್ದೇ ಬೇರೆ.



ಕ್ಯಾಚ್ ಆಗಿ ಕೈಸೇರಬೇಕಾದ ಚೆಂಡು ನೇರವಾಗಿ ಹೋಗಿ ರಚಿನ್ ರವೀಂದ್ರ ಅವರ ಹಣೆವಗೆ ಬಡಿಯಿತು. ಅವರಿಗೆ ಚೆಂಡು ಬಂದ ದಾರಿಯನ್ನು ಕೊಂಚವೂ ಅಂದಾಜಿಸಲು ಸಾಧ್ಯವಾಗಿಲ್ಲ. ಚೆಂಡು ಹಣೆಗೆ ಬಡಿಯುತ್ತಿದ್ದಂತೆ ಅಲ್ಲಿಯೇ ರಚಿನ್ ಕುಸಿದು ಬಿದ್ದಿದ್ದಾರೆ. ಏನಾಗುತ್ತಿದೆ ಎಂದು ಎಲ್ಲರೂ ಗಾಬರಿಯಾಗಬೇಕಾದರೆ ಅವರ ಮುಖದಿಂದ ರಕ್ತ ಸೋರುತ್ತಿತ್ತು. ತಕ್ಷಣವೇ ಮೈದಾನಕ್ಕೆ ಆಗಮಿಸಿದ ನ್ಯೂಜಿಲೆಂಡ್ ತಂಡದ ಫಿಸಿಯೋ ಮತ್ತು ಮೈದಾನದಲ್ಲಿದ್ದ ರಕ್ಷಣಾ ಸಿಬ್ಬಂದಿ ಅವರ ಮುಖವನ್ನು ಟವೆಲ್‌ನಿಂದ ಮುಚ್ಚಿಕೊಂಡು ಮೈದಾನದಿಂದ ಹೊರ ನಡೆದರು.

ರಚಿನ್ ರವೀಂದ್ರ ಅವರ ಹಣೆಯಿಂದ ರಕ್ತ ಸೋರುತ್ತಿದ್ದುದು ಸ್ಪಷ್ಟವಾಗಿ ಗೋಚರಿಸುತ್ತಿತ್ತು. ಇದೀಗ ಅವರ ಗಾಯದ ಪ್ರಮಾಣ ಏನು ಎಂದು ತಿಳಿದು ಬಂದಿಲ್ಲ. ಗಾಯದ ತೀವ್ರತೆ ನೋಡಿದರೆ ಅವರು ಮುಂಬರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಆಡುವುದೂ ಅನುಮಾನ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ನ್ಯೂಜಿಲೆಂಡ್ ತಂಡದ ಕಡೆಯಿಂದ ಯಾವುದೇ ಅಧಿಕೃತ ಹೇಳಿಕೆ ಈವರೆಗೂ ಹೊರಬಿದ್ದಿಲ್ಲ.

**ಪಾಕ್ ಕ್ರೀಡಾಂಗಣದ ವಿರುದ್ಧ ಟೀಕೆ:** ರಚಿನ್ ರವೀಂದ್ರರು ಗಾಯಗೊಳ್ಳಲು ಗಡಾಫಿ ಸ್ಟೇಡಿಯಂನಲ್ಲಿ ಅಳವಡಿಸಲಾದ ಕಳಪೆ ಗುಣಮಟ್ಟದ ಫ್ಲಡ್ ಲೈಟ್ ವ್ಯವಸ್ಥೆಯೇ ಕಾರಣ ಎಂಬ ಟೀಕೆಯೂ ವ್ಯಕ್ತವಾಗಿದೆ. ಲೈಟಿಂಗ್ಸ್ ಸಮಸ್ಯೆಯಿಂದಾಗಿಯೇ ಚೆಂಡನ್ನು ಗುರುತಿಸಲು ಸಾಧ್ಯವಾಗಲಿಲ್ಲ ಎಂದು ಕೆಲವರು ಹೇಳಿದ್ದಾರೆ.

## ಬೆಂಗಳೂರು ತಲುಪಿದ 2ನೇ ಡ್ರೈವರ್‌ಲೆಸ್ ಮೆಟ್ರೋ

**ಬೆಂಗಳೂರು:** ನಮ್ಮ ಮೆಟ್ರೋ ಪ್ರಯಾಣಿಕರಿಗೆ ಇದೀಗ ಮತ್ತೊಂದು ಗುಡ್ ನ್ಯೂಸ್ ನೀಡಿದ್ದು, ಎರಡನೇ ಚಾಲಕ ರಹಿತ ಮೆಟ್ರೋ ಬೆಂಗಳೂರು ತಲುಪಿದೆ. ಟಿಟಾಗರ್‌ದಿಂದ 1,900 ಕಿ.ಮೀ ದೂರದಿಂದ ಸಂಚರಿಸಿ ಭಾನುವಾರ ಬೆಳಿಗ್ಗೆ 8:30ರ ಸುಮಾರಿಗೆ ಎರಡನೇ ಚಾಲಕ ರಹಿತ ಮೆಟ್ರೋ ಬೆಂಗಳೂರು ಹೆಬ್ಬಗೋಡಿ ಡಿಪೋಗೆ ತಲುಪಿದೆ. ಸಂವಹನ ಆಧಾರಿತ ರೈಲು ಇದಾಗಿದ್ದು, ಯೆಲ್ಲೋ ಲೈನ್‌ನಲ್ಲಿ ಚಾಲಕ ರಹಿತ ಮೆಟ್ರೋದ ವಾಣಿಜ್ಯ ಕಾರ್ಯಚರಣೆ ಆರಂಭಿಸಲು ಬಳಸಲಾಗುತ್ತದೆ. ಇದಕ್ಕಾಗಿ ಸದ್ಯ ಕನಿಷ್ಟ 5 ಚಾಲಕ ರಹಿತ ಮೆಟ್ರೋಗಳ ಅವಶ್ಯಕತೆಯಿದ್ದು, ಇಂದು 2ನೇ ಮೆಟ್ರೋ ನಗರಕ್ಕೆ ಬಂದು ತಲುಪಿದೆ. ಇದಕ್ಕೂ ಮುನ್ನ ಕೆಲ ತಿಂಗಳ ಹಿಂದೆ ಮೊದಲ ಚಾಲಕ ರಹಿತ ಬೆಂಗಳೂರಿಗೆ ಬಂದಾಗಿದೆ. ಆರ್‌ವಿ ರಸ್ತೆಯಿಂದ ಬೊಮ್ಮಸಂದ್ರದವರೆಗೂ ಕಾರ್ಯನಿರ್ವಹಿಸಲಿರುವ ಯೆಲ್ಲೋ ಲೈನ್ ಮೆಟ್ರೋ ಒಟ್ಟು 19.15 ಕಿ.ಮೀ ಚಲಿಸಲಿದೆ. ಕಳೆದ ನಾಲ್ಕು ವರ್ಷದಿಂದ ಯೆಲ್ಲೋ ಲೈನ್‌ಗಾಗಿ ಜನ ಕಾಯುತ್ತಿದ್ದು, ಇದರಿಂದ ಐಟಿಬಿಟಿ ಉದ್ಯೋಗಿಗಳಿಗೆ ಅನುಕೂಲವಾಗಲಿದೆ.



## ಕಾಂಗ್ರೆಸ್‌ನಿಂದ 50 ಕೋಟಿಗೂ ಅಧಿಕ ಮೌಲ್ಯದ ವಿವಾದಿತ ಜಾಗ ಕಬ್ಜಾ: ಬಿಜೆಪಿ ಆರೋಪ



**ಹುಬ್ಬಳ್ಳಿ:** ನಗರದಲ್ಲಿ ವಿವಾದಿತ ಜಾಗಕ್ಕೆ ಸಂಬಂಧಿಸಿದಂತೆ ರಾಜಕೀಯ ಜಟಾಪಟಿ ಜೋರಾಗಿದೆ. ಹುಬ್ಬಳ್ಳಿಯ ಹೃದಯ ಭಾಗದಲ್ಲಿರುವ 50 ಕೋಟಿಗೂ ಅಧಿಕ ಮೌಲ್ಯದ ಜಾಗವನ್ನ ಕಾಂಗ್ರೆಸ್ ಕಬ್ಜಾ ಮಾಡಿಕೊಂಡಿದೆ ಎಂದು ಕೈ ಮುಖಂಡರು ಆರೋಪಿಸಿದ್ದಾರೆ. ಕಾಂಗ್ರೆಸ್ ಮುಖಂಡರು ವಿವಾದಿತ ಜಾಗದಲ್ಲಿ ಪಕ್ಷದ ಕಚೇರಿ ಮಾಡಲು ಕಬ್ಜಾ ಮಾಡಿಕೊಂಡಿದ್ದಾರೆ. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಬೋರ್ಡ್ ಹಾಕಿ ಫೋಟೋ ಇಟ್ಟು ಪೂಜೆ ಮಾಡಿದ್ದಾರೆ. ಅದಕ್ಕಾಗಿ ಇತ್ತೀಚೆಗೆ ಪಹಣಿಯಲ್ಲಿ ಕಾಂಗ್ರೆಸ್ ಪಕ್ಷದ ಹೆಸರನ್ನು ನಮೂದಿಸಿಕೊಂಡಿದ್ದಾರೆ ಎಂಬುದಾಗಿಯೂ ಬಿಜೆಪಿ ಮುಖಂಡರು ಆರೋಪಿಸಿದ್ದಾರೆ. ಕಬ್ಜಾ ಮಾಡಿಕೊಂಡ ಸ್ಥಳಕ್ಕೆ ಜಿಲ್ಲಾಧ್ಯಕ್ಷ ಹಲ್ತಾಫ್ ಹಳ್ಳೂರ ನೇತೃತ್ವದಲ್ಲಿ ರಾತ್ರೋ ರಾತ್ರಿ ರೆಡಿಮೇಡ್ ಕಾಂಪೌಂಡ್ ನಿರ್ಮಾಣ ಮಾಡಿದ್ದಾರೆ ಎಂದು ಬಿಜೆಪಿ ಮುಖಂಡರು ತೀವ್ರ ವಾಗ್ದಾಳಿ ನಡೆಸಿದ್ದಾರೆ. ವಿವಾದಿತ ಜಾಗ ಈ ಮೊದಲು 1959 ರಲ್ಲಿ ಕಾಂಗ್ರೆಸ್ ಪಕ್ಷದ ಹೆಸರಿಗೆ ಸೇಲ್ ಡಿಡ್ ಆಗಿತ್ತು. ನಂತರ ಎಸ್.ಆರ್ ಬೊಮ್ಮಾಯಿ ಕಾಲದಲ್ಲಿ ಜೆಡಿ(ಯು) ಕಚೇರಿಯಾಗಿ ಮಾರ್ಪಾಡು ಆಗಿತ್ತು. ಇದೀಗ ಕಾಂಗ್ರೆಸ್ ಮತ್ತೆ ತಮ್ಮ ತೆಕ್ಕೆಗೆ ತೆಗೆದುಕೊಳ್ಳೋದಕ್ಕೆ ಮುಂದಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com